ಸಂಪುಟ: 11 ಸಂಚಿಕೆ: 177 ಪುಟ: 4+2 ಬೆಲೆ : 3.00 ಸೋಮವಾರ, ಆಗಸ್ಟ್ 17, 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್ ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 177 Pages : 4+2 Rate : 3.00 Monday, August 17, 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2020-22

ವಿಜಯ ಸಾಕ್ಷಿ ದಿನಪತ್ರಿಕೆ ಈಗ ಆನ್ ಲೈನ್ ನಲ್ಲಿಯೂ ಲಭ್ಯ. ನಿಮ್ಮ ನೆಚ್ಚಿನ ಪತ್ರಿಕೆಯನ್ನು ಓದಲು www.epaper.Vijayasakshi.com ಜಾಲತಾಣಕ್ಕೆ ಭೇಟಿ ನೀಡಿ. ಕ್ಷಣ ಕ್ಷಣದ ಸುದ್ದಿಗಳಿಗಾಗಿ www.Vijayasakshi.com ವೀಕ್ಷಿಸಿ.

ರಾಜ್ಯದಲ್ಲೇ ಮೊದಲ ಟ್ರಾನ್ಸ್‌ಪ್ಲಾಂಟ್ ಗೇಮ್ಸ್ | ಅಂಗಾಂಗ ದಾನ ಜಾಗೃತಿಯಲ್ಲಿ ಗದಗ ಪ್ರಥಮ: ಎಚ್.ಕೆ. ಪಾಟೀಲ

# ಕಸಿ ಪಡೆದವರ ಎರಡನೇ ಇನ್ನಿಂಗ್ಸ್



**ವಿಜಯಸಾಕ್ಷಿ ಸುದ್ದಿ, ಗದಗ**

ಅಂಗಾಂಗ ದಾನಿಗಳು ಹಾಗೂ ಅಂಗಾಂಗ ಸ್ವೀಕರಿಸಿದವರು ಎಲ್ಲರಂತೆ ಸಾಮಾನ್ಯ ಮತ್ತು ಸಕ್ರಿಯ ಜೀವನ ನಡೆಸಬಹುದು ಎಂಬ ಆತ್ಮವಿಶ್ವಾಸ ಮೂಡಿಸುವಲ್ಲಿ ಇಂತಹ ಕ್ರೀಡಾಕೂಟಗಳು ಅತ್ಯಂತ ಅವಶ್ಯಕ ಎಂದು ಶಾಸಕ ಎಚ್.ಕೆ. ಪಾಟೀಲ ಹೇಳಿದರು.

ನಗರದ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಭಾನುವಾರ ಸಂಕಲ್ಪ ಕಿಡ್ನಿಕೇರ್ ಫೌಂಡೇಶನ್ ಹಾಗೂ ಕೆ.ಎಚ್. ಪಾಟೀಲ ಕಿಡ್ನಿ ಕೇರ್ ಸಹಯೋಗದಲ್ಲಿ ಆಯೋಜಿಸಿದ್ದ ರಾಜ್ಯದಲ್ಲೇ ಮೊದಲ ಗದಗ ಟ್ರಾನ್ಸ್‌ಪ್ಲಾಂಟ್ ಗೇಮ್ಸ್-2026 ಕ್ರೀಡಾಕೂಟ ಉದ್ಘಾಟಿಸಿ ಅವರು ಮಾತನಾಡಿದರು.

ಗದಗ ಚಿಕ್ಕ ಜಿಲ್ಲೆಯಾದರೂ ಅಂಗಾಂಗ ದಾನದ ಕುರಿತು ಜಾಗೃತಿ ಮೂಡಿಸುವಲ್ಲಿ ದೊಡ್ಡ ಸಾಧನೆ ಮಾಡಿದೆ. ಜಿಲ್ಲೆಯಲ್ಲಿ ಇದುವರೆಗೆ 6,281 ಜನರು ಅಂಗಾಂಗ ದಾನಕ್ಕೆ ನೋಂದಣಿ ಮಾಡಿಕೊಂಡಿದ್ದು, ಒಟ್ಟಾರೆ ನೋಂದಣಿಯಲ್ಲಿ ರಾಜ್ಯದಲ್ಲಿ ಮೂರನೇ ಸ್ಥಾನದಲ್ಲಿದೆ. ಆದರೆ ಜನಸಂಖ್ಯೆಗೆ ಹೋಲಿಸಿದರೆ ಗದಗ ಇಡೀ ರಾಜ್ಯದಲ್ಲೇ ಮೊದಲ ಸ್ಥಾನದಲ್ಲಿದೆ ಎಂದು ಎಚ್.ಕೆ. ಪಾಟೀಲ ಹೆಮ್ಮೆ ವ್ಯಕ್ತಪಡಿಸಿದರು.

ಅಂಗಾಂಗ ದಾನಿಗಳು ಮತ್ತು ಸ್ವೀಕರಿಸಿದವರು ಸಮಾಜದ ಎಲ್ಲರಂತೆ ಸಾಮಾನ್ಯ ಹಾಗೂ ಸಕ್ರಿಯ ಜೀವನ ನಡೆಸಬಹುದು ಎಂಬ ವಿಶ್ವಾಸ ಮೂಡಿಸುವುದು ಅಗತ್ಯ. ಈ ನಿಟ್ಟಿನಲ್ಲಿ ಟ್ರಾನ್ಸ್‌ಪ್ಲಾಂಟ್ ಗೇಮ್ಸ್‌ನಂತಹ ಕ್ರೀಡಾಕೂಟಗಳು ಮಹತ್ವದ ಪಾತ್ರ ವಹಿಸುತ್ತವೆ ಎಂದು ಅವರು ಹೇಳಿದರು.

ಹುಲಕೋಟಿಯ ಆರ್‌ಎಂಎಸ್ ಆಶ್ರಯದಲ್ಲಿ 12 ಉಚಿತ ಕಿಡ್ನಿ ಕಸಿ ಹಾಗೂ 100 ಉಚಿತ ಮೊಣಕಾಲು ಶಸ್ತ್ರಚಿಕಿತ್ಸೆ ನಡೆಸುವ ಸಂಕಲ್ಪ ಮಾಡಲಾಗಿದೆ. ಬರುವ ಮಾರ್ಚ್ 16ರೊಳಗೆ ಎಲ್ಲ ಉಚಿತ ಶಸ್ತ್ರಚಿಕಿತ್ಸೆಗಳನ್ನು ಪೂರ್ಣಗೊಳಿಸುವ ಗುರಿಯಿದೆ ಎಂದು ತಿಳಿಸಿದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಡಾ. ಅವಿನಾಶ ಓದುಗೌಡರ, ಟ್ರಾನ್ಸ್‌ಪ್ಲಾಂಟ್ ಗೇಮ್ಸ್ ಕೇವಲ ಕ್ರೀಡಾಕೂಟವಲ್ಲ, ಕಸಿ ಪಡೆದವರ ಎರಡನೇ ಬದುಕಿನ ಶುಭಾರಂಭ ಎಂದರು.

ಪ್ರತಿಯೊಂದು ಕಿಡ್ನಿ ಕಸಿಯೂ ರೋಗಿಗೆ ಹೊಸ ಜೀವನ ನೀಡುತ್ತದೆ. ಒಬ್ಬ ವ್ಯಕ್ತಿಯ ಅಂಗಾಂಗ ದಾನವು ಎಂಟು ಜನರ ಹೊಸ ಬದುಕಿಗೆ ಮುನ್ನುಡಿ ಬರೆಯಬಲ್ಲದು. 2024ರವರೆಗೆ ಗದಗದಲ್ಲಿ ಅಂಗಾಂಗ ದಾನದ ಕುರಿತು ಮಾತುಕತೆಗಳೇ ಇರಲಿಲ್ಲ. ಇಂದು ಗದಗ ಅಂಗಾಂಗ ದಾನದಲ್ಲಿ ಮುಂಚೂಣಿಯಲ್ಲಿದೆ ಎಂದು ಹೇಳಿದರು.

ಡಾ. ಅರುಣಕುಮಾರ್ ಮಾತನಾಡಿ, ಕಳೆದ ವರ್ಷ ರಾಜ್ಯದಲ್ಲಿ ಮೆದುಳು ನಿಷ್ಕ್ರಿಯಗೊಂಡ 198 ಜನರಿಂದ 500ಕ್ಕೂ ಹೆಚ್ಚು ರೋಗಿಗಳಿಗೆ ವಿವಿಧ ಅಂಗಾಂಗಗಳನ್ನು ದಾನ ಮಾಡಲಾಗಿದೆ. ರಾಜ್ಯದಲ್ಲಿ 95 ಅಂಗಾಂಗ ಕಸಿ ಕೇಂದ್ರಗಳಿದ್ದು, ಗ್ರಾಮೀಣ ಭಾಗದಲ್ಲಿ ಕಿಡ್ನಿ ಕಸಿ ಮಾಡುತ್ತಿರುವ ಏಕೈಕ ಆಸ್ಪತ್ರೆ ಕೆ.ಎಚ್. ಪಾಟೀಲ ಆಸ್ಪತ್ರೆಯಾಗಿದೆ. ಅಂಗಾಂಗ ದಾನಿಗಳಲ್ಲಿ ಶೇ.75ರಷ್ಟು ಮಹಿಳೆಯರಿದ್ದಾರೆ ಎಂದು ತಿಳಿಸಿದರು.

### 55 ಸ್ಪರ್ಧಿಗಳ ಕ್ರೀಡಾಸ್ಫೂರ್ತಿ

ಅಂಗಾಂಗ ದಾನಿಗಳು ಹಾಗೂ ಸ್ವೀಕರಿಸಿದವರು ಸೇರಿದಂತೆ 55 ಸ್ಪರ್ಧಿಗಳು ವಿವಿಧ ಕ್ರೀಡಾ ಸ್ಪರ್ಧೆಗಳಲ್ಲಿ ಉತ್ಸಾಹದಿಂದ ಪಾಲ್ಗೊಂಡರು. ಅಂಗಾಂಗ ದಾನದ ಕುರಿತು ಜಾಗೃತಿ ಮೂಡಿಸುವ ಉದ್ದೇಶದಿಂದ ಶಾಲಾ ವಿದ್ಯಾರ್ಥಿಗಳಿಗೆ ಆಯೋಜಿಸಿದ್ದ ವಿವಿಧ ಸ್ಪರ್ಧೆಗಳ ವಿಜೇತರಿಗೆ ಇದೇ ವೇಳೆ ಬಹುಮಾನ ವಿತರಿಸಲಾಯಿತು.

ಸಮಾರಂಭದಲ್ಲಿ ಡಾ. ನಾಗನೂರ, ಡಾ. ಆನಂದ ಪೋತ್ನೀಸ್, ಡಾ. ಪ್ಯಾರಅಲಿ ನೂರಾನಿ, ಡಾ. ಅಜಯ ಶರ್ಮಾ, ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಆರ್.ಎಸ್. ಬುರಡಿ, ಪ್ರಭು ಬುರಬುರೆ, ಅಶೋಕ ಮಂದಾಲಿ, ಡಾ. ಶರಣ್ ಆಲೂರ ಹಾಗೂ ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಶರಣು ಗೋಗೇರಿ ಸೇರಿದಂತೆ ಪ್ರಮುಖರು ಉಪಸ್ಥಿತರಿದ್ದರು.

---

ಜಕ್ಕಲಿಯಲ್ಲಿ ನಾಗರ ಪಂಚಮಿ ಸಂಭ್ರಮ; ಮಳೆಬೆಳೆ ಸಮೃದ್ಧಿ, ಕುಟುಂಬದ ಆರೋಗ್ಯನೆಮ್ಮದಿಗಾಗಿ ಪ್ರಾರ್ಥನೆ

## ನಾಗಪ್ಪನಿಗೆ ಹಾಲೆರೆದು... ಮನೆಯವರ ಪಾಲು ನೆನೆದ ನಾರಿಯರು!



**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ನಾಗರ ಪಂಚಮಿ ಅಂದ್ರೆ ಹಳ್ಳಿ ಹೆಣ್ಮಕ್ಕಳಿಗೆ ಬರೀ ಹಬ್ಬ ಅಲ್ಲ... ಅದು ತವರುಮನೆಯ ನೆನಪು, ಕುಟುಂಬದ ಮೇಲಿನ ಕಾಳಜಿ, ಹಿರಿಯರ ಸ್ಮರಣೆ ಹಾಗೂ ತಲೆತಲಾಂತರದಿಂದ ಬಂದಿರುವ ಗ್ರಾಮೀಣ ಸಂಪ್ರದಾಯಗಳ ಸಮ್ಮಿಲನ. ಜಕ್ಕಲಿ ಗ್ರಾಮದಲ್ಲಿ ರವಿವಾರ ನಡೆದ ನಾಗರ ಪಂಚಮಿ ಆಚರಣೆಯಲ್ಲೂ ಈ ಹಳ್ಳಿ ಸೊಗಡು ಮನಮೋಹಕವಾಗಿ ಅನಾವರಣಗೊಂಡಿತು.

ಬೆಳಿಗ್ಗೆಯಿಂದಲೇ ಗ್ರಾಮದ ಬಾಕಿಷ್ಟಪ್ಪ ಭಾವಿ ಮೇಲಿರುವ ನಾಗಮೂರ್ತಿ ಹಾಗೂ ಶ್ರೀ ಕಲ್ಲೇಶ್ವರ ದೇವಸ್ಥಾನದ ಮುಂದಿನ ನಾಗಮೂರ್ತಿಗಳ ಬಳಿ ಭಕ್ತರ ದಂಡೇ ಸೇರಿತ್ತು. ಬಣ್ಣಬಣ್ಣದ ಸೀರೆ ತೊಟ್ಟು, ತಲೆಯ ಮೇಲೆ ಹೂವು ಮುಡಿದು, ಕೈಯಲ್ಲಿ ಪೂಜಾ ಸಾಮಗ್ರಿ ಹಿಡಿದು ಬಂದ ಮಹಿಳೆಯರು ನಾಗಮೂರ್ತಿಗೆ ಹಾಲೆರೆದು, ಹೂವು, ಬೆಲ್ಲ, ಕೊಬ್ಬರಿ ಅರ್ಪಿಸಿ ಭಕ್ತಿಯಿಂದ ಪೂಜೆ ಸಲ್ಲಿಸಿದರು.

ಮಳೆ ಚೆನ್ನಾಗಿ ಸುರಿದು, ಹೊಲಗಳಲ್ಲಿ ಬೆಳೆ ಸಮೃದ್ಧಿಯಾಗಲಿ, ಕುಟುಂಬದ ಸದಸ್ಯರಿಗೆ ಆರೋಗ್ಯನೆಮ್ಮದಿ ದೊರೆಯಲಿ ಎಂದು ನಾಗದೇವರಲ್ಲಿ ಪ್ರಾರ್ಥಿಸಿದರು.

**ಅಪ್ಪನ ಪಾಲು... ಅಮ್ಮನ ಪಾಲು...ಮನೆಯವರನ್ನೆಲ್ಲ ನೆನೆದರು:** ಜಕ್ಕಲಿಯ ನಾಗರ ಪಂಚಮಿ ಆಚರಣೆಯ ವಿಶೇಷವೆಂದರೆ ಹಾಲು ಹಾಕುವ ವಿಶಿಷ್ಟ ಸಂಪ್ರದಾಯ. ಮನೆಯಿಂದ ತಂದ ಕೊಬ್ಬರಿ ಬಟ್ಟಲಿನಲ್ಲಿ ಬೆಲ್ಲದಚ್ಚು ಹಾಗೂ ಹಾಲು ಹಾಕಿಕೊಂಡು ನಾಗಪ್ಪನಿಗೆ ಅರ್ಪಿಸುವ ವೇಳೆ ಕುಟುಂಬದ ಪ್ರತಿಯೊಬ್ಬರನ್ನೂ ಹೆಸರಿಟ್ಟು ಸ್ಮರಿಸಲಾಯಿತು.

ದೇವರ ಪಾಲು, ದಿಂಡರ ಪಾಲು, ಗುರುಹಿರಿಯರ ಪಾಲು, ಅಪ್ಪನ ಪಾಲು, ಅಮ್ಮನ ಪಾಲು, ಅಣ್ಣನ ಪಾಲು, ತಮ್ಮನ ಪಾಲು, ಅಕ್ಕನ ಪಾಲು, ತಂಗಿಯ ಪಾಲು, ಮಾವನ ಪಾಲು, ಅಳಿಯನ ಪಾಲು, ಅತ್ತೆಯ ಪಾಲು, ಸೊಸೆಯ ಪಾಲು... ಎಂದು ಹೇಳುತ್ತಾ ಹಾಲಿನ ಪಾಲು ಅರ್ಪಿಸಿದರು.

ಒಬ್ಬೊಬ್ಬರ ಹೆಸರು ಹೇಳುತ್ತಾ ಹಾಲು ಅರ್ಪಿಸುವಾಗ, ನಮ್ಮ ಮನಿ ಮಂದಿ ಎಲ್ಲರೂ ಚೆನ್ನಾಗಿರಲಿ ಎಂಬ ಕಾಳಜಿ ಮಹಿಳೆಯರ ಮೊಗದಲ್ಲಿ ಎದ್ದು ಕಾಣುತ್ತಿತ್ತು. ಹೀಗಾಗಿ ನಾಗರ ಪಂಚಮಿ ಇಲ್ಲಿ ಕೇವಲ ನಾಗಪೂಜೆಯಾಗದೆ, ಕುಟುಂಬದ ಎಲ್ಲರನ್ನೂ ಒಂದೇ ಮನಸ್ಸಿನಿಂದ ನೆನೆಯುವ ಭಾವನಾತ್ಮಕ ಆಚರಣೆಯಾಗಿ ಕಂಡುಬಂತು.

**ಅಣ್ಣತಮ್ಮಂದಿರ ಒಳಿತಿಗಾಗಿ ಉಪವಾಸ:** ಕೆಲವು ಮಹಿಳೆಯರು ಅಣ್ಣತಮ್ಮಂದಿರ ಆಯುಷ್ಯ, ಆರೋಗ್ಯ ಮತ್ತು ಒಳಿತಿಗಾಗಿ ಉಪವಾಸ ಆಚರಿಸಿದರು. ನಾಗಪ್ಪನಿಗೆ ಪೂಜೆ ಸಲ್ಲಿಸಿ ಸಹೋದರರ ಕ್ಷೇಮಕ್ಕಾಗಿ ಪ್ರಾರ್ಥಿಸಿದರು. ಹೀಗೆ ಅಣ್ಣತಂಗಿ, ಅಕ್ಕತಮ್ಮನ ಬಾಂಧವ್ಯವನ್ನು ಗಟ್ಟಿಗೊಳಿಸುವ ಸಂಪ್ರದಾಯವೂ ಹಬ್ಬದಲ್ಲಿ ಜೀವಂತವಾಗಿತ್ತು. ನಾಗರ ಪಂಚಮಿಯ ಅಂಗವಾಗಿ ಮನೆಗಳಲ್ಲೂ ಹಬ್ಬದ ವಾತಾವರಣ ಮನೆಮಾಡಿತ್ತು. ಕುಚ್ಚುಕಡುಬು, ಅಳಿಟ್ಟು, ನೆನೆಸಿದ ಕಡಲೆಕಾಳು, ತೆಂಗಿನಕಾಯಿ ಸೇರಿದಂತೆ ವಿವಿಧ ಖಾದ್ಯಗಳನ್ನು ಸಿದ್ಧಪಡಿಸಲಾಗಿತ್ತು.

ಪೂಜೆ ಮುಗಿಸಿ ಮನೆಗೆ ಮರಳಿದ ಬಳಿಕ ಕುಟುಂಬದ ಸದಸ್ಯರೆಲ್ಲ ಒಟ್ಟಿಗೆ ಕುಳಿತು ಅಳಿಟ್ಟು ಉಂಡೆ, ಕಡ್ಲಿ ಉಂಡೆ, ಗುಳಿಗೆ ಉಂಡೆ, ಶೇಂಗಾ ಉಂಡೆ, ಎಳ್ಳುಂಡೆ ಸೇರಿದಂತೆ ವಿವಿಧ ಸಾಂಪ್ರದಾಯಿಕ ತಿಂಡಿಗಳನ್ನು ಸವಿದರು.

**ಜೋಕಾಲಿಯಲ್ಲಿ ಜೀಕಿದ ಮಕ್ಕಳು; ಬೊಲ್‌ಬುಗುರಿಯಲ್ಲಿ ಸಂಭ್ರಮ:** ಸಂಜೆಯಾಗುತ್ತಿದ್ದಂತೆ ಹಬ್ಬದ ಸಂಭ್ರಮ ಮತ್ತಷ್ಟು ಹೆಚ್ಚಾಯಿತು. ಕೆಲವರು ಹಂಗನೂಲು ಕಟ್ಟಿಕೊಂಡರೆ, ಮಹಿಳೆಯರು ಮತ್ತು ಮಕ್ಕಳು ಜೋಕಾಲಿಯತ್ತ ಹೆಜ್ಜೆ ಹಾಕಿದರು. ಬೇವಿನ ಮರಕ್ಕೆ ಕಟ್ಟಿದ್ದ ಜೋಕಾಲಿಯಲ್ಲಿ ಹದಿಹರೆಯದವರು ಜೀಕಿ ಸಂಭ್ರಮಿಸಿದರು.

ಮನೆಗಳಲ್ಲಿ ಕಟ್ಟಿದ್ದ ಜೋಕಾಲಿಯಲ್ಲಿ ಪುಟ್ಟ ಮಕ್ಕಳು ಆಟವಾಡಿದರು. ಹಿರಿಯರು ಒಣ ಕೊಬ್ಬರಿ ಬಟ್ಟಲಿಗೆ ದಾರ ಕಟ್ಟಿ ನೀಡಿದ ಬಳಿಕ ಮಕ್ಕಳು ಬೊಲ್‌ಬುಗುರಿ ಆಡುತ್ತಾ ಓಡಾಡಿದ್ದು ಹಬ್ಬದ ಸಡಗರಕ್ಕೆ ಮತ್ತಷ್ಟು ಮೆರುಗು ನೀಡಿತು.

### ಹಳ್ಳಿ ಬದುಕಿನ ಜೀವಂತ ಕೊಂಡಿ

ಮೊಬೈಲ್, ಟಿವಿ ಹಾಗೂ ಆಧುನಿಕ ಜೀವನಶೈಲಿಯ ಪ್ರಭಾವದಿಂದ ಗ್ರಾಮೀಣ ಬದುಕಿನ ಹಲವು ಆಚರಣೆಗಳು ನಿಧಾನವಾಗಿ ಮರೆಯಾಗುತ್ತಿರುವ ಕಾಲದಲ್ಲೂ ಜಕ್ಕಲಿಯಲ್ಲಿ ನಾಗರ ಪಂಚಮಿಯನ್ನು ಸಾಂಪ್ರದಾಯಿಕ ಸೊಗಡಿನೊಂದಿಗೆ ಆಚರಿಸಿರುವುದು ಗಮನ ಸೆಳೆಯಿತು. ನಾಗಪ್ಪನಿಗೆ ಹಾಲಿನ ಧಾರೆ ಅರ್ಪಿಸಿದ ಮಹಿಳೆಯರು, ಕುಟುಂಬದ ಪ್ರತಿಯೊಬ್ಬರ ಹೆಸರನ್ನೂ ನೆನೆದು ಪಾಲು ಹಾಕಿದ ಸಂಪ್ರದಾಯ, ಸಹೋದರರಿಗಾಗಿ ಉಪವಾಸ, ಮನೆಯಲ್ಲಿ ಸಿದ್ಧವಾದ ಸಾಂಪ್ರದಾಯಿಕ ತಿಂಡಿಗಳು ಹಾಗೂ ಜೋಕಾಲಿಯಲ್ಲಿ ಜೀಕಿದ ಮಕ್ಕಳು ಇವೆಲ್ಲವೂ ಸೇರಿ ಜಕ್ಕಲಿಯ ನಾಗರ ಪಂಚಮಿಯನ್ನು ಜೀವಂತ ಗ್ರಾಮೀಣ ಸಂಸ್ಕೃತಿಯ ಪ್ರತಿಬಿಂಬವಾಗಿಸಿತು. ಹಿರಿಯರು ಆಚರಿಸುವುದನ್ನು ಕಣ್ಣಾರೆ ನೋಡುತ್ತಾ ಮಕ್ಕಳು ಸಂಪ್ರದಾಯಗಳನ್ನು ಕಲಿಯುತ್ತಿರುವುದರಿಂದ ತಲೆತಲಾಂತರದಿಂದ ಬಂದಿರುವ ಹಳ್ಳಿ ಸಂಸ್ಕೃತಿಯ ಕೊಂಡಿ ಇನ್ನೂ ಗಟ್ಟಿಯಾಗಿಯೇ ಉಳಿದಿದೆ.

---

ಜನರಿಗೆ ಸಮರ್ಪಕ ಆರೋಗ್ಯ ಸೇವೆ ಕಲ್ಪಿಸಲು ಬೊಮ್ಮಾಯಿಗೆ ವಿಕಾಸ ವೇದಿಕೆ ಮನವಿ

## ಹಳೆ ಆಸ್ಪತ್ರೆಗಳಲ್ಲಿ ಪೂರ್ಣ ಚಿಕಿತ್ಸೆ ದೊರಕಿಸಿ





**ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ನಗರದ ದಂಡಪ್ಪ ಮಾನ್ವಿ ಮಹಿಳಾ ಮತ್ತು ಮಕ್ಕಳ ಆಸ್ಪತ್ರೆಯನ್ನು ಪೂರ್ಣ ಪ್ರಮಾಣದಲ್ಲಿ ಸಾರ್ವಜನಿಕರ ಚಿಕಿತ್ಸೆಗೆ ಬಳಸಬೇಕು ಹಾಗೂ ಹಳೆಯ ಜಿಲ್ಲಾ ಆಸ್ಪತ್ರೆಯಲ್ಲೂ ಕನಿಷ್ಠ 50ರಿಂದ 100 ಹಾಸಿಗೆಗಳ ಚಿಕಿತ್ಸಾ ವ್ಯವಸ್ಥೆ ಪುನರಾರಂಭಿಸಬೇಕು ಎಂದು ಗದಗ ಜಿಲ್ಲಾ ವಿಕಾಸ ವೇದಿಕೆ ವತಿಯಿಂದ ಸಂಸದ ಬಸವರಾಜ ಬೊಮ್ಮಾಯಿ ಅವರಿಗೆ ಮನವಿ ಸಲ್ಲಿಸಲಾಯಿತು.

ಸ್ವಾತಂತ್ರ್ಯ ದಿನಾಚರಣೆ ಅಂಗವಾಗಿ ಗದಗ ನಗರಕ್ಕೆ ಆಗಮಿಸಿದ್ದ ಬಸವರಾಜ ಬೊಮ್ಮಾಯಿ ಅವರನ್ನು ವೇದಿಕೆ ಅಧ್ಯಕ್ಷ ವಿಶ್ವನಾಥ ಖಾನಾಪೂರ ನೇತೃತ್ವದ ನಿಯೋಗ ಭೇಟಿ ಮಾಡಿ, ನಗರದ ಎರಡು ಆಸ್ಪತ್ರೆಗಳನ್ನು ಸಮರ್ಪಕವಾಗಿ ಬಳಕೆ ಮಾಡುವ ಮೂಲಕ ಜನರಿಗೆ ಹೆಚ್ಚಿನ ಆರೋಗ್ಯ ಸೇವೆ ಒದಗಿಸುವಂತೆ ಮನವಿ ಮಾಡಿತು.

ಈ ವೇಳೆ ಮಾತನಾಡಿದ ಬಸವರಾಜ ಬೊಮ್ಮಾಯಿ, ನಗರದ ಎರಡೂ ಆಸ್ಪತ್ರೆಗಳಲ್ಲಿ ಜನರಿಗೆ ಪೂರ್ಣ ಪ್ರಮಾಣದ ಚಿಕಿತ್ಸಾ ಸೌಲಭ್ಯ ಕಲ್ಪಿಸುವ ನಿಟ್ಟಿನಲ್ಲಿ ಗಮನ ಹರಿಸುವುದಾಗಿ ಭರವಸೆ ನೀಡಿದರು. ಇದರಿಂದ ಗದಗ ನಗರ ಮಾತ್ರವಲ್ಲದೆ ಸುತ್ತಮುತ್ತಲಿನ ಗ್ರಾಮಗಳ ಜನರಿಗೂ ಅನುಕೂಲವಾಗಲಿದೆ ಎಂದು ತಿಳಿಸಿದರು.ದಂಡಪ್ಪ ಮಾನ್ವಿ ಮಹಿಳಾ ಮತ್ತು ಮಕ್ಕಳ ಆಸ್ಪತ್ರೆಯಲ್ಲಿ ರೋಗಿಗಳ ಸಂಖ್ಯೆ ಹೆಚ್ಚಾದ ಸಂದರ್ಭದಲ್ಲಿ ಅಗತ್ಯವಿರುವ ರೋಗಿಗಳನ್ನು ಜಿಲ್ಲಾ ಆಸ್ಪತ್ರೆಗೆ ಸ್ಥಳಾಂತರಿಸುವ ವ್ಯವಸ್ಥೆ ಕಲ್ಪಿಸಬೇಕು. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ವೈದ್ಯಕೀಯ ಕಾಲೇಜು ಹಾಗೂ ಜಿಲ್ಲಾ ಆಸ್ಪತ್ರೆಯ ಅಧಿಕಾರಿಗಳೊಂದಿಗೆ ಸಮನ್ವಯ ಸಾಧಿಸಿ ಎರಡೂ ಆಸ್ಪತ್ರೆಗಳಲ್ಲಿ ಸಮರ್ಪಕ ಚಿಕಿತ್ಸಾ ಸೌಲಭ್ಯ ಒದಗಿಸಬೇಕು ಎಂದು ವೇದಿಕೆ ಮನವಿ ಮಾಡಿತು.ಅದೇ ರೀತಿ ಹಳೆಯ ಜಿಲ್ಲಾ ಆಸ್ಪತ್ರೆಯ ಒಳಾಂಗಣ ಮತ್ತು ಹೊರಾಂಗಣವನ್ನು ಸಂಪೂರ್ಣ ಸ್ವಚ್ಛಗೊಳಿಸಿ, ಕನಿಷ್ಠ 50ರಿಂದ 100 ಹಾಸಿಗೆಗಳ ಆಸ್ಪತ್ರೆಯಾಗಿ ಪುನರಾರಂಭಿಸುವ ಮೂಲಕ ಹಿರಿಯ ನಾಗರಿಕರು, ಬಿಪಿ, ಮಧುಮೇಹ ಸೇರಿದಂತೆ ವಿವಿಧ ಕಾಯಿಲೆಗಳಿಂದ ಬಳಲುತ್ತಿರುವವರಿಗೆ ಅಗತ್ಯ ಚಿಕಿತ್ಸೆ ದೊರೆಯುವಂತೆ ಮಾಡಬೇಕು ಎಂದು ಒತ್ತಾಯಿಸಲಾಯಿತು.

ಈ ಕುರಿತು ಉಸ್ತುವಾರಿ ಸಚಿವ ಬಸವರಾಜ ರಾಯರಡ್ಡಿ ಹಾಗೂ ಜಿಲ್ಲಾ ಆಡಳಿತದೊಂದಿಗೆ ಚಆರ್‌ಸಿ ಅಗತ್ಯ ಕ್ರಮ ಕೈಗೊಳ್ಳುವಂತೆ ವೇದಿಕೆ ವತಿಯಿಂದ ಮನವಿ ಮಾಡಲಾಯಿತು.

ಈ ಸಂದರ್ಭದಲ್ಲಿ ಜಿಲ್ಲಾ ಅಧ್ಯಕ್ಷ ರಾಜು ಕುರಡಗಿ, ನಗರಸಭೆ ಸದಸ್ಯರಾದ ಅನಿಲ ಅಬ್ಬಿಗೇರಿ, ಚಂದ್ರು ತಡಸದ, ಕಿರಣ ಭೂಮಾ, ರಮೇಶ್ ಸಜ್ಜಗಾರ, ಪ್ರಶಾಂತ ನಾಯ್ಕರ, ಅಮರನಾಥ ಬೆಟಗೇರಿ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

> **ನಗರದ ಎರಡು ಆಸ್ಪತ್ರೆಗಳು ಪೂರ್ಣ ಪ್ರಮಾಣದಲ್ಲಿ ಕಾರ್ಯನಿರ್ವಹಿಸಿದರೆ ಗದಗ ಮಾತ್ರವಲ್ಲದೆ ಸುತ್ತಮುತ್ತಲಿನ ಗ್ರಾಮಗಳ ಸಾವಿರಾರು ಜನರಿಗೆ ಸ್ಥಳೀಯವಾಗಿಯೇ ಉತ್ತಮ ಚಿಕಿತ್ಸೆ ದೊರೆಯಲಿದೆ. ಈ ನಿಟ್ಟಿನಲ್ಲಿ ಸಂಸದ ಬಸವರಾಜ ಬೊಮ್ಮಾಯಿ ಅವರು ಸ್ಪಂದಿಸಿರುವುದು ಸ್ವಾಗತಾರ್ಹ.**
>
> **- ವಿಶ್ವನಾಥ ಖಾನಾಪೂರ,**
> ಅಧ್ಯಕ್ಷರು, ಗದಗ ಜಿಲ್ಲಾ ವಿಕಾಸ ವೇದಿಕೆ

---

## 859ನೇ ಬಸವ ಪಂಚಮಿ: ಇಂದು ಹಾಲು-ಬಿಸ್ಕೇಟ್ ವಿತರಣೆ



**ವಿಜಯಸಾಕ್ಷಿ ಸುದ್ದಿ, ಗದಗ**

ಮಹಾಮಾನವತಾವಾದಿ, ಜಗಜ್ಯೋತಿ ಬಸವಣ್ಣನವರು ಕಪ್ಪಡಿ ಸಂಗಮನಾಥನಲ್ಲಿ ಶ್ರಾವಣ ಶುದ್ಧ ಪಂಚಮಿಯಂದು ಮಹಾಬಯಲಿನಲ್ಲಿ ಬಯಲಾದ ದಿನವನ್ನು ಸ್ಮರಿಸುವ 859ನೇ ಬಸವ ಪಂಚಮಿ (ಹಾಲು ಉಣಿಸುವ ಹಬ್ಬ)ಯನ್ನು ಬಸವ ಭಕ್ತರು ಹಾಗೂ ಬಸವತತ್ವ ಅನುಯಾಯಿಗಳು ಸೋಮವಾರ ಆಚರಿಸಲಿದ್ದಾರೆ.

ಈ ಅಂಗವಾಗಿ ಆ. 17ರಂದು ಬೆಳಗ್ಗೆ 10 ಗಂಟೆಗೆ ಬ್ಯಾಂಕರ್ಸ್ ಕಾಲೋನಿಯ ಜೀವನ ಸಂಧ್ಯಾ ಸುಖಾ ಲಯ ವೃದ್ಧಾಶ್ರಮದಲ್ಲಿ ವೃದ್ಧರಿಗೆ ಹಾಲುಬಿಸ್ಕೇಟ್ ವಿತರಿಸಲಾಗುವುದು. ಬೆಳಗ್ಗೆ 11 ಗಂಟೆಗೆ ಗದಗ ಜಿಲ್ಲಾ ಆಸ್ಪತ್ರೆಯ ಒಳರೋಗಿಗಳಿಗೆ ಹಾಲುಬಿಸ್ಕೇಟ್ ವಿತರಣೆ ನಡೆಯಲಿದೆ. ಮಧ್ಯಾಹ್ನ 12 ಗಂಟೆಗೆ ಭೀಷ್ಮ ಕೆರೆಯಲ್ಲಿರುವ ಶ್ರೀ ಬಸವೇಶ್ವರ ಮೂರ್ತಿ ಆವರಣದಲ್ಲಿ ಸಾಮೂಹಿಕ ವಚನ ಪ್ರಾರ್ಥನೆ ಆಯೋಜಿಸಲಾಗಿದೆ. ಎಲ್ಲ ಕಾರ್ಯಕ್ರಮಗಳಿಗೆ ಪರಮಪೂಜ್ಯ ಜಗದ್ಗುರು ತೋಂಟದ ಡಾ. ಸಿದ್ಧರಾಮ ಮಹಾಸ್ವಾಮಿಗಳು ಸಾನಿಧ್ಯ ವಹಿಸಲಿದ್ದಾರೆ.

ಬಸವ ಪಂಚಮಿ ಕೇವಲ ಆಚರಣೆಯಲ್ಲ, ಬಸವಣ್ಣನವರ ಕಾಯಕ, ದಾಸೋಹ, ಸಮಾನತೆ ಮತ್ತು ಮಾನವೀಯತೆಯ ತತ್ವಗಳನ್ನು ಬದುಕಿನಲ್ಲಿ ಅಳವಡಿಸಿಕೊಳ್ಳುವ ಸಂಕಲ್ಪದ ದಿನವಾಗಬೇಕು ಎಂದು ಬಸವದಳದ ಗದಗ-ಬೆಟಗೇರಿ ಅಧ್ಯಕ್ಷ ಪ್ರಕಾಶ ಅಸುಂಡಿ ತಿಳಿಸಿದ್ದಾರೆ.

ಬಸವದಳ ಬಸವಕೇಂದ್ರ, ಲಿಂಗಾಯತ ಪ್ರಗತಿಶೀಲ ಸಂಘ, ಜಗದ್ಗುರು ತೋಂಟದಾರ್ಯ ಜಾತ್ರಾಮಹೋತ್ಸವ ಸಮಿತಿ, ಶರಣ ಸಾಹಿತ್ಯ ಪರಿಷತ್ತು, ಜಾಗತಿಕ ಲಿಂಗಾಯತ ಮಹಾಸಭೆ ಸೇರಿದಂತೆ ವಿವಿಧ ಬಸವಪರ ಸಂಘಟನೆಗಳ ಪದಾಧಿಕಾರಿಗಳು ಹಾಗೂ ಸದಸ್ಯರು ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದಾರೆ. ಡಾ. ಉಮೇಶ ಪುರದ, ಶೇಖಣ್ಣ ಕವಳಿಕಾಯಿ ಹಾಗೂ ಪ್ರಕಾಶ ಅಸುಂಡಿ ತಿಳಿಸಿದ್ದಾರೆ.

---

## ಗದಗ ಉತ್ಸವದ ಮಳಿಗೆಗಳಲ್ಲಿ ಸಂಭ್ರಮ; ಬೊಮ್ಮಾಯಿ ಮೆಚ್ಚುಗೆ



**ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ಎಪಿಎಂಸಿ ಯಾರ್ಡ್‌ನ ಸ್ವಾಮಿ ವಿವೇಕಾನಂದ ಸಭಾಭವನ ಹಾಗೂ ಕೆ.ಎಚ್. ಪಾಟೀಲ ಸಭಾಭವನದಲ್ಲಿ ನಡೆಯುತ್ತಿರುವ ಗದಗ ಉತ್ಸವ-2026 ಕೈಗಾರಿಕಾ ವಸ್ತು ಪ್ರದರ್ಶನ ಮತ್ತು ಮಾರಾಟ ಮೇಳಕ್ಕೆ ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಶನಿವಾರ ಭೇಟಿ ನೀಡಿ ಮಳಿಗೆಗಳನ್ನು ವೀಕ್ಷಿಸಿದರು.

ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆ, ಕೈಗಾರಿಕಾ ಮತ್ತು ವಾಣಿಜ್ಯ ಇಲಾಖೆ, ಗ್ರಾಮೀಣ ಹಾಗೂ ಸಣ್ಣ ಉದ್ಯಮ ವಿಭಾಗ ಮತ್ತು ಜಿಲ್ಲಾ ಪಂಚಾಯಿತಿ ಆಶ್ರಯದಲ್ಲಿ ನಡೆಯುತ್ತಿರುವ ಉತ್ಸವದಲ್ಲಿ ವಿವಿಧ ಉತ್ಪನ್ನಗಳ ಪ್ರದರ್ಶನ ಹಾಗೂ ಮಾರಾಟಕ್ಕೆ ಅವಕಾಶ ಕಲ್ಪಿಸಲಾಗಿದೆ.

ಉತ್ಸವವನ್ನು ವೀಕ್ಷಿಸಿದ ಬಸವರಾಜ ಬೊಮ್ಮಾಯಿ, ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯು ಪ್ರತಿ ವರ್ಷ ಆಯೋಜಿಸಿಕೊಂಡು ಬರುತ್ತಿರುವ ಈ ಉತ್ಸವ ಕೈಗಾರಿಕೋದ್ಯಮಿಗಳು ಹಾಗೂ ಗ್ರಾಹಕರಲ್ಲಿ ಉತ್ಸಾಹ ಮೂಡಿಸಿದೆ. ವಿವಿಧ ಮಳಿಗೆಗಳಲ್ಲಿ ಗುಣಮಟ್ಟದ ಉತ್ಪನ್ನಗಳ ಪ್ರದರ್ಶನ ಮತ್ತು ಮಾರಾಟ ನಡೆಯುತ್ತಿರುವುದು,

ಗ್ರಾಹಕರಿಗೆ ಒಂದೇ ಸೂರಿನಡಿ ಅಗತ್ಯ ವಸ್ತುಗಳು ಲಭ್ಯವಾಗುತ್ತಿರುವುದು ವಿಶೇಷ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು. ಸ್ಥಳೀಯ ಉದ್ಯಮಿಗಳು ಹಾಗೂ ಸಣ್ಣ ಕೈಗಾರಿಕೆಗಳಿಗೆ ತಮ್ಮ ಉತ್ಪನ್ನಗಳನ್ನು ನೇರವಾಗಿ ಗ್ರಾಹಕರಿಗೆ ಪರಿಚಯಿಸಲು ಇಂತಹ ಮೇಳಗಳು ಉತ್ತಮ ವೇದಿಕೆಯಾಗಿವೆ. ಉತ್ಸವವು ವ್ಯಾಪಾರ ವಹಿವಾಟಿನ ಜತೆಗೆ ಸ್ಥಳೀಯ ಉತ್ಪಾದಕರಿಗೆ ಮಾರುಕಟ್ಟೆ ವಿಸ್ತರಣೆಯ ಅವಕಾಶ ಕಲ್ಪಿಸುತ್ತಿದೆ ಎಂದು ಅವರು ಹೇಳಿದರು.

ಈ ಸಂದರ್ಭದಲ್ಲಿ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆ ಅಧ್ಯಕ್ಷ ಶರಣಬಸಪ್ಪ ಗುಡಿಮನಿ, ಗೌರವ ಕಾರ್ಯದರ್ಶಿ ಚನ್ನವೀರಪ್ಪ ಹುಣಶೀಕಟ್ಟಿ, ಉತ್ಸವ ಸಮಿತಿ ಅಧ್ಯಕ್ಷ ಮಧುಸೂಧನ ಪುಣೇಕರ, ಉಪಾಧ್ಯಕ್ಷ ಜಯದೇವ ಮೆಣಸಗಿ, ಪ್ರಕಾಶ ಉಗಲಾಟ, ಸಿದ್ರಾಮಪ್ಪ ಉಮಚಗಿ, ಸಹ ಗೌರವ ಕಾರ್ಯದರ್ಶಿ ರಾಘವೇಂದ್ರ ಕಾಲವಾಡ, ಅಶೋಕ ಸಂಕಣ್ಣವರ, ಕೋಶಾಧ್ಯಕ್ಷ ಅರವಿಂದ ಕಾಮತ, ಕೋ-ಚೇರಮನ್ ಮಂಜುನಾಥ ವೀರಲಿಂಗಯ್ಯನಮಠ, ದಾನಯ್ಯ ಗಣಾಚಾರಿ, ವೀರಭದ್ರಯ್ಯ ಧನ್ನೂರಹಿರೇಮಠ, ಕಿರಣ ಭೂಮಾ, ಚಂದ್ರು ಬಾಳಿಹಳ್ಳಿಮಠ, ಬಸವರಾಜ ಅಂಗಡಿ, ಸೋಮನಾಥ ಜಾಲಿ, ದಾನಪ್ಪಗೌಡ್ರ, ರಾಜು ಕುರಡಗಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

---

## ಪಿರಮಿಡ್ ಧ್ಯಾನದಿಂದ ಆತ್ಮಿಕ ಶಕ್ತಿ, ಮಾನಸಿಕ ನೆಮ್ಮದಿ

**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಇಂದಿನ ಒತ್ತಡದ ಜೀವನಶೈಲಿಯಲ್ಲಿ ಪಿರಮಿಡ್ ಧ್ಯಾನ ಹಾಗೂ ಸತ್ಸಂಗವನ್ನು ಅಳವಡಿಸಿಕೊಳ್ಳುವುದರಿಂದ ಮನಸ್ಸಿನ ಶುದ್ಧೀಕರಣದ ಜತೆಗೆ ಆತ್ಮಿಕ ಶಕ್ತಿ, ಮಾನಸಿಕ ನೆಮ್ಮದಿ ಹಾಗೂ ಹೊಸ ಚೈತನ್ಯ ಪಡೆಯಬಹುದು ಎಂದು ಪಿರಮಿಡ್ ಮಾಸ್ಟರ್ ಡಾ. ಜೀವಂಧರ ಕೇತಪ್ಪನವರ ಹೇಳಿದರು.

ಪಟ್ಟಣದ ಚಂದ್ರಣ್ಣ ಓದುನವರ ಅವರ ಆವರಣದಲ್ಲಿ ಪಿರಮಿಡ್ ಸ್ಪಿರಿಚ್ಯುವಲ್ ಧ್ಯಾನ ಪರಿವಾರದ ವತಿಯಿಂದ ನೂತನವಾಗಿ ನಿರ್ಮಿಸಿರುವ ಪಿರಮಿಡ್ ಧ್ಯಾನ ಮಂದಿರ ಉದ್ಘಾಟನಾ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಧ್ಯಾನವು ಮನಸ್ಸಿನ ಚಂಚಲತೆ, ಕೋಪ, ದ್ವೇಷ ಹಾಗೂ ನಕಾರಾತ್ಮಕ ಚಿಂತನೆಗಳನ್ನು ದೂರ ಮಾಡಿ ಅಂತರಂಗವನ್ನು ಶಾಂತಗೊಳಿಸುವ ಶಕ್ತಿ ಹೊಂದಿದೆ. ಸಹಜ ಉಸಿರಾಟದ ಮೇಲೆ ಗಮನ ಕೇಂದ್ರೀಕರಿಸುವುದು ಸರಳ ಹಾಗೂ ಪರಿಣಾಮಕಾರಿ ಧ್ಯಾನ ಸಾಧನೆಯಾಗಿದ್ದು, ನಿಯಮಿತ ಧ್ಯಾನದಿಂದ ಜೀವನಶೈಲಿಯಲ್ಲೂ ಸಕಾರಾತ್ಮಕ ಬದಲಾವಣೆ ಕಾಣಬಹುದು ಎಂದರು. ಪಿರಮಿಡ್ ಶಕ್ತಿ,



ಧ್ಯಾನ, ಮೌನ ಸಾಧನೆ, ಸಾತ್ವಿಕ ಆಹಾರ ಪದ್ಧತಿ ಹಾಗೂ ಆಧ್ಯಾತ್ಮಿಕ ವಿಚಾರಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ಸಜ್ಜನರ ಸಂಗ, ಜ್ಞಾನಿಗಳ ನುಡಿಗಳ ಆಲಿಕೆ ಹಾಗೂ ಎಲ್ಲ ಜೀವಿಗಳ ಮೇಲಿನ ಪ್ರೀತಿ, ಕರುಣೆ ಉತ್ತಮ ಜೀವನದ ಮೂಲ ಗುಣಗಳಾಗಿವೆ ಎಂದು ಹೇಳಿದರು.

ಲಕ್ಷ್ಮೇಶ್ವರದಲ್ಲಿ ಸುಭಾಸ ಓದುನವರ ಅವರು ತಮ್ಮ ನಿವಾಸದ ಆವರಣದಲ್ಲೇ ಧ್ಯಾನ ಮಂದಿರ ನಿರ್ಮಿಸಿರುವುದು ಶ್ಲಾಘನೀಯ. ಇಂತಹ ಕೇಂದ್ರಗಳಿಂದ ಹೆಚ್ಚಿನ ಜನರಿಗೆ ಧ್ಯಾನದ ಮಹತ್ವ ಪರಿಚಯವಾಗಲಿದ್ದು, ಮುಂದಿನ ದಿನಗಳಲ್ಲಿ ಲಕ್ಷ್ಮೇಶ್ವರವು ಧ್ಯಾನದ ಮೂಲಕ ಆಧ್ಯಾತ್ಮಿಕ ಜಾಗೃತಿಯ ಕೇಂದ್ರವಾಗಿ ಬೆಳೆಯಲಿ ಎಂದು ಆಶಿಸಿದರು. ಧ್ಯಾನ ಮಂದಿರ ಉದ್ಘಾಟಿಸಿದ ಮಾಜಿ ಶಾಸಕ ಜಿ.ಎಸ್. ಗಡ್ಡದೇವರಮಠ ಮಾತನಾಡಿ, ವೇಗದ ಹಾಗೂ ಒತ್ತಡದ ಬದುಕಿನಲ್ಲಿ ಮಾನಸಿಕ ಶಾಂತಿಗೆ ಯೋಗ ಮತ್ತು ಧ್ಯಾನ ಅಗತ್ಯ. ಪ್ರತಿಯೊಬ್ಬರೂ ನಿತ್ಯದ ಬದುಕಿನಲ್ಲಿ ಧ್ಯಾನಕ್ಕೆ ಸಮಯ ಮೀಸಲಿಡಬೇಕು ಎಂದರು. ಪ್ರಾಸ್ತಾವಿಕವಾಗಿ ಮಾತನಾಡಿದ ಸುಭಾಸ ಓದುನವರ, ಸಾರ್ವಜನಿಕರಲ್ಲಿ ಧ್ಯಾನದ ಕುರಿತು ಅರಿವು ಮೂಡಿಸಿ ಆರೋಗ್ಯಕರ, ಶಾಂತಿಯುತ ಹಾಗೂ ಸಾತ್ವಿಕ ಜೀವನಶೈಲಿಗೆ ಪ್ರೇರಣೆ ನೀಡುವುದು ಧ್ಯಾನ ಕೇಂದ್ರದ ಉದ್ದೇಶವಾಗಿದೆ ಎಂದರು. ಕಾರ್ಯಕ್ರಮದಲ್ಲಿ ಬಿ.ಕೆ. ನಾಗಲಾಂಬಿಕಾ ಅಕ್ಕ, ಪಿರಮಿಡ್ ಮಾಸ್ಟರ್‌ಗಳಾದ ವಿದ್ಯಾರಾಣಿ, ನೇತ್ರಾವತಿ, ಎಮ್ಮೆಟಿ ಹಿರೇಮಠ, ಜಿ. ಶಿವಾನಂದ, ಚಂದ್ರಣ್ಣ ಓದುನವರ ಸೇರಿದಂತೆ ಧ್ಯಾನ ಪರಿವಾರದ ಸದಸ್ಯರು ಹಾಗೂ ಧ್ಯಾನಾರ್ಥಿಗಳು ಪಾಲ್ಗೊಂಡಿದ್ದರು. ಇದೇ ಸಂದರ್ಭದಲ್ಲಿ ಹಳಿಯಾಳದ ವಿನಾಯಕ ಹೆಗಡೆ ಮತ್ತು ಗೀತಾ ಹೆಗಡೆ ಅವರಿಂದ ರುದ್ರಪಠಣದೊಂದಿಗೆ ಧ್ಯಾನ ಕಾರ್ಯಕ್ರಮ ನಡೆಯಿತು. ಧ್ಯಾನಾರ್ಥಿಗಳು ತಮ್ಮ ಅನುಭವಗಳನ್ನು ಹಂಚಿಕೊಂಡರು.

---

## ಉರ್ದು ಶಾಲೆಗಳ ಖಾಲಿ ಹುದ್ದೆ ಶೀಘ್ರ ಭರ್ತಿ ಮಾಡಿ

**ವಿಜಯಸಾಕ್ಷಿ ಸುದ್ದಿ, ಗದಗ**

ರಾಜ್ಯದ ಉರ್ದು ಮಾಧ್ಯಮ ಶಾಲೆಗಳಲ್ಲಿ ಹಲವು ವರ್ಷಗಳಿಂದ ಖಾಲಿ ಉಳಿದಿರುವ ಶಿಕ್ಷಕರ ಹಾಗೂ ಅಗತ್ಯ ಹುದ್ದೆಗಳನ್ನು ಶೀಘ್ರ ಭರ್ತಿ ಮಾಡುವಂತೆ ಅಖಿಲ ಕರ್ನಾಟಕ ಮುಸ್ಲಿಂ ಮಹಾಸಭಾ ರಾಜ್ಯ ಸರ್ಕಾರವನ್ನು ಒತ್ತಾಯಿಸಿದೆ.

ಗದಗದಲ್ಲಿ ನಡೆದ ಮಹಾಸಭಾದ ವಿಶೇಷ ಸಭೆಯಲ್ಲಿ ಮಾತನಾಡಿದ ರಾಜ್ಯಾಧ್ಯಕ್ಷ ಮಹ್ಮದಶಫಿ ನಾಗರಕಟ್ಟಿ, ಉರ್ದು ಮಾಧ್ಯಮದಲ್ಲಿ ಬಿ.ಎಡ್., ಟಿ.ಸಿ.ಎಚ್. ಸೇರಿದಂತೆ ಅಗತ್ಯ ವಿದ್ಯಾರ್ಹತೆ ಪಡೆದಿರುವ ಸಾವಿರಾರು ಅಭ್ಯರ್ಥಿಗಳು ನೇಮಕಾತಿಗಾಗಿ ಕಾಯುತ್ತಿದ್ದಾರೆ. ಹಲವು ವರ್ಷಗಳಿಂದ ಉರ್ದು ಶಾಲೆಗಳಲ್ಲಿ ಸಮರ್ಪಕ ನೇಮಕಾತಿ ನಡೆಯದಿರುವುದರಿಂದ ವಿದ್ಯಾರ್ಥಿಗಳ ಶಿಕ್ಷಣದ ಜತೆಗೆ ಅರ್ಹ ಶಿಕ್ಷಕ ಅಭ್ಯರ್ಥಿಗಳ ಭವಿಷ್ಯವೂ ಅತಂತ್ರವಾಗಿದೆ ಎಂದರು. ಉರ್ದು ಶಾಲೆಗಳಲ್ಲಿನ ಖಾಲಿ ಹುದ್ದೆಗಳ ಸಂಪೂರ್ಣ ವಿವರ ಪಡೆದು ಶೀಘ್ರ ನೇಮಕಾತಿ ಅಧಿಸೂಚನೆ ಹೊರಡಿಸಬೇಕು ಎಂದು ಆಗ್ರಹಿಸಿದರು. ಸಭೆಯಲ್ಲಿ ಜಿಲ್ಲಾಧ್ಯಕ್ಷ ಜಾಫರ ಡಾಲಾಯತ, ಮಹಬೂಬ್ ಬಾದಷಾ ಖಾಜಿ, ನಗರ ಅಧ್ಯಕ್ಷ ತಾಜುದ್ದೀನ್ ಪಾಪಣ್ಣವರ, ಪ್ರಧಾನ ಕಾರ್ಯದರ್ಶಿ ರಿಯಾಜ್ ಅಹ್ಮದ್ ದೊಡ್ಡಮನಿ, ಕುತುಬುದ್ದೀನ್ ಶೇಖ, ನಾಸೀರ ನರೇಗಲ್, ರಫೀಕ್ ಈಟಿ, ಯಾಸಿನ್ ಮುಲ್ಲಾ, ಅಫ್ಜಲ್ ಮನಿಯಾರ್, ಮೀರಾಸಾಬ ಇರಕಲ್, ನಿಜಾಮುದ್ದೀನ್ ಕಾಟಾಪುರ, ರಹೀಂಸಾಬ್ ದೊಡ್ಡಮನಿ ಇದ್ದರು.

## ಜಿಲ್ಲೆಯಾದ್ಯಂತ 80ನೇ ಸ್ವಾತಂತ್ರ್ಯೋತ್ಸವ ಆಚರಣೆ; ದೇಶಭಕ್ತಿ ಕಾರ್ಯಕ್ರಮಗಳಿಗೆ ಮೆರುಗು

# ಗದಗ ಜಿಲ್ಲೆಯಲ್ಲಿ ಸಂಭ್ರಮದ ಸ್ವಾತಂತ್ರ್ಯೋತ್ಸವ

**ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲೆಯಾದ್ಯಂತ ಶನಿವಾರ 80ನೇ ಸ್ವಾತಂತ್ರ್ಯೋತ್ಸವವನ್ನು ಸಂಭ್ರಮದಿಂದ ಆಚರಿಸಲಾಯಿತು. ಸರ್ಕಾರಿ ಕಚೇರಿಗಳು, ಶಾಲಾ-ಕಾಲೇಜುಗಳು, ಸಂಘ-ಸಂಸ್ಥೆಗಳು ಸೇರಿದಂತೆ ವಿವಿಧೆಡೆ ರಾಷ್ಟ್ರಧ್ವಜಾರೋಹಣ ನೆರವೇರಿಸಿ, ದೇಶಭಕ್ತಿ ಕಾರ್ಯಕ್ರಮಗಳನ್ನು ಆಯೋಜಿಸಲಾಯಿತು. ಸ್ವಾತಂತ್ರ್ಯ ಹೋರಾಟಗಾರರ ತ್ಯಾಗ, ಬಲಿದಾನವನ್ನು ಸ್ಮರಿಸಿದ ಜನರು, ದೇಶದ ಏಕತೆ, ಸಮಗ್ರತೆ ಹಾಗೂ ಅಭಿವೃದ್ಧಿಗೆ ಶ್ರಮಿಸುವ ಸಂಕಲ್ಪ ಕೈಗೊಂಡರು. ಶಾಲಾ-ಕಾಲೇಜುಗಳ ವಿದ್ಯಾರ್ಥಿಗಳಿಂದ ದೇಶಭಕ್ತಿ ಗೀತೆ, ಸಾಂಸ್ಕೃತಿಕ ಕಾರ್ಯಕ್ರಮ ಹಾಗೂ ಪಥಸಂಚಲನಗಳು ನಡೆದವು. ಜಿಲ್ಲೆಯ ವಿವಿಧ ತಾಲೂಕುಗಳಲ್ಲೂ 80ನೇ ಸ್ವಾತಂತ್ರ್ಯೋತ್ಸವದ ಸಂಭ್ರಮ ಮನೆ ಮಾಡಿತ್ತು.

## ಬೀದಿ ವ್ಯಾಪಾರಿಗಳ ಸಂಘದಿಂದ ಸ್ವಾತಂತ್ರ್ಯೋತ್ಸವ ಆಚರಣೆ




**ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ದಿ. ಕೆ.ಎಚ್. ಪಾಟೀಲ ಮಾರುಕಟ್ಟೆಯಲ್ಲಿ ಗದಗ ಜಿಲ್ಲಾ ಬೀದಿ ವ್ಯಾಪಾರಿಗಳ ಸಂಘದ ವತಿಯಿಂದ 80ನೇ ಸ್ವಾತಂತ್ರ್ಯೋತ್ಸವವನ್ನು ಆಚರಿಸಲಾಯಿತು. ಬೆಳಗ್ಗೆ 7.45ಕ್ಕೆ ಜಿಲ್ಲಾ ಅಧ್ಯಕ್ಷ ಮುಕ್ತುಂಸಾಬ ನಾಲಬಂದ, ಜಿಲ್ಲಾ ಉಪಾಧ್ಯಕ್ಷ ಮಾರುತಿ ಸೋಳಂಕಿ, ಮಹಿಳಾ ಅಧ್ಯಕ್ಷೆ ರಶೀದಾ ನದಾಫ, ರೇಣುಕಾ ಹತ್ತಿವಾಲೆ ಹಾಗೂ ಜಹಾಂಗೀರ ಮುಳಗುಂದ ಅವರ ಉಪಸ್ಥಿತಿಯಲ್ಲಿ ಧ್ವಜಾರೋಹಣ ನೆರವೇರಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಸಂಘದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಭಾಷಾಸಾಬ ಮಲ್ಲಸಮುದ್ರ, 1947ರಲ್ಲಿ ಹಲವಾರು ಸ್ವಾತಂತ್ರ್ಯ ಹೋರಾಟಗಾರರ ತ್ಯಾಗ, ಬಲಿದಾನದಿಂದ ಬ್ರಿಟಿಷರ ಆಡಳಿತದಿಂದ ದೇಶಕ್ಕೆ ಸ್ವಾತಂತ್ರ್ಯ ದೊರೆಯಿತು. ಮಹಾತ್ಮ ಗಾಂಧೀಜಿ, ಜವಾಹರಲಾಲ್ ನೆಹರು, ಲಾಲ್ ಬಹದ್ದೂರ್ ಶಾಸ್ತ್ರಿ ಸರ್ದಾರ್ ವಲ್ಲಭಭಾಯಿ ಪಟೇಲ್ ಸೇರಿದಂತೆ ಅನೇಕ ನಾಯಕರು ದೇಶದ ಸ್ವಾತಂತ್ರ್ಯಕ್ಕಾಗಿ ತಮ್ಮ ಜೀವನವನ್ನೇ ಮುಡಿಪಾಗಿಟ್ಟಿದ್ದರು ಎಂದು ಹೇಳಿದರು.

ಈ ಸಂದರ್ಭದಲ್ಲಿ ರಾಮವ್ವ ಲಮಾಣಿ, ಲಕ್ಷ್ಮವ್ವ ಬೆನಹಾಳ, ಕುತೇಜಾ ದೊಡ್ಡಮನಿ, ನಿಂಗನಗೌಡ ಪಾಟೀಲ, ಅಬ್ಬು ಹುಯಿಲಗೋಳ, ದಾದು ಮುಂಡರಗಿ, ತಬರೇಜ ಪಠಾಣ, ರವೀಂದ್ರಸಾ ಮೇರವಾಡೆ, ಫಯಾಜಹದ ನಾರಾಯಣಕೇರಿ, ಮಾಬುಲಿ ಧಾರವಾಡ, ರಾಜು ರೋಣದ, ನವೀನ್ ಭಂಡಾರಿ, ಯೂಸೂಫ್ ಶಿರಹಟ್ಟಿ, ನಜೀರಅಹ್ಮದ ಖವಾಸ, ಯಲ್ಲಪ್ಪ ಸಾತಪತಿ, ಬುಡೇಲಿ ಅತ್ತಾರ, ಅಬ್ಬು ರಾಟೆ ಹಾಗೂ ಶಿವಾಜಿ ಮಧುರಕರ ಸೇರಿದಂತೆ ಸಂಘದ ಪದಾಧಿಕಾರಿಗಳು ಮತ್ತು ಸದಸ್ಯರು ಉಪಸ್ಥಿತರಿದ್ದರು.

## ನಗರಸಭೆಯಲ್ಲಿ 80ನೇ ಸ್ವಾತಂತ್ರ್ಯೋತ್ಸವ



**ವಿಜಯಸಾಕ್ಷಿ ಸುದ್ದಿ, ಗದಗ**

ಗದಗ-ಬೆಟಗೇರಿ ನಗರಸಭೆ ಆವರಣದಲ್ಲಿ 80ನೇ ಸ್ವಾತಂತ್ರ್ಯೋತ್ಸವವನ್ನು ಸಂಭ್ರಮದಿಂದ ಆಚರಿಸಲಾಯಿತು. ನಗರಸಭೆ ಪೌರಾಯುಕ್ತ ರಾಜಾರಾಮ ಪವಾರ ಅವರು ಧ್ವಜಾರೋಹಣ ನೆರವೇರಿಸಿದರು.

ಈ ಸಂದರ್ಭದಲ್ಲಿ ನಗರಸಭೆಯ ಅಧಿಕಾರಿಗಳು ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು. ಪರಶುರಾಮ ಎಫ್. ಶೇರಖಾನೆ, ಲಕ್ಷ್ಮಣ ಜೋಗದಂಡಕರ, ಆನಂದ ಬದಿ, ಮಹೇಶ ಹಡಪದ, ಟಿ.ಎಚ್. ದ್ಯಾವನೂರ, ಎಸ್.ಎನ್. ದಳವಾಯಿ, ಡಿ.ಎಚ್. ಸೀತಿಮನಿ, ಮೊಹ್ಸಿನ್ ಮುಜಾವರ, ಸಾವಿತ್ರಿ ಮಳ್ಳಿ, ಸುಷ್ಮಾ ಗುಡಿ, ಎಸ್.ವಾಯ್. ಸಂಕನಗೌಡ್ರ, ಬಸಮ್ಮ ಹಿರೇಮಠ, ಪುಷ್ಪಲತಾ ಕಡೇಮನಿ, ಎಂ.ಎಂ. ಮಕಾನದಾರ, ಮುತ್ತು ಹೂಗಾರ, ಸಂಗಮೇಶ ವಡ್ಡಿನ, ಶಿವಲೀಲಾ ತೋಟಗಿ, ಆಂಜನೇಯ ಬಳ್ಳಾರಿ ಹಾಗೂ ಚಂದ್ರು ಹಾದಿಮನಿ ಸೇರಿದಂತೆ ಸಿಬ್ಬಂದಿ ಪಾಲ್ಗೊಂಡಿದ್ದರು.

## ಮಕ್ಕಳಿಗೆ ಸ್ವಾತಂತ್ರ್ಯ ಹೋರಾಟದ ಇತಿಹಾಸ ತಿಳಿಸೋಣ



**ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ಒಕ್ಕಲಗೇರಿ ಓಣಿಯಲ್ಲಿರುವ ಮಕ್ಕುಂ ಮಸೀದಿ ಹಾಗೂ ಜಮಾತ್ ವತಿಯಿಂದ 80ನೇ ಸ್ವಾತಂತ್ರ್ಯೋತ್ಸವವನ್ನು ಆಚರಿಸಲಾಯಿತು. ಜಮಾತ್ ಮುಖಂಡ ಜನಾಬ್ ಮೈಲಾನಾಸಾಬ ಗುಡಸಲಮನಿ ಅವರು ಧ್ವಜಾರೋಹಣ ನೆರವೇರಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಬ್ರಿಟಿಷರ ಆಡಳಿತದಿಂದ ದೇಶವನ್ನು ಸ್ವತಂತ್ರಗೊಳಿಸಲು ಸಾವಿರಾರು ಸ್ವಾತಂತ್ರ್ಯ ಹೋರಾಟಗಾರರು ತ್ಯಾಗ ಮತ್ತು ಬಲಿದಾನ ಮಾಡಿದ್ದಾರೆ.


ಅವರ ಹೋರಾಟದ ಫಲವಾಗಿ ದೇಶಕ್ಕೆ ಸ್ವಾತಂತ್ರ್ಯ ದೊರೆತಿದ್ದು, ಪ್ರತಿಯೊಬ್ಬ ಭಾರತೀಯರೂ ಸ್ವಾತಂತ್ರ್ಯ ದಿನವನ್ನು ಹೆಮ್ಮೆಯಿಂದ ಆಚರಿಸಬೇಕು ಎಂದರು.

ಸ್ವಾತಂತ್ರ್ಯ ಹೋರಾಟಗಾರರ ತ್ಯಾಗ, ಬಲಿದಾನ ಹಾಗೂ ದೇಶದ ಇತಿಹಾಸವನ್ನು ಮುಂದಿನ ಪೀಳಿಗೆಗೆ ತಿಳಿಸುವ ಅಗತ್ಯವಿದೆ.

ಶಾಲಾ ಮಕ್ಕಳಿಗೂ ಸ್ವಾತಂತ್ರ್ಯ ಹೋರಾಟದ ಇತಿಹಾಸವನ್ನು ಪರಿಚಯಿಸುವ ಕಾರ್ಯವಾಗಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ಜನಾಬ್ ಭಾಷಾಸಾಬ ನದಾಫ, ದಾವಲಸಾಬ ಡೋಲಿ, ಮಹ್ಮದಶರೀಫ ಯಾದಗಿರಿ, ಆಜಾದ ನಾಗನೂರು, ದಾವಲಸಾಬ ಗೋಳಗುಂದಿ, ದಾವಲಸಾಬ ಖಾಜಾಮುಲ್ಲಾ, ಆಪಿಜ್ ಅಬ್ದುಲ್, ಅಜರುದ್ದೀನ್ ಗೋಳಗುಂದಿ, ಜಾಕಿರ ನಾಗನೂರ, ಇಸ್ಮಾಯಿಲ್ ಗೋಳಗುಂದಿ, ರಿಯಾಜ್ ಗುಡಸಲಮನಿ ಹಾಗೂ ಭಾಷಾಸಾಬ ಮಲ್ಲಸಮುದ್ರ ಉಪಸ್ಥಿತರಿದ್ದರು.

## ಬಿವಿವಿ ಶಾಲೆಯಲ್ಲಿ ಸಂಭ್ರಮದ ಸ್ವಾತಂತ್ರ್ಯ ದಿನಾಚರಣೆ




**ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ಬಾಲ ವಿನಾಯಕ ವಿದ್ಯಾನಿಕೇತನ (ಬಿವಿವಿ) ಶಾಲೆಯಲ್ಲಿ 80ನೇ ಸ್ವಾತಂತ್ರ್ಯ ದಿನಾಚರಣೆಯನ್ನು ಸಂಭ್ರಮದಿಂದ ಆಚರಿಸಲಾಯಿತು. ಡಾ. ಆದಿತ್ಯಾ ಕೆ. ಗೋಡಖಿಂಡಿ ಧ್ವಜಾರೋಹಣ ನೆರವೇರಿಸಿದರು.

ಅತಿಥಿ ಭಾಷಣದಲ್ಲಿ ಮಾತನಾಡಿದ ಅವರು, ವಿದ್ಯಾರ್ಥಿಗಳು ಶಿಕ್ಷಕರು ಹಾಗೂ ಪಾಲಕರನ್ನು ಗೌರವದಿಂದ ಕಾಣುವುದು ತಮ್ಮ ಜವಾಬ್ದಾರಿ ಎಂಬುದನ್ನು ಅರಿತುಕೊಳ್ಳಬೇಕು ಎಂದು ಸಲಹೆ ನೀಡಿದರು. ಸ್ವಾತಂತ್ರ್ಯ ದಿನಾಚರಣೆಯ ಮಹತ್ವವನ್ನು ವಿವರಿಸಿದ ಅವರು, ವಿದ್ಯಾರ್ಥಿಗಳು ಮೊಬೈಲ್ ಬಳಕೆಯನ್ನು ಮಿತಿಗೊಳಿಸಬೇಕು. ಅತಿಯಾದ ಮೊಬೈಲ್ ಬಳಕೆಯಿಂದ ಗಮನ ಕೇಂದ್ರೀಕರಣ ಹಾಗೂ ಆಸಕ್ತಿ ಕುಂಠಿತವಾಗಬಹುದು ಎಂದು ಮಕ್ಕಳಿಗೆ ತಿಳಿಸಿದರು. ಶಾಲೆಯ ಆರು ಸದನಗಳ ವಿದ್ಯಾರ್ಥಿಗಳು ಶಿಸ್ತುಬದ್ಧವಾಗಿ ಪಥಸಂಚಲನದಲ್ಲಿ ಪಾಲ್ಗೊಂಡು ರಾಷ್ಟ್ರಧ್ವಜ ಹಾಗೂ ಕಾರ್ಯಕ್ರಮದ ಅತಿಥಿಗಳಿಗೆ ಗೌರವ ಸಲ್ಲಿಸಿದರು.

ಶಾಲೆಯ ಅಧ್ಯಕ್ಷ ಎಸ್. ರವಿ, ಇ.ಎಲ್.ಸಿ. ಮುಖ್ಯಸ್ಥೆ ಆರ್. ಮಲ್ಲಿಕಾ, ಪ್ಲೇ ಹೋಮ್ ಮುಖ್ಯಸ್ಥೆ ಗಂಗಾ, ನಿರ್ದೇಶಕ ವಿನಾಯಕ ಆರ್., ಪ್ರಾಚಾರ್ಯ ವಿ.ಎಂ. ಅಡ್ನೂರ, ಉಪಪ್ರಾಚಾರ್ಯ ಪಿ.ಜಿ. ಬ್ಯಾಳಿ, ಪಾಲಕರು, ಶಿಕ್ಷಕ-ಶಿಕ್ಷಕೇತರ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು. ಕುಮಾರಿ ಪ್ರಣಿತಾ ಮುಂಡೆವಾಡಿ ಮತ್ತು ಸಂಗಡಿಗರು ದೇಶಭಕ್ತಿ ಗೀತೆ ಹಾಡಿದರು. ಕುಮಾರ ಪ್ರತೀಕ ಎಲಿಗಾರ ಮತ್ತು ಸಂಗಡಿಗರು ನೃತ್ಯ ಪ್ರದರ್ಶಿಸಿದರು. ಕುಮಾರ ಆರ್.ಎನ್. ಕಾರ್ತಿಕಗೌಡ ಹಾಗೂ ಕುಮಾರಿ ಮಾಹಿನ್ ನೀಲಿ ಸ್ವಾತಂತ್ರ್ಯ ದಿನಾಚರಣೆ ಕುರಿತು ಮಾತನಾಡಿದರು.

ಕುಮಾರಿ ನಕ್ಷತ್ರ ಹಿರೇಮಠ ಮತ್ತು ಕುಮಾರಿ ದೀಪ್ತಿ ಪಲ್ಲೇದ ಯುಕೆಜಿ ಮಕ್ಕಳ ವೇಷಭೂಷಣ ಸ್ಪರ್ಧೆ, ಕುಮಾರಿ ದಿವ್ಯಾ ರಾಥೋಡ ಹಾಗೂ ಕುಮಾರಿ ದೀಕ್ಷಾ ಹೆಬ್ಬಳ್ಳಿ ಎಲ್‌ಕೆಜಿ ಮಕ್ಕಳ ವೇಷಭೂಷಣ ಸ್ಪರ್ಧೆಯನ್ನು ನಡೆಸಿಕೊಟ್ಟರು.

ಕುಮಾರ ಸೌರವ್ ಬೇವಿನಕಟ್ಟಿ ಹಾಗೂ ಸಾನ್ವಿ ಗುಡಿ ನಿರೂಪಿಸಿದರು. ಕುಮಾರಿ ಅರ್ಪಿತಾ ಕುಲಕರ್ಣಿ ಅತಿಥಿ ಪರಿಚಯ ಮಾಡಿದರು. ಕುಮಾರಿ ಅನುಶ್ರೀ ಪಾಟೀಲ ಪ್ರಶಸ್ತಿ ವಿತರಣೆ ಕಾರ್ಯಕ್ರಮ ನಡೆಸಿಕೊಟ್ಟರು. ಕುಮಾರ ಸಮರ್ಥ ರಾವ್ ಸ್ವಾಗತಿಸಿದರು. ಕುಮಾರ ರಾಕೇಶ ಆನೆಗುಂದಿ ವಂದಿಸಿದರು.

## ಗದಗ ಆಂಗ್ಲೋ ಉರ್ದು ಬಾಲಕರ ಪ್ರೌಢಶಾಲೆಯಲ್ಲಿ 80ನೇ ಸ್ವಾತಂತ್ರ್ಯೋತ್ಸವ

# ಸ್ವಾತಂತ್ರ್ಯವೆಂದರೆ ಹಕ್ಕುಗಳ ಜತೆಗೆ ಜವಾಬ್ದಾರಿಯೂ ಹೌದು

**ವಿಜಯಸಾಕ್ಷಿ ಸುದ್ದಿ, ಗದಗ**



ನಗರದ ಆಂಗ್ಲೋ ಉರ್ದು ಬಾಲಕರ ಪ್ರೌಢಶಾಲೆಯಲ್ಲಿ 80ನೇ ಸ್ವಾತಂತ್ರ್ಯೋತ್ಸವವನ್ನು ಶನಿವಾರ ಸಂಭ್ರಮದಿಂದ ಆಚರಿಸಲಾಯಿತು. ಸಂಸ್ಥೆಯ ಅಧ್ಯಕ್ಷ ಅಲ್‌ಹಾಜ್ ಸರ್ಫರಾಜ್ ಅಹ್ಮದ್ ಎಸ್. ಉಮಚಗಿ ಧ್ವಜಾರೋಹಣ ನೆರವೇರಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ದೇಶದ ಸ್ವಾತಂತ್ರ್ಯಕ್ಕಾಗಿ ಮಹಾತ್ಮ ಗಾಂಧೀಜಿ, ಸುಭಾಷ್ ಚಂದ್ರ ಬೋಸ್, ಭಗತ್ ಸಿಂಗ್, ಸರ್ದಾರ್ ವಲ್ಲಭಭಾಯಿ ಪಟೇಲ್, ಜವಾಹರಲಾಲ್ ನೆಹರು, ಮೌಲಾನಾ ಆಝಾದ್ ಸೇರಿದಂತೆ ಅಸಂಖ್ಯಾತ ಮಹನೀಯರು ಮಾಡಿದ ತ್ಯಾಗ ಮತ್ತು ಬಲಿದಾನವನ್ನು ಸ್ಮರಿಸುವುದು ಪ್ರತಿಯೊಬ್ಬ ಭಾರತೀಯನ ಕರ್ತವ್ಯ ಎಂದರು.

ಸ್ವಾತಂತ್ರ್ಯವೆಂದರೆ ಕೇವಲ ಪರಕೀಯ ಆಡಳಿತದಿಂದ ಮುಕ್ತಿ ಪಡೆಯುವುದಲ್ಲ. ಸಂವಿಧಾನ, ಪ್ರಜಾಪ್ರಭುತ್ವ, ಸಮಾನತೆ, ಸಹೋದರತ್ವ ಹಾಗೂ ನ್ಯಾಯದ ಮೌಲ್ಯಗಳನ್ನು ಗೌರವಿಸಿ ಜವಾಬ್ದಾರಿಯುತ ನಾಗರಿಕರಾಗಿ ಬದುಕುವುದೇ ನಿಜವಾದ ಸ್ವಾತಂತ್ರ್ಯ ಎಂದು ಹೇಳಿದರು.

ವಿದ್ಯಾರ್ಥಿಗಳು ಉತ್ತಮ ಶಿಕ್ಷಣದೊಂದಿಗೆ ಶಿಸ್ತು, ಪ್ರಾಮಾಣಿಕತೆ, ಪರಿಶ್ರಮ ಹಾಗೂ ದೇಶಪ್ರೇಮ ಬೆಳೆಸಿಕೊಳ್ಳಬೇಕು. ಜಾತಿ, ಮತ, ಧರ್ಮ ಮತ್ತು ಭಾಷೆಯ ಭೇದಗಳನ್ನು ಮರೆತು ನಾವೆಲ್ಲರೂ ಭಾರತೀಯರು ಎಂಬ ಏಕತೆಯ ಭಾವನೆಯೊಂದಿಗೆ ಮುನ್ನಡೆಯಬೇಕು ಎಂದು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಸಂಸ್ಥೆಯ ಉಪಾಧ್ಯಕ್ಷ ಹಾಜಿ ಎ.ಎಂ. ಸೌದಾಗರ, ಕಾರ್ಯದರ್ಶಿ ಜನಾಬ್ ಎಂ.ಎಂ. ಶೇಖ, ಸದಸ್ಯರಾದ ಆರ್.ಎಲ್. ಬಾಗಲಕೋಟ, ಶಹನವಾಜ್ ಎಸ್. ಉಮಚಗಿ, ಪ್ರೊ. ಎ.ಎಂ. ಮುಲ್ಲಾ, ಕೆ.ಎಂ. ಶೇಖ, ಜೆ.ಬಿ. ಉಮಚಗಿ, ಎಂ.ಎ. ಹಣಗಿ, ಎಸ್.ಎ. ಬಿಜಾಪುರ, ಎಫ್.ಎಂ. ಢಾಲಾಯತ್ ಸೇರಿದಂತೆ ಶಾಲೆಯ ಸರ್ವ ಸಿಬ್ಬಂದಿ ಉಪಸ್ಥಿತರಿದ್ದರು.

## ನಾವೆಲ್ಲ ಭಾರತಮಾತೆಯ ಮಕ್ಕಳು ಎಂಬ ಒಗ್ಗಟ್ಟಿನ ಮಂತ್ರದೊಂದಿಗೆ ನವಭಾರತ ನಿರ್ಮಾಣಕ್ಕೆ ಕೈಜೋಡಿಸಿ: ತಹಸೀಲ್ದಾರ ಧನಂಜಯ ಎಂ

# ಸ್ವಾತಂತ್ರ್ಯದ ಮೌಲ್ಯ ಅರಿತು ಕರ್ತವ್ಯ ಪಾಲಿಸೋಣ



**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಸ್ವತಂತ್ರ ಭಾರತದ ಶತಮಾನೋತ್ಸವದತ್ತ ದೇಶ ಹೆಜ್ಜೆ ಹಾಕುತ್ತಿರುವ ಸಂದರ್ಭದಲ್ಲಿ ಪ್ರತಿಯೊಬ್ಬರೂ ನಾವೆಲ್ಲ ಭಾರತಮಾತೆಯ ಮಕ್ಕಳು ಎಂಬ ಒಗ್ಗಟ್ಟಿನ ಮಂತ್ರದೊಂದಿಗೆ ನವಭಾರತ ನಿರ್ಮಾಣದ ಸಂಕಲ್ಪ ಕೈಗೊಂಡು ದೇಶದ ಸರ್ವತೋಮುಖ ಅಭಿವೃದ್ಧಿಗೆ ಕೈಜೋಡಿಸಬೇಕು ಎಂದು ತಹಸೀಲ್ದಾರ್ ಧನಂಜಯ ಎಂ. ಕರೆ ನೀಡಿದರು.

ಪಟ್ಟಣದ ಉಮಾ ವಿದ್ಯಾಲಯ ಹೈಸ್ಕೂಲ್ ಮೈದಾನದಲ್ಲಿ ಶನಿವಾರ ತಾಲೂಕು ಆಡಳಿತದ ವತಿಯಿಂದ ನಡೆದ 80ನೇ ಸ್ವಾತಂತ್ರ್ಯೋತ್ಸವ ಕಾರ್ಯಕ್ರಮದಲ್ಲಿ ಧ್ವಜಾರೋಹಣ ನೆರವೇರಿಸಿ ಅವರು ಮಾತನಾಡಿದರು.

1947ರ ಆಗಸ್ಟ್ 15ರಂದು ಭಾರತ ಸ್ವಾತಂತ್ರ್ಯ ಪಡೆದಿದ್ದು, ಮಹಾತ್ಮ ಗಾಂಧೀಜಿ, ಡಾ. ಬಿ.ಆರ್. ಅಂಬೇಡ್ಕರ್ ಸೇರಿದಂತೆ ಅಸಂಖ್ಯಾತ ಹೋರಾಟಗಾರರ ತ್ಯಾಗ, ಬಲಿದಾನ ಹಾಗೂ ಹೋರಾಟದ ಫಲವಾಗಿದೆ. ಸ್ವಾತಂತ್ರ್ಯ ನಮಗೆ ಹಕ್ಕುಗಳ ಜತೆಗೆ ಕರ್ತವ್ಯಗಳನ್ನೂ ನೀಡಿದೆ. ಸಂವಿಧಾನದ ಆಶಯಗಳಾದ ನ್ಯಾಯ, ಸ್ವಾತಂತ್ರ್ಯ, ಸಮಾನತೆ ಹಾಗೂ ಭಾತೃತ್ವದ ಮೌಲ್ಯಗಳನ್ನು ಪ್ರತಿಯೊಬ್ಬರೂ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದರು.

ವಿಜ್ಞಾನ, ತಂತ್ರಜ್ಞಾನ, ಶಿಕ್ಷಣ, ಆರೋಗ್ಯ ಹಾಗೂ ಕೃಷಿ ಸೇರಿದಂತೆ ಹಲವು ಕ್ಷೇತ್ರಗಳಲ್ಲಿ ಭಾರತ ವಿಶ್ವದ ಗಮನ ಸೆಳೆಯುತ್ತಿದೆ. ಆದರೆ ಭ್ರಷ್ಟಾಚಾರ, ಭಯೋತ್ಪಾದನೆ, ಜಾತೀಯತೆ ಹಾಗೂ ಕೋಮುವಾದದಂತಹ ಸಮಸ್ಯೆಗಳನ್ನು ದೇಶ ಎದುರಿಸುತ್ತಿದೆ. ದೇಶದ ಸಂಪತ್ತಾಗಿರುವ ಯುವಜನತೆ ದುಶ್ಚಟಗಳು ಹಾಗೂ ಕಾನೂನುಬಾಹಿರ ಚಟುವಟಿಕೆಗಳಿಂದ ದೂರವಿದ್ದು, ಪ್ರಜ್ಞಾವಂತ ನಾಗರಿಕರಾಗಿ ದೇಶದ ಶ್ರೇಷ್ಠತೆ, ಏಕತೆ, ಸ್ವಚ್ಛತೆ ಹಾಗೂ ಪ್ರಗತಿಗಾಗಿ ಶ್ರಮಿಸಬೇಕು ಎಂದು ಹೇಳಿದರು.

ಲಕ್ಷ್ಮೇಶ್ವರ ತಾಲೂಕನ್ನು ಸ್ವಚ್ಛ, ಹಸಿರು ಹಾಗೂ ಅಭಿವೃದ್ಧಿ ಹೊಂದಿದ ತಾಲೂಕನ್ನಾಗಿ ರೂಪಿಸಲು ಪ್ರತಿಯೊಬ್ಬರೂ ಕೈಜೋಡಿಸಬೇಕು. ಪರಿಸರ ಸಂರಕ್ಷಣೆ, ನೀರಿನ ಉಳಿತಾಯ ಹಾಗೂ ಸಾರ್ವಜನಿಕ ಆಸ್ತಿಯ ರಕ್ಷಣೆಗೆ ಆದ್ಯತೆ ನೀಡಬೇಕು. ದೇಶ ನನಗಾಗಿ ಏನು ಮಾಡಿದೆ ಎನ್ನುವುದಕ್ಕಿಂತ, ನಾನು ದೇಶಕ್ಕಾಗಿ ಏನು ಮಾಡಬಹುದು ಎಂಬ ಚಿಂತನೆ ಪ್ರತಿಯೊಬ್ಬರಲ್ಲೂ ಮೂಡಬೇಕು ಎಂದರು.

ತಾಲೂಕು ಗ್ಯಾರಂಟಿ ಸಮಿತಿ ಅಧ್ಯಕ್ಷ ನಾಗರಾಜ ಮಡಿವಾಳರ ಮಾತನಾಡಿ, ಈ ಭಾಗದ ಅನೇಕ ಗ್ರಾಮಗಳ ನೂರಾರು ಹೋರಾಟಗಾರರು ಸ್ವಾತಂತ್ರ್ಯಕ್ಕಾಗಿ ತಮ್ಮನ್ನು ತಾವು ಸಮರ್ಪಿಸಿಕೊಂಡಿದ್ದಾರೆ. ಅವರ ತ್ಯಾಗವನ್ನು ಸ್ಮರಿಸುತ್ತಾ ದೇಶಕ್ಕಾಗಿ ನಮ್ಮ ಕೊಡುಗೆ ಏನು ಎಂಬುದನ್ನು ಪ್ರತಿಯೊಬ್ಬರೂ ಚಿಂತಿಸಬೇಕು ಎಂದು ಹೇಳಿದರು.

> ಸ್ವಾತಂತ್ರ್ಯ ನಮಗೆ ಹಕ್ಕುಗಳ ಜತೆಗೆ ಕರ್ತವ್ಯಗಳನ್ನೂ ನೀಡಿದೆ. ದೇಶದ ಸರ್ವತೋಮುಖ ಅಭಿವೃದ್ಧಿಗೆ ಪ್ರತಿಯೊಬ್ಬರೂ ತಮ್ಮ ಜವಾಬ್ದಾರಿಯನ್ನು ಅರಿತು ಕೆಲಸ ಮಾಡಬೇಕು.
> **- ಧನಂಜಯ ಎಂ.**, ತಹಸೀಲ್ದಾರ

ಧ್ವಜಾರೋಹಣದ ಬಳಿಕ ಪೊಲೀಸ್, ಎನ್‌ಸಿಸಿ ಹಾಗೂ ವಿವಿಧ ಶಾಲೆಗಳ ವಿದ್ಯಾರ್ಥಿಗಳಿಂದ ಆಕರ್ಷಕ ಪಥಸಂಚಲನ ನಡೆಯಿತು. ಪಥಸಂಚಲನದ ನೇತೃತ್ವವನ್ನು ಪ್ರೊ. ಪಿಎಸ್‌ಐ ರಮಾಕಾಂತ ಗುಗ್ಗರಿ ವಹಿಸಿದ್ದರು. ವಿವಿಧ ಶಾಲೆಗಳ ವಿದ್ಯಾರ್ಥಿಗಳು, ಬಿ.ಡಿ. ತಟ್ಟಿ ಕಿವುಡ ಮಕ್ಕಳ ಶಾಲೆ ಹಾಗೂ ಅರಳು ವಿಶೇಷಚೇತನ ಮಕ್ಕಳಿಂದ ನಡೆದ ವೇಷಭೂಷಣ ಮತ್ತು ದೇಶಭಕ್ತಿ ಗೀತೆಗಳ ನೃತ್ಯ ಗಮನ ಸೆಳೆಯಿತು. ಸ್ಕೂಲ್ ಚಂದನ ಶಾಲೆಯ ವಿದ್ಯಾರ್ಥಿಗಳ ವಿಶೇಷ ಬ್ಯಾಂಡ್ ಪ್ರದರ್ಶನ ಕಾರ್ಯಕ್ರಮಕ್ಕೆ ಮೆರುಗು ನೀಡಿತು.

ಕಾರ್ಯಕ್ರಮದಲ್ಲಿ ಗ್ರೇಡ್2 ತಹಸೀಲ್ದಾರ ಮಂಜುನಾಥ ಅಮಾಸಿ, ತಾಪಂ ಇಒ ಮಂಜುಳಾ ಹಕಾರಿ, ಪುರಸಭೆ ಮುಖ್ಯಾಧಿಕಾರಿ ಪರಶುರಾಮ ಗುಡದಾರಿ, ಉಪನೋಂದಣಾಧಿಕಾರಿ ಎಸ್.ಕೆ. ಜಲರಡ್ಡಿ, ಪಿಎಸ್‌ಐ ನಾಗರಾಜ ಗಡದ, ಕೃಷಿ ಅಧಿಕಾರಿ ಚಂದ್ರಶೇಖರ ನರಸಮ್ಮನವರ, ನೌಕರರ ಸಂಘದ ಅಧ್ಯಕ್ಷ ಗುರುರಾಜ ಹವಳದ, ಸಿಡಿಪಿಒ ಮೃತ್ಯುಂಜಯ ಜಿ., ಪ್ರಶಾಂತ ಕಿಮಾಯಿ, ರೇಣುಕಾ ಶಿರಹಟ್ಟಿ, ಆರ್.ಬಿ. ಜೋಶಿ, ಬಿ.ಎಂ. ಯರಗುಪ್ಪಿ, ಉಮೇಶ ನೇಕಾರ, ಎನ್.ಎ. ಮುಲ್ಲಾ, ನವೀನ ಅಂಗಡಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಶಿಕ್ಷಕರು, ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ಪಾಲ್ಗೊಂಡಿದ್ದರು.

ಕಂದಾಯ ನಿರೀಕ್ಷಕ ಎಂ.ಎ. ನಧಾಪ್ ಸ್ವಾಗತಿಸಿದರು. ಶಿರಸ್ತೇದಾರ ಜಮೀರ ಮನಿಯಾರ ಹಾಗೂ ಶಿಕ್ಷಣ ಇಲಾಖೆಯ ಸಿಬ್ಬಂದಿ ಕಾರ್ಯಕ್ರಮ ನಿರ್ವಹಿಸಿದರು.

## ತೋಂಟದಾರ್ಯ ಎಂಜಿನಿಯರಿಂಗ್ ಕಾಲೇಜಿನಲ್ಲಿ ಸ್ವಾತಂತ್ರ್ಯೋತ್ಸವ

**ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ಶ್ರೀ ತೋಂಟದ ಸಿದ್ದಲಿಂಗೇಶ್ವರ ಕಲ್ಯಾಣ ಕೇಂದ್ರದ ತೋಂಟದಾರ್ಯ ಎಂಜಿನಿಯರಿಂಗ್ ಕಾಲೇಜಿನಲ್ಲಿ 80ನೇ ಸ್ವಾತಂತ್ರ್ಯೋತ್ಸವವನ್ನು ಸಡಗರ ಹಾಗೂ ಸಂಭ್ರಮದಿಂದ ಆಚರಿಸಲಾಯಿತು.

ಧ್ವಜಾರೋಹಣ ನೆರವೇರಿಸಿ ಮಾತನಾಡಿದ ಕಾಲೇಜಿನ ಪ್ರಾಂಶುಪಾಲ ಡಾ. ಎಂ.ಎಂ. ಆವಟಿ, ಭಾರತವನ್ನು ಅಭಿವೃದ್ಧಿ ಹೊಂದಿದ ರಾಷ್ಟ್ರವನ್ನಾಗಿ ರೂಪಿಸುವತ್ತ ಯುವಕರು ದಾಪುಗಾಲಿಡಬೇಕು. ಸೆಮಿಕಂಡಕ್ಟರ್, ಬಾಹ್ಯಾಕಾಶ, ಇಂಧನ ಭದ್ರತೆ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಕೃತಕ ಬುದ್ಧಿಮತ್ತೆ (ಎಐ) ಕೌಶಲ್ಯಗಳನ್ನು ಪರಿಣಾಮಕಾರಿಯಾಗಿ ಬಳಸಿಕೊಳ್ಳಬೇಕು. ತಂತ್ರಜ್ಞಾನ ಹಾಗೂ ನವೋದ್ಯಮ ಭಾರತದ ಮುಂದಿನ ಬೆಳವಣಿಗೆಯ ಪ್ರಮುಖ ಆಧಾರವಾಗಬೇಕು ಎಂದು ಹೇಳಿದರು.

ಪ್ರಾಧ್ಯಾಪಕರು ವಿದ್ಯಾರ್ಥಿಗಳಿಗೆ ಕೇವಲ ತರಗತಿಯಲ್ಲಿ ಪಾಠ ಬೋಧಿಸುವುದಕ್ಕೆ ಸೀಮಿತವಾಗದೆ, ಮಾರ್ಗದರ್ಶಕರು ಹಾಗೂ ಪ್ರೇರಕರಾಗಿ ಕಾರ್ಯನಿರ್ವಹಿಸಬೇಕು. ವಿದ್ಯಾರ್ಥಿಗಳ ಪ್ರತಿಭೆ ಮತ್ತು ಸಾಮರ್ಥ್ಯವನ್ನು ಗುರುತಿಸಿ, ಅದನ್ನು ಬೆಳೆಸಲು ಅಗತ್ಯವಾದ ಮಾರ್ಗದರ್ಶನ ಹಾಗೂ ಪ್ರೋತ್ಸಾಹ ನೀಡಬೇಕು ಎಂದು ಸಲಹೆ ನೀಡಿದರು.

ಯುವಕರು ರಾಷ್ಟ್ರ ನಿರ್ಮಾಣದ ಪ್ರಮುಖ ಶಕ್ತಿಯಾಗಿ ಗುರುತಿಸಿಕೊಂಡು, ತಂತ್ರಜ್ಞಾನ ಮತ್ತು ನವೋದ್ಯಮದ ಮೂಲಕ ಭಾರತದ ಮುಂದಿನ ಬೆಳವಣಿಗೆಗೆ ಕೊಡುಗೆ ನೀಡಬೇಕು ಎಂದು ಡಾ. ಆವಟಿ ಹೇಳಿದರು. ಉಪಪ್ರಾಂಶುಪಾಲ ಡಾ. ಜಿ.ಡಿ. ರೇವಣಕರ್ ಮಾತನಾಡಿ, ಭಾರತದ ಸ್ವಾತಂತ್ರ್ಯ ಹೋರಾಟದಲ್ಲಿ ಪಾಲ್ಗೊಂಡ ಮಹನೀಯರ ತ್ಯಾಗ ಮತ್ತು ಬಲಿದಾನಗಳು ಅವಿಸ್ಮರಣೀಯ. ಅವರು ನಮಗೆ ನೀಡಿದ ಸ್ವಾತಂತ್ರ್ಯ ಅಮೂಲ್ಯ ಕೊಡುಗೆಯಾಗಿದ್ದು, ಅದನ್ನು ಸಂರಕ್ಷಿಸಿ ಮುಂದಿನ ಪೀಳಿಗೆಗೆ ಹಸ್ತಾಂತರಿಸುವುದು ನಮ್ಮ ಆದ್ಯ ಕರ್ತವ್ಯ ಎಂದರು. ಸ್ವಾತಂತ್ರ್ಯೋತ್ಸವದ ಅಂಗವಾಗಿ ಆಯೋಜಿಸಿದ್ದ ವಿವಿಧ ಸ್ಪರ್ಧೆಗಳಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಬಹುಮಾನ ವಿತರಿಸಲಾಯಿತು. ಬಳಿಕ ವಿದ್ಯಾರ್ಥಿಗಳಿಂದ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆದವು.

ಕಾರ್ಯಕ್ರಮದಲ್ಲಿ ಎಲ್ಲ ವಿಭಾಗಗಳ ಮುಖ್ಯಸ್ಥರು, ಪ್ರಾಧ್ಯಾಪಕರು, ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು. ಕು. ಮಾನ್ಯ ಶೆಟ್ಟಿ ಕಾರ್ಯಕ್ರಮ ನಿರೂಪಿಸಿದರು.



# ಗದಗದಲ್ಲಿ ಕೈಗಾರಿಕಾ ಪಾರ್ಕ್, ಟೆಕ್ಸ್‌ಟೈಲ್ ಪಾರ್ಕ್ ಅನಿವಾರ್ಯ

**ವಿಜಯಸಾಕ್ಷಿ ಸುದ್ದಿ, ಗದಗ**

ಉತ್ತರ ಕರ್ನಾಟಕದ ಕೈಗಾರಿಕಾ ಜಡತ್ವಕ್ಕೆ ಸರ್ಕಾರವನ್ನು ದೂರುತ್ತಾ ಕೂರುವುದರಿಂದ ಪ್ರಯೋಜನವಿಲ್ಲ. ಸ್ಥಳೀಯ ನಾಯಕತ್ವ ಮತ್ತು ವಾಣಿಜ್ಯೋದ್ಯಮಿಗಳು ದೂರದೃಷ್ಟಿಯಿಂದ ಪ್ರಸ್ತಾವನೆ ಸಿದ್ಧಪಡಿಸಿ, ಸರ್ಕಾರದ ಬೆನ್ನತ್ತಿದರೆ ಮಾತ್ರ ಅಭಿವೃದ್ಧಿ ಸಾಧ್ಯ ಎಂದು ಮಾಜಿ ಮುಖ್ಯಮಂತ್ರಿ, ಹಾವೇರಿ-ಗದಗ ಸಂಸದ ಬಸವರಾಜ ಬೊಮ್ಮಾಯಿ ಹೇಳಿದರು. ನಗರದಲ್ಲಿ ಗದಗ ಜಿಲ್ಲಾ ವಾಣಿಜ್ಯೋದ್ಯಮ ಮತ್ತು ಚೇಂಬರ್ ಆಫ್ ಕಾಮರ್ಸ್ ವತಿಯಿಂದ ಆಯೋಜಿಸಿರುವ ಗದಗ ಉತ್ಸವ ಕೈಗಾರಿಕಾ ವಸ್ತು ಪ್ರದರ್ಶನ ಮತ್ತು ಮಾರಾಟ ಮೇಳಕ್ಕೆ ತೆರಳುವ ಮುನ್ನ ಚೇಂಬರ್ ಆಫ್ ಕಾಮರ್ಸ್ ಸಭಾಂಗಣದಲ್ಲಿ ಪದಾಧಿಕಾರಿಗಳ ಸಭೆಯಲ್ಲಿ ಅವರು ಮಾತನಾಡಿದರು.

ಗದಗದ ವಾಣಿಜ್ಯೋದ್ಯಮ ಬೆಳೆಯಬೇಕಾದಷ್ಟು ಬೆಳೆದಿಲ್ಲ. ಹಲವು ವರ್ಷಗಳಿಂದ ಚೇಂಬರ್‌ನ ಸಮಸ್ಯೆಗಳಿಗೆ ಸೂಕ್ತ ಸ್ಪಂದನೆ ಸಿಗದ ಕಾರಣ ಸಮಸ್ಯೆಗಳು ಗುಡ್ಡೆಯಾಗಿ ಉಳಿದಿವೆ. ಗದಗ-ರಾಯಚೂರು ಭಾಗದಲ್ಲಿ ಹತ್ತಿ ಬೆಳೆಯುತ್ತಿದ್ದರೂ ಅದನ್ನು ಕೊಯಮತ್ತೂರಿಗೆ ಕಳುಹಿಸುವ ಪರಿಸ್ಥಿತಿ ಇದೆ. ರಾಯಚೂರಿನಲ್ಲಿ ಲಾಂಗ್ ಸ್ಟೇಪಲ್ ಹತ್ತಿ ಲಭ್ಯವಿದ್ದರೂ ಮಿಲ್‌ಗಳು ಉಳಿಯಲಿಲ್ಲ. ತಂತ್ರಜ್ಞಾನ ಬದಲಾವಣೆಗೆ ಹೊಂದಿಕೊಳ್ಳದಿರುವುದು ಹಾಗೂ ಆರ್ಥಿಕ ವ್ಯವಸ್ಥೆಯ ಕೊರತೆ ಇದಕ್ಕೆ ಕಾರಣ ಎಂದು ಹೇಳಿದರು. ವೈಯಕ್ತಿಕ ಪ್ರಯತ್ನದಿಂದ ಕೈಗಾರಿಕೀಕರಣ ಸಾಧ್ಯವಿಲ್ಲ. ಸರ್ಕಾರ ಕೈಗಾರಿಕಾ ಪಾರ್ಕ್‌ಗೆ ಜಾಗ ಮೀಸಲಿಟ್ಟು ರಿಯಾಯಿತಿ ನೀಡಬೇಕು. ಪಾರ್ಕ್‌ನಲ್ಲಿ ಒಂದು ಅಥವಾ ಎರಡು ದೊಡ್ಡ ಆಂಕರ್ ಕೈಗಾರಿಕೆಗಳು ಬಂದರೆ, ಅವುಗಳ ಸುತ್ತ ಸಣ್ಣ ಮತ್ತು ಸ್ವತಂತ್ರ ಕೈಗಾರಿಕೆಗಳು, ಸಾರಿಗೆ, ಲಾಜಿಸ್ಟಿಕ್ಸ್, ವಸತಿ ಹಾಗೂ ಸ್ಥಳೀಯ ವ್ಯಾಪಾರ-ವಹಿವಾಟು ಸೇರಿದಂತೆ ಇಡೀ ಕೈಗಾರಿಕಾ ವ್ಯವಸ್ಥೆ ಬೆಳೆಯಲಿದೆ ಎಂದರು. ಗದಗ ಮತ್ತು ಹಾವೇರಿ ಜಿಲ್ಲೆಗಳ ಅಭಿವೃದ್ಧಿಗೆ ಎರಡು ಮಹತ್ವದ ಪ್ರಸ್ತಾವನೆಗಳನ್ನು ಕೇಂದ್ರ ಸರ್ಕಾರಕ್ಕೆ ಸಲ್ಲಿಸಿರುವುದಾಗಿ ತಿಳಿಸಿದ ಅವರು, ಹಾವೇರಿ ಜಿಲ್ಲೆಯಲ್ಲಿ ಟೆಕ್ಸ್‌ಟೈಲ್ ಪಾರ್ಕ್ ಹಾಗೂ ನೇಕಾರರಿಗೆ ನೆರವು ಒಳಗೊಂಡ ಹ್ಯಾಂಡ್ಲೂಮ್ ಯೋಜನೆ ರೂಪಿಸಲಾಗುತ್ತಿದೆ. ಇದೇ ಮಾದರಿಯಲ್ಲಿ ಗದಗದಲ್ಲೂ ಬೃಹತ್ ಟೆಕ್ಸ್‌ಟೈಲ್ ಪಾರ್ಕ್ ಸ್ಥಾಪಿಸಲು ಉದ್ದೇಶಿಸಲಾಗಿದೆ ಎಂದರು.

ಈ ಸಂಬಂಧ ಗದಗ ಜಿಲ್ಲಾಧಿಕಾರಿಗಳಿಗೆ 50ರಿಂದ 100 ಎಕರೆ ಜಮೀನು ಗುರುತಿಸಲು ಸೂಚಿಸಲಾಗಿದೆ. ಜಾಗ ದೊರೆತರೆ



5ರಿಂದ 10 ಸಾವಿರ ಜನರಿಗೆ ನೇರ ಉದ್ಯೋಗ ಕಲ್ಪಿಸುವ ಪಾರ್ಕ್ ನಿರ್ಮಿಸಲು ಸಾಧ್ಯವಾಗಲಿದೆ. ರಾಜ್ಯ ಸರ್ಕಾರ ಶೀಘ್ರ ಜಾಗ ಮಂಜೂರು ಮಾಡಿದರೆ, ಡಿಸೆಂಬರ್ ಒಳಗೆ ಕೇಂದ್ರದ ಮಂಜೂರಾತಿ ಪಡೆಯುವುದು ತಮ್ಮ ಮೊದಲ ಆದ್ಯತೆಯಾಗಿದೆ ಎಂದು ಹೇಳಿದರು.

ಗದಗ ಭಾಗದಲ್ಲಿ ಕಾಳು-ಕಡಿ ಬೆಳೆ ಹೆಚ್ಚಿರುವ ಹಿನ್ನೆಲೆಯಲ್ಲಿ ಫುಡ್ ಪ್ರೊಸೆಸಿಂಗ್ ಪಾರ್ಕ್‌ಗೂ ಪ್ರಸ್ತಾವನೆ ಸಲ್ಲಿಸಲಾಗಿದೆ. ಟೆಕ್ಸ್‌ಟೈಲ್ ಪಾರ್ಕ್ ಪ್ರಸ್ತಾವನೆ ಮುಂದುವರಿದಿದ್ದು, ಫುಡ್ ಪ್ರೊಸೆಸಿಂಗ್ ಪಾರ್ಕ್ ಪ್ರಕ್ರಿಯೆ ನಿಧಾನವಾಗಿದೆ. ಎರಡೂ ಯೋಜನೆಗಳನ್ನು ಗಂಭೀರವಾಗಿ ಮುಂದುವರಿಸುವುದಾಗಿ ತಿಳಿಸಿದರು. ಗದಗ ಜಿಲ್ಲಾ ಚೇಂಬರ್ ಆಫ್ ಕಾಮರ್ಸ್ ಅಧ್ಯಕ್ಷ ಶರಣಬಸಪ್ಪ ಗುಡಿಮನಿ ಅವರು ವ್ಯಾಪಾರಸ್ಥರ ಸಮಸ್ಯೆಗಳು ಹಾಗೂ ಚೇಂಬರ್‌ನ ಬೇಡಿಕೆಗಳನ್ನು ಸಂಸದರಿಗೆ ಸಲ್ಲಿಸಿದರು. ಇದಕ್ಕೆ ಸಕಾರಾತ್ಮಕವಾಗಿ ಸ್ಪಂದಿಸಿದ ಬೊಮ್ಮಾಯಿ, ಚೇಂಬರ್‌ಗೆ ಶಾಶ್ವತ ಎಕ್ಸಿಬಿಷನ್ ಸೆಂಟರ್ ನಿರ್ಮಿಸಲು ಎರಡು ಎಕರೆ ಜಮೀನು ಕೊಡಿಸುವುದಾಗಿ ಭರವಸೆ ನೀಡಿದರು. ಜಾಗ ಹುಡುಕುವಂತೆ ಜಿಲ್ಲಾಧಿಕಾರಿಗಳಿಗೆ ಸೂಚಿಸುವುದಾಗಿ ತಿಳಿಸಿದರು.

ಎಕ್ಸಿಬಿಷನ್ ಸೆಂಟರ್‌ನಲ್ಲಿ ವರ್ಷಕ್ಕೆ ಎರಡು-ಮೂರು ಬಾರಿ ಟೆಕ್ಸ್‌ಟೈಲ್, ಹ್ಯಾಂಡ್ಲೂಮ್, ಫರ್ನಿಚರ್ ಸೇರಿದಂತೆ ವಿವಿಧ ವಲಯಗಳ ವಸ್ತು ಪ್ರದರ್ಶನ ಆಯೋಜಿಸಿದರೆ ಸ್ಥಳೀಯ ಉದ್ಯಮಗಳ ಬೆಳವಣಿಗೆಗೆ ನೆರವಾಗಲಿದೆ ಎಂದರು.

ಈ ಎಲ್ಲ ಯೋಜನೆಗಳ ಕುರಿತು ಕೈಗಾರಿಕಾ ಸಚಿವ ಎಂ.ಬಿ. ಪಾಟೀಲ, ಮುಖ್ಯಮಂತ್ರಿ ಹಾಗೂ ಸ್ಥಳೀಯ ನಾಯಕ ಎಚ್.ಕೆ. ಪಾಟೀಲ ಅವರೊಂದಿಗೆ ಚರ್ಚಿಸಿ, ಎಲ್ಲರ ವಿಶ್ವಾಸದೊಂದಿಗೆ ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳೋಣ. ಇದಕ್ಕೆ ವಾಣಿಜ್ಯೋದ್ಯಮಿಗಳ ಸಹಕಾರ ಹಾಗೂ ರಾಜ್ಯ ಸರ್ಕಾರದ ಬೆಂಬಲ ಅತ್ಯಗತ್ಯ ಎಂದು ಮನವಿ ಮಾಡಿದರು. ಈ ಸಂದರ್ಭದಲ್ಲಿ ಉತ್ಸವ ಸಮಿತಿ ಅಧ್ಯಕ್ಷ ಮಧುಸೂಧನ ಪುಣೇಕರ, ಚೇಂಬರ್ ಕಾರ್ಯದರ್ಶಿ ಚನ್ನವೀರಪ್ಪ ಹುಣಶೀಕಟ್ಟಿ ಸೇರಿದಂತೆ ಮಾಜಿ ಅಧ್ಯಕ್ಷರು ಹಾಗೂ ಪದಾಧಿಕಾರಿಗಳು ಉಪಸ್ಥಿತರಿದ್ದರು.

---

### ಸಂಕ್ಷಿಪ್ತ ಸುದ್ದಿಗಳು

## ತಿಮ್ಮಾಪೂರದಲ್ಲಿ ಸ್ವಾತಂತ್ರ್ಯೋತ್ಸವ, ಸಂಗೊಳ್ಳಿ ರಾಯಣ್ಣ ಜಯಂತಿ



**ವಿಜಯಸಾಕ್ಷಿ ಸುದ್ದಿ, ಗದಗ**


ತಾಲೂಕಿನ ತಿಮ್ಮಾಪೂರ ಗ್ರಾಮದಲ್ಲಿ 80ನೇ ಸ್ವಾತಂತ್ರ್ಯೋತ್ಸವ ಹಾಗೂ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಜಯಂತಿಯನ್ನು ವಿಜೃಂಭಣೆಯಿಂದ ಆಚರಿಸಲಾಯಿತು. ಗ್ರಾಮದ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣನ ಪುತ್ಥಳಿ ಮುಂಭಾಗದಲ್ಲಿ ಮಾಜಿ ಸೈನಿಕರಾದ ಈಶಪ್ಪ ತಳಕಲ್ ಹಾಗೂ ಹನುಮಪ್ಪ ಜೋಗಿನ ಧ್ವಜಾರೋಹಣ ನೆರವೇರಿಸಿದರು. ದೇಶಕ್ಕಾಗಿ ಸೇವೆ ಸಲ್ಲಿಸಿದ ಮಾಜಿ ಸೈನಿಕರ ಕೈಯಿಂದ ರಾಷ್ಟ್ರಧ್ವಜ ಹಾರಿಸಲಾಯಿತು. ಈ ಸಂದರ್ಭದಲ್ಲಿ ಕೆವಿಎಸ್ ಆರ್ ಕಾಲೇಜಿನ ಮುಖ್ಯೋಪಾಧ್ಯಾಯ ರಾಮಣ್ಣ ಕುರುಡಗಿ ಮಾತನಾಡಿ, ಸ್ವಾತಂತ್ರ್ಯದ ಮಹತ್ವ ಹಾಗೂ ಸಂಗೊಳ್ಳಿ ರಾಯಣ್ಣನ ತ್ಯಾಗ, ಹೋರಾಟದ ಕುರಿತು ವಿದ್ಯಾರ್ಥಿಗಳಿಗೆ ತಿಳಿಸಿದರು. ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯ ಗದಗ ಜಿಲ್ಲಾಧ್ಯಕ್ಷ ಯಲ್ಲಪ್ಪ ಎಚ್. ಬಾಬರಿ ಮಾತನಾಡಿ, ಇಂದಿನ ಯುವಕರು ಕ್ರಾಂತಿವೀರ ಸಂಗೊಳ್ಳಿ ರಾಯಣ್ಣನ ಧೈರ್ಯ, ದೇಶಭಕ್ತಿ ಹಾಗೂ ತ್ಯಾಗದ ಗುಣಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ದೇಶದ ಪ್ರಗತಿಗೆ ತಮ್ಮದೇ ಆದ ಕೊಡುಗೆ ನೀಡುವ ಮೂಲಕ ನಿಜವಾದ ದೇಶಪ್ರೇಮವನ್ನು ತೋರಿಸಬೇಕು ಎಂದು ಕರೆ ನೀಡಿದರು. ಕಾರ್ಯಕ್ರಮದ ವಿಶೇಷ ಆಕರ್ಷಣೆಯಾಗಿ ಕುಕನೂರು ಪಟ್ಟಣದ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಅಭಿಮಾನಿ ಬಳಗದ ವತಿಯಿಂದ ರಾಯಣ್ಣನ ಪುತ್ಥಳಿಗೆ ಹಾಲಿನ ಅಭಿಷೇಕ ನೆರವೇರಿಸಲಾಯಿತು. ಈ ವೇಳೆ ಭಾರತ ಮಾತಾ ಕಿ ಜೈ, ಸಂಗೊಳ್ಳಿ ರಾಯಣ್ಣ ಕಿ ಜೈ ಎಂಬ ಘೋಷಣೆಗಳು ಮೊಳಗಿದವು. ಬಸವರಾಜ ದೇವರವರ, ಹನುಮಪ್ಪ ಯತ್ನಟ್ಟಿ, ಬಸವರಾಜ ಜೋಗಿನ, ಉದಯ ಗಂಗರಾತ್ರಿ, ಸಿದ್ದಪ್ಪ ಹಾಗಲದ, ಹನುಮಪ್ಪ ಜೋಗಿನ, ರಾಮಣ್ಣ ಖಂಡ್ರೆ, ಮಾರುತಿ ಕಟಗಿ, ಶರಣಪ್ಪ ಜೋಗಿನ ಸೇರಿದಂತೆ ಗ್ರಾಮದ ಹಿರಿಯರು, ಯುವಕರು, ಶಾಲಾ-ಕಾಲೇಜು ವಿದ್ಯಾರ್ಥಿಗಳು, ಶಿಕ್ಷಕರು, ರೈತ ಸಂಘದ ಪದಾಧಿಕಾರಿಗಳು ಹಾಗೂ ಗ್ರಾಮಸ್ಥರು ಪಾಲ್ಗೊಂಡಿದ್ದರು.

ಕಾರ್ಯಕ್ರಮದಲ್ಲಿ ದೇಶಭಕ್ತಿ ಗೀತೆಗಳ ಗಾಯನ ಹಾಗೂ ಸಂಗೊಳ್ಳಿ ರಾಯಣ್ಣನ ಜೀವನ ಮತ್ತು ಹೋರಾಟವನ್ನು ಬಿಂಬಿಸುವ ಪ್ರಾತ್ಯಕ್ಷಿಕೆ ಪ್ರದರ್ಶಿಸಲಾಯಿತು.

---

## ನಿಧನ

### ಶಿವಯ್ಯ ಹಿರೇಮಠ



**ಗದಗ:** ತಾಲೂಕಿನ ನರಸಾಪೂರ ಗ್ರಾಮದ ಮಾರುತಿ ನಗರದ ನಿವಾಸಿ, ನಿವೃತ್ತ ಶಿಕ್ಷಕ ಶಿವಯ್ಯ ಬಸಯ್ಯ ಹಿರೇಮಠ(85) ಶನಿವಾರ ನಿಧನರಾದರು. ಮೃತರು ಪತ್ನಿ, ಪುತ್ರ, ಇಬ್ಬರು ಪುತ್ರಿಯರು, ಅಳಿಯಂದಿರು ಸೇರಿ ಅಪಾರ ಬಂಧು-ಬಳಗವನ್ನು ಅಗಲಿದ್ದಾರೆ.

---

## ಬಸವೇಶ್ವರ ಮಹಾವಿದ್ಯಾಲಯದಲ್ಲಿ ಸ್ವಾತಂತ್ರ್ಯೋತ್ಸವ ಆಚರಣೆ

**ವಿಜಯಸಾಕ್ಷಿ ಸುದ್ದಿ, ಗದಗ**

ಜಗದ್ಗುರು ತೋಂಟದಾರ್ಯ ವಿದ್ಯಾಪೀಠದ ಬಸವೇಶ್ವರ ಕಲಾ, ವಾಣಿಜ್ಯ ಹಾಗೂ ವಿಜ್ಞಾನ ಮಹಾವಿದ್ಯಾಲಯ ಹಾಗೂ ಶ್ರೀ ಸಿದ್ಧೇಶ್ವರ ಪದವಿ ಪೂರ್ವ ಮಹಾವಿದ್ಯಾಲಯದ ಸಹಯೋಗದಲ್ಲಿ 80ನೇ ಸ್ವಾತಂತ್ರ್ಯೋತ್ಸವವನ್ನು ಸಂಭ್ರಮದಿಂದ ಆಚರಿಸಲಾಯಿತು. ಸ್ಥಾನಿಕ ಆಡಳಿತ ಮಂಡಳಿ ಸದಸ್ಯ ಬಲರಾಮ ಬಸವಾ ಧ್ವಜಾರೋಹಣ ನೆರವೇರಿಸಿದರು. ಬಳಿಕ ಮಾತನಾಡಿದ ಬಲರಾಮ ಬಸವಾ, ಮೋಹನ ಅಲ್ಮೇಲಕರ ಹಾಗೂ ಸಿದ್ಧಲಿಂಗಯ್ಯ ಹಿರೇಮಠ, ಅನೇಕ ರಾಷ್ಟ್ರನಾಯಕರ ತ್ಯಾಗ, ಬಲಿದಾನದಿಂದ ದೇಶಕ್ಕೆ ಸ್ವಾತಂತ್ರ್ಯ ದೊರೆತಿದೆ. ಅವರ ತ್ಯಾಗವನ್ನು ಸ್ಮರಿಸುತ್ತಾ ಇಂದಿನ ಯುವಪೀಳಿಗೆ ದೇಶಪ್ರೇಮ ಬೆಳೆಸಿಕೊಂಡು ಉತ್ತಮ ನಾಯಕರಾಗಿ ಹೊರಹೊಮ್ಮಬೇಕು ಎಂದು ಹೇಳಿದರು. ವಿದ್ಯಾರ್ಥಿಗಳು ಉತ್ತಮವಾಗಿ ಅಧ್ಯಯನ ಮಾಡಿ ಉತ್ತಮ ಅಂಕಗಳನ್ನು ಗಳಿಸುವ ಮೂಲಕ ಪೂಜ್ಯ ಲಿಂ. ತೋಂಟದ ಸಿದ್ಧಲಿಂಗ ಶ್ರೀಗಳ ಕೃಪಾಶೀರ್ವಾದಕ್ಕೆ ಪಾತ್ರರಾಗಬೇಕು.

ಕೇವಲ ಸರ್ಕಾರಿ ಉದ್ಯೋಗವನ್ನೇ ಅವಲಂಬಿಸದೆ ಕೃಷಿ ಹಾಗೂ ಕೃಷಿಯೇತರ ಉದ್ಯೋಗ ಕ್ಷೇತ್ರಗಳಲ್ಲೂ ಯುವಜನರು ತಮ್ಮ ಭವಿಷ್ಯ ರೂಪಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು. ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ಪ್ರಾಚಾರ್ಯ ಎಂ.ಎಂ. ಬುರಡಿ ಅವರು, ಎಲ್ಲರಿಗೂ ಸ್ವಾತಂತ್ರ್ಯೋತ್ಸವದ ಶುಭಾಶಯಗಳನ್ನು ತಿಳಿಸಿ, ಯುವಕರು ಉತ್ತಮ ನಾಯಕತ್ವ ಗುಣಗಳನ್ನು ಬೆಳೆಸಿಕೊಳ್ಳಬೇಕು ಎಂದರು. ಪದವಿ ಪೂರ್ವ ಕಾಲೇಜಿನ ಪ್ರಾಚಾರ್ಯ ವಾಯ್.ಎಸ್. ಮತ್ತೂರ ಅವರು ಸ್ವಾತಂತ್ರ್ಯ ದಿನಾಚರಣೆಯ ಮಹತ್ವ ಕುರಿತು ಮಾತನಾಡಿದರು. ವಿವಿಧ ಸ್ಪರ್ಧೆಗಳಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಬಹುಮಾನ ವಿತರಿಸಲಾಯಿತು. ಎರಡು ಕಾಲೇಜುಗಳ ಸಿಬ್ಬಂದಿ ವರ್ಗದವರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು. ಪ್ರೊ. ಎಸ್.ಎಸ್. ಭಜಂತ್ರಿ ಕಾರ್ಯಕ್ರಮ ನಿರೂಪಿಸಿ, ಪ್ರಾಸ್ತಾವಿಕವಾಗಿ ಮಾತನಾಡಿ ವಂದಿಸಿದರು.

---

## ಯುವಜನತೆ ದೇಶದ ಭವಿಷ್ಯ; ವೈಜ್ಞಾನಿಕ ಮನೋಭಾವ ಬೆಳೆಸಿಕೊಳ್ಳಿ



**ವಿಜಯಸಾಕ್ಷಿ ಸುದ್ದಿ, ಡಂಬಳ**

ಇಂದಿನ ಯುವಜನತೆ ದೇಶದ ಭವಿಷ್ಯವಾಗಿದ್ದು, ವಿದ್ಯಾರ್ಥಿಗಳು ಉತ್ತಮ ಶಿಕ್ಷಣದೊಂದಿಗೆ ವೈಜ್ಞಾನಿಕ ಮನೋಭಾವ ಬೆಳೆಸಿಕೊಂಡು, ತಂತ್ರಜ್ಞಾನವನ್ನು ಸದುಪಯೋಗಪಡಿಸಿಕೊಂಡು ಸಮಾಜದ ಅಭಿವೃದ್ಧಿಗೆ ಕೊಡುಗೆ ನೀಡಬೇಕು ಎಂದು ಉಪತಹಶೀಲ್ದಾರ್ ಎಸ್.ಎಸ್. ಬಿಚ್ಚಾಲಿ ಹೇಳಿದರು.

ಡಂಬಳ ಗ್ರಾಮದ ಇಂಗ್ಲಿಷ್ ಮಾಧ್ಯಮ ಉರ್ದು ಶಾಲೆಯಲ್ಲಿ ನಡೆದ 80ನೇ ಸ್ವಾತಂತ್ರ್ಯೋತ್ಸವ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಪಾಲ್ಗೊಂಡು ಅವರು ಮಾತನಾಡಿದರು.

ಜಾತಿ, ಧರ್ಮ, ಭಾಷೆ ಹಾಗೂ ಪ್ರದೇಶದ ಭೇದಗಳನ್ನು ಮೀರಿ ನಾವು ಭಾರತೀಯರು ಎಂಬ ಭಾವನೆಯೊಂದಿಗೆ ಮುನ್ನಡೆಯಬೇಕು. ದೇಶದ ಸಂವಿಧಾನ ನಮಗೆ ಹಕ್ಕುಗಳ ಜತೆಗೆ ಕರ್ತವ್ಯಗಳನ್ನೂ ನೀಡಿದೆ.

ಪ್ರತಿಯೊಬ್ಬ ನಾಗರಿಕರೂ ಕಾನೂನುಗಳನ್ನು ಗೌರವಿಸುವುದು, ಪರಿಸರ ಸಂರಕ್ಷಿಸುವುದು, ಸಾರ್ವಜನಿಕ ಆಸ್ತಿಯನ್ನು ಕಾಪಾಡುವುದು ಹಾಗೂ ಸಮಾಜದಲ್ಲಿ ಶಾಂತಿ, ಸೌಹಾರ್ದತೆ ಬೆಳೆಸುವುದು ತಮ್ಮ ಜವಾಬ್ದಾರಿ ಎಂದು ಅವರು ಹೇಳಿದರು.

ಸಮಾಜದ ಹಿರಿಯರಾದ ಹುಸೇನಸಾಬ ಹೊಸಬಾವಿ ಹಾಗೂ ಸಮಾಜಸೇವಕ ಬುಡ್ನೆಸಾಬ ಅತ್ತಾರ ಮಾತನಾಡಿ, ಸ್ವಾತಂತ್ರ್ಯ ಹೋರಾಟದಲ್ಲಿ ಗದಗ ಜಿಲ್ಲೆಯ ಹೋರಾಟಗಾರರ ಪಾತ್ರ ಮಹತ್ವದ್ದಾಗಿದೆ. ಮುಂಡರಗಿ ಭೀಮರಾಯ, ಹಮ್ಮಿಗೆ ಕೆಂಚನಗೌಡ, ಇಟಗಿಯ ವೀರಭದ್ರಯ್ಯ, ಶಿರೂರು ವೀರಭದ್ರಪ್ಪ, ಶಿವಮೂರ್ತಿಸ್ವಾಮಿ ಅಳವಂಡಿ, ಜನಾರ್ದನರಾಯ ದೇಸಾಯಿ, ಎಲ್.ಕೆ. ಷರೀಫ್, ಬಿಂದು ಮಾಧವರಾವ್, ಕಂಪ್ಲಿಮನಿ, ಬಿ.ಕೆ. ಪ್ರಾಣೇಶಾಚಾರ್ಯ, ಮುರಡಿ ಭೀಮಜ್ಜ ಸೇರಿದಂತೆ ಅನೇಕ ಹೋರಾಟಗಾರರ ತ್ಯಾಗವನ್ನು ಸ್ಮರಿಸಬೇಕು ಎಂದರು.

ಸ್ವಾತಂತ್ರ್ಯ ಹೋರಾಟಗಾರರು ಜಾತಿ, ಮತ, ಪಂಥದ ಭೇದವಿಲ್ಲದೆ ಜನರನ್ನು ಒಗ್ಗೂಡಿಸಿ ಹೋರಾಡಿದರು. ಅವರ ತ್ಯಾಗ, ಹೋರಾಟ ಹಾಗೂ ದೇಶಭಕ್ತಿಯ ಫಲವಾಗಿ ನಮಗೆ ಸ್ವಾತಂತ್ರ್ಯ ದೊರೆತಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಅಂಜುಮನ ಸಮಿತಿ ಅಧ್ಯಕ್ಷ ಬಶೀರಹಮ್ಮದ ತಾಂಬೋಟಿ ಅವರು ಶಾಲೆಯ ಒಂದನೇ ತರಗತಿಗೆ ಪ್ರವೇಶ ಪಡೆದ ವಿದ್ಯಾರ್ಥಿಗಳಿಗೆ ತಲಾ ₹1,000 ವಿತರಿಸಿದರು. ವಿದ್ಯಾರ್ಥಿಗಳಿಂದ ದೇಶಭಕ್ತಿ ಗೀತೆಗಳು ಸೇರಿದಂತೆ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆದವು.

ಕಾರ್ಯಕ್ರಮದಲ್ಲಿ ಎಸ್‌ಡಿಎಂಸಿ ಅಧ್ಯಕ್ಷ ಮಹಬೂಬ ಕಾಸ್ತಾರ, ಅಂಜುಮನ ಅಧ್ಯಕ್ಷ ಬಶೀರಹಮ್ಮದ ತಾಂಬೋಟಿ, ಕಂದಾಯ ಅಧಿಕಾರಿ ಪ್ರಭು ಬಾಗಲಿ, ಮುಖ್ಯೋಪಾಧ್ಯಾಯ ಎಸ್.ಎಂ. ಶೇಖ, ಗ್ರಾಮ ಆಡಳಿತಾಧಿಕಾರಿ ಲಕ್ಷ್ಮಣ ಗುಡಸಲಮನಿ, ಎಂ.ಎಂ. ವಿಭೂತಿ, ಸಾಗರ ಚಿತ್ರಗಾರ, ಮುದಕೇಶ ತಳಗೇರಿ, ಎನ್.ಬಿ. ಶೇಖ, ಎಸ್.ಬಿ. ಕನವಳ್ಳಿ, ಹಸೀನಾ ಬಿ., ಎಸ್‌ಡಿಎಂಸಿ ಸದಸ್ಯರು, ಮಹಿಳೆಯರು ಹಾಗೂ ವಿದ್ಯಾರ್ಥಿಗಳು ಇದ್ದರು.

---



### ಮನೆ ಮನೆಗೆ ರೊಟ್ಟಿ, ಮನ ಮನಕ್ಕೆ ಸಂಬಂಧ | ಆಧುನಿಕತೆಯ ನಡುವೆಯೂ ಜೀವಂತವಾಗಿರುವ ಉತ್ತರ ಕರ್ನಾಟಕದ ರೊಟ್ಟಿ ಪಂಚಮಿ

## ಏ ಎಕ್ಕಾ... ಅತ್ತಿ ರೊಟ್ಟಿ ತಗೊಂಡು ಬಂದೀನಿ, ತಗೋರಿ!

**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಏ ಎಕ್ಕಾ... ಅತ್ತಿ ರೊಟ್ಟಿ ತಗೊಂಡು ಬಂದೀನಿ, ತಗೋರಿ... ಹಬ್ಬದ ದಿನ ಮನೆ ಬಾಗಿಲಿಗೆ ಬಂದು ಆತ್ಮೀಯತೆಯಿಂದ ರೊಟ್ಟಿ ನೀಡುವ ಈ ಮಾತುಗಳು ನರೇಗಲ್ಲ ಪಟ್ಟಣ ಸೇರಿದಂತೆ ಹೋಬಳಿಯ ಗ್ರಾಮೀಣ ಪ್ರದೇಶಗಳಲ್ಲಿ ಶುಕ್ರವಾರ ಕೇಳಿಬಂದವು. ಕೈಯಲ್ಲಿ ರೊಟ್ಟಿ-ಪಲ್ಯದ ಬುತ್ತಿ ಹಿಡಿದು ಮನೆ ಮನೆಗೆ ತೆರಳಿದ ಮಹಿಳೆಯರು, ಮಕ್ಕಳು ಪರಸ್ಪರ ರೊಟ್ಟಿ ವಿನಿಮಯ ಮಾಡಿಕೊಂಡು ರೊಟ್ಟಿ ಪಂಚಮಿ ಹಬ್ಬವನ್ನು ಸಂಭ್ರಮದಿಂದ ಆಚರಿಸಿದರು.

ಉತ್ತರ ಕರ್ನಾಟಕದ ಮಹಿಳೆಯರ ಅಚ್ಚುಮೆಚ್ಚಿನ ಹಬ್ಬವಾದ ರೊಟ್ಟಿ ಪಂಚಮಿ, ಆಧುನಿಕ ಜೀವನಶೈಲಿಯ ನಡುವೆಯೂ ತನ್ನ ಮಣ್ಣಿನ ಸೊಗಡನ್ನು ಕಳೆದುಕೊಂಡಿಲ್ಲ. ಕಳೆದ ಒಂದು ವಾರದಿಂದಲೇ ಹಬ್ಬದ ಸಿದ್ಧತೆಯಲ್ಲಿ ತೊಡಗಿದ್ದ ಮಹಿಳೆಯರು ಶುಕ್ರವಾರ ಮುಂಜಾನೆಯಿಂದಲೇ ವಿವಿಧ ಬಗೆಯ ರೊಟ್ಟಿ, ಚಪಾತಿ, ಪಲ್ಯ ಹಾಗೂ ಸಾಂಪ್ರದಾಯಿಕ ಖಾದ್ಯಗಳನ್ನು ಸಿದ್ಧಪಡಿಸಿ ಬಂಧು-ಬಳಗ ಹಾಗೂ ನೆರೆಹೊರೆಯವರ ಮನೆಗಳಿಗೆ ಕೊಂಡೊಯ್ದು ಹಂಚಿದರು.

ಜೋಳದ ರೊಟ್ಟಿ, ಸಜ್ಜೆ ರೊಟ್ಟಿ, ಎಳ್ಳು ರೊಟ್ಟಿ, ಚಪಾತಿ, ಉಂಡಿ ಸೇರಿದಂತೆ ಹಲವು ಬಗೆಯ ತಿನಿಸುಗಳೊಂದಿಗೆ ಹೆಸರುಕಾಳು, ಮಡಿಕೆಕಾಳು, ಬದನೆಕಾಯಿ, ಹಿಟ್ಟಿನ ಪಲ್ಯ, ಮೆಂತೆಪಲ್ಯ, ಮೂಲಂಗಿ ಸೊಪ್ಪು, ಹಕ್ಕರಕಿ, ಸವತೆಕಾಯಿ, ಗಜ್ಜರಿ ಸೇರಿದಂತೆ ವಿವಿಧ ತರಕಾರಿ ಹಾಗೂ ಸೊಪ್ಪಿನ ಖಾದ್ಯಗಳು ಮನೆಗಳಲ್ಲಿ ಸಿದ್ಧಗೊಂಡಿದ್ದವು. ಮನೆಯ ದೇವರಿಗೆ ನೈವೇದ್ಯ ಅರ್ಪಿಸಿದ ಬಳಿಕ ರೊಟ್ಟಿ-ಪಲ್ಯಗಳನ್ನು ತಟ್ಟೆಗಳಲ್ಲಿ ಸಿಂಗರಿಸಿ ಹಂಚಲಾಯಿತು.

> ಹಿಂದಿನ ಕಾಲದಲ್ಲಿ ರೊಟ್ಟಿ ಪಂಚಮಿ ಎಂದರೆ ಇಡೀ ಊರಿನ ಮನೆ ಮನೆಗೂ ಹೋಗಿ ರೊಟ್ಟಿ ಹಂಚಿಕೊಂಡು ಬರುವ ಸಂಭ್ರಮ ಇತ್ತು. ಕಾಲ ಬದಲಾಗಿದ್ದರೂ ಈ ಸಂಪ್ರದಾಯವನ್ನು ಮುಂದಿನ ಪೀಳಿಗೆಗೆ ಪರಿಚಯಿಸುವ ಉದ್ದೇಶದಿಂದ ನಾವು ಹಬ್ಬ ಆಚರಿಸುತ್ತಿದ್ದೇವೆ.
> – ಹಿರಿಯ ಮಹಿಳೆಯರು

**ತವರು ಮನೆಯಲ್ಲೇ ಹೆಚ್ಚಿದ ಸಂಭ್ರಮ**

ರೊಟ್ಟಿ ಪಂಚಮಿ ಎಂದರೆ ಕೇವಲ ರೊಟ್ಟಿ ಹಂಚುವ ಹಬ್ಬವಲ್ಲ. ಮದುವೆಯಾಗಿ ತವರು ಮನೆಗೆ ಬಂದ ಹೆಣ್ಣುಮಕ್ಕಳು ಸಹೋದರಿಯರು, ಅತ್ತೆ-ಸೊಸೆಯರು ಹಾಗೂ ಬಂಧುಗಳೊಂದಿಗೆ ಸೇರಿ ಅಡುಗೆ ತಯಾರಿಸಿ, ಪರಸ್ಪರ ಮನೆಗಳಿಗೆ ತೆರಳಿ ರೊಟ್ಟಿ ಹಂಚುವುದು ಈ ಹಬ್ಬದ ವಿಶೇಷತೆ.

ಸಮೀಪದ ಜಕ್ಕಲಿ ಗ್ರಾಮದಲ್ಲಿಯೂ ಮಹಿಳೆಯರು ಹಾಗೂ ಮಕ್ಕಳು ಹೊಸ ಉಡುಪು ಧರಿಸಿ ಹಬ್ಬದ ಸಂಭ್ರಮದಲ್ಲಿ ಪಾಲ್ಗೊಂಡರು. ಕೈಯಲ್ಲಿ ರೊಟ್ಟಿ-ಪಲ್ಯದ ಬುತ್ತಿ ಹಿಡಿದು ಮುಂಜಾನೆಯಿಂದಲೇ ಮನೆ ಮನೆಗೆ ತೆರಳಿದ ಮಹಿಳೆಯರ ದೃಶ್ಯ ಗ್ರಾಮೀಣ ಬದುಕಿನ ಆತ್ಮೀಯತೆಯನ್ನು ಬಿಂಬಿಸಿತು.

**ಒಂದು ತಟ್ಟೆ ರೊಟ್ಟಿ... ಹಲವು ಮನೆಗಳ ಬಾಗಿಲು!**

ಮೊಬೈಲ್, ಸಾಮಾಜಿಕ ಜಾಲತಾಣ ಹಾಗೂ ವೇಗದ ಜೀವನದ ನಡುವೆ ನೆರೆಹೊರೆಯವರೊಂದಿಗೆ ನೇರವಾಗಿ ಬೆರೆಯುವ ಸಂದರ್ಭಗಳು ಕಡಿಮೆಯಾಗುತ್ತಿರುವ ಈ ಕಾಲದಲ್ಲಿ ರೊಟ್ಟಿ ಪಂಚಮಿ ಜನರನ್ನು ಮತ್ತೆ ಮನೆಗಳಿಂದ ಹೊರಗೆ ಕರೆತರುತ್ತಿದೆ. ಒಂದು ತಟ್ಟೆ ರೊಟ್ಟಿಯ ನೆಪದಲ್ಲಿ ಹಲವು ಮನೆಗಳ ಬಾಗಿಲು ತಟ್ಟುವ ಮೂಲಕ ಹಳೆಯ ಪರಿಚಯಗಳು ಗಟ್ಟಿಯಾಗುತ್ತಿವೆ; ಹೊಸ ಸಂಬಂಧಗಳೂ ಬೆಸೆಯುತ್ತಿವೆ.

**ಮಕ್ಕಳಿಗೆ ಸಂಸ್ಕೃತಿಯ ಪಾಠ**

ರೊಟ್ಟಿ ಪಂಚಮಿ ಕೇವಲ ಆಹಾರ ಹಂಚಿಕೆಯ ಆಚರಣೆಯಲ್ಲ; ಇದು ಉತ್ತರ ಕರ್ನಾಟಕದ ಆಹಾರ ಪದ್ಧತಿ, ಸಂಸ್ಕೃತಿ ಹಾಗೂ ಗ್ರಾಮೀಣ ಬದುಕಿನ ಸೊಗಡನ್ನು ಮುಂದಿನ ಪೀಳಿಗೆಗೆ ಪರಿಚಯಿಸುವ ಸೇತುವೆಯಾಗಿದೆ. ಅಜ್ಜ-ಅಜ್ಜಿಯರು ಹಾಗೂ ತಾಯಿ-ತಂದೆಯರು ಆಚರಿಸಿಕೊಂಡು ಬಂದ ಸಂಪ್ರದಾಯವನ್ನು ಮಕ್ಕಳು ಕಣ್ಣಾರೆ ನೋಡಿ ಅದರ ಮಹತ್ವ ಅರಿಯುವ ಅವಕಾಶವೂ ಇದರಿಂದ ದೊರೆಯುತ್ತದೆ.

ಗ್ರಾಮದ ಮೆಣಸಗಿಯವರ ಓಣಿಯಲ್ಲಿ ಕೀರ್ತಿ ಮೆಣಸಗಿ, ವೈಷ್ಣವಿ ಹೂಗಾರ, ಲಕ್ಷ್ಮೀ ಮಡಿವಾಳರ, ಸಿದ್ದಲಿಂಗವ್ವ ಅಂಗಡಿ ಸೇರಿದಂತೆ ಅನೇಕ ಮಹಿಳೆಯರು ಹಾಗೂ ಮಕ್ಕಳು ರೊಟ್ಟಿ ಪಂಚಮಿ ಸಂಭ್ರಮದಲ್ಲಿ ಪಾಲ್ಗೊಂಡು, ಪರಸ್ಪರ ರೊಟ್ಟಿ, ಪಲ್ಯ ಹಾಗೂ ವಿವಿಧ ಖಾದ್ಯಗಳನ್ನು ಹಂಚಿಕೊಂಡು ಹಬ್ಬದ ಶುಭಾಶಯ ವಿನಿಮಯ ಮಾಡಿಕೊಂಡರು.

ರೊಟ್ಟಿ ಕೊಟ್ಟರೆ ಸಂಬಂಧ ಬೆಳೆಯುತ್ತದೆ; ಮನೆಯಿಂದ ಮನೆಗೆ ಹೋದರೆ ಮನಸ್ಸುಗಳು ಹತ್ತಿರವಾಗುತ್ತವೆ ಎಂಬ ಸರಳ ಗ್ರಾಮೀಣ ಬದುಕಿನ ಸಂದೇಶವನ್ನು ಸಾರಿದ ರೊಟ್ಟಿ ಪಂಚಮಿ, ಆಧುನಿಕತೆಯ ನಡುವೆಯೂ ಉತ್ತರ ಕರ್ನಾಟಕದ ಮಣ್ಣಿನ ಸೊಗಡು, ಆತ್ಮೀಯತೆ ಹಾಗೂ ಸಂಬಂಧಗಳ ಬೆಸುಗೆಯನ್ನು ಜೀವಂತವಾಗಿರಿಸಿತು.

---

### ಜಕ್ಕಲಿಯಲ್ಲಿ ಮಧ್ಯರಾತ್ರಿ 12ಕ್ಕೆ 80ನೇ ಸ್ವಾತಂತ್ರ್ಯೋತ್ಸವ

## ನಾನೊಬ್ಬ ಭಾರತೀಯ ಎಂಬ ಹೆಮ್ಮೆ ಪ್ರತಿಯೊಬ್ಬರಲ್ಲಿರಲಿ



**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಜಾತಿ, ಧರ್ಮ ಹಾಗೂ ಭೇದಭಾವಗಳನ್ನು ಮೀರಿ ಪ್ರತಿಯೊಬ್ಬರಲ್ಲೂ ನಾನೊಬ್ಬ ಭಾರತೀಯ ಎಂಬ ಹೆಮ್ಮೆ ಮೂಡಬೇಕು. ಭಾರತೀಯತೆ ನಮ್ಮೆಲ್ಲರ ಮೊದಲ ಗುರುತಾಗಬೇಕು ಎಂದು ವಿಶೇಷ ವಕ್ತಾರ ಪ್ರಥಿಕ್ ಕುಂದಗೋಳ ಹೇಳಿದರು.

ಸಮೀಪದ ಜಕ್ಕಲಿ ಗ್ರಾಮದಲ್ಲಿ ಶ್ರೀ ಸ್ವಾಮಿ ವಿವೇಕಾನಂದ ಯುವ ಸೇವಾ ಸಂಘದ ವತಿಯಿಂದ ಆ. 14ರ ಮಧ್ಯರಾತ್ರಿ 12 ಗಂಟೆಗೆ ಆಯೋಜಿಸಿದ್ದ 80ನೇ ಸ್ವಾತಂತ್ರ್ಯೋತ್ಸವದ ವಿಶಿಷ್ಟ ಧ್ವಜಾರೋಹಣ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಸ್ವಾತಂತ್ರ್ಯ ದೊರೆತು ಎಂಟು ದಶಕಗಳು ಕಳೆದರೂ ಜಕ್ಕಲಿ ಗ್ರಾಮದಲ್ಲಿ ಸ್ವಾತಂತ್ರ್ಯ ಹೋರಾಟದ ಕಾಲದಷ್ಟೇ ಉತ್ಸಾಹ ಹಾಗೂ ದೇಶಭಕ್ತಿಯ ವಾತಾವರಣ ಕಂಡುಬರುತ್ತಿರುವುದು ಹೆಮ್ಮೆಯ ಸಂಗತಿ.

ನಾನು ಇರಲಿ, ಇಲ್ಲದಿರಲಿ ನನ್ನ ಭಾರತ ಬೆಳಗುತ್ತಿರಲಿ ಎಂಬ ಧ್ಯೇಯದೊಂದಿಗೆ ಯುವಕರು ನಿರಂತರವಾಗಿ ರಾಷ್ಟ್ರಭಕ್ತಿಯ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತಿರುವುದು ಗ್ರಾಮದ ಸೌಭಾಗ್ಯವಾಗಿದೆ ಎಂದರು.

ದೇಶಭಕ್ತಿ ಎಂದರೆ ಕೇವಲ ಘೋಷಣೆ ಕೂಗುವುದಲ್ಲ. ದೇಶಕ್ಕಾಗಿ ಬದುಕನ್ನೇ ತ್ಯಾಗ ಮಾಡಿದ ಭಗತ್‌ಸಿಂಗ್, ಮದನ್‌ಲಾಲ್ ಧಿಂಗ್ರಾ, ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ, ಸುಭಾಷ್‌ಚಂದ್ರ ಬೋಸ್ ಸೇರಿದಂತೆ ಅನೇಕ ಮಹನೀಯರ ತ್ಯಾಗ, ಹೋರಾಟ ಹಾಗೂ ಆದರ್ಶಗಳನ್ನು ಅರಿತುಕೊಂಡು ದೇಶದ ಒಳಿತಿಗಾಗಿ ಬದುಕುವುದು ನಿಜವಾದ ದೇಶಭಕ್ತಿ ಎಂದು ಹೇಳಿದರು.

ಭಾರತಕ್ಕೆ ಸ್ವಾತಂತ್ರ್ಯ ಬ್ರಿಟಿಷರು ನೀಡಿದ ಭಿಕ್ಷೆಯಲ್ಲ. ಅಸಂಖ್ಯಾತ ಸ್ವಾತಂತ್ರ್ಯ ಹೋರಾಟಗಾರರ ತ್ಯಾಗ, ಬಲಿದಾನ ಹಾಗೂ ಹೋರಾಟದ ಫಲವಾಗಿ ಸ್ವಾತಂತ್ರ್ಯ ದೊರೆತಿದೆ. ಇಂದು ಗಡಿಯಲ್ಲಿ ಸೈನಿಕರು ತಮ್ಮ ಎದೆಯನ್ನು ಗುಂಡಿಗೆ ಒಡ್ಡಿ ದೇಶವನ್ನು ಕಾಯುತ್ತಿದ್ದಾರೆ. ಅವರ ತ್ಯಾಗದಿಂದಲೇ ತ್ರಿವರ್ಣ ಧ್ವಜ ಹೆಮ್ಮೆಯಿಂದ ಹಾರುತ್ತಿದೆ ಎಂದರು.

ಜಕ್ಕಲಿ ಗ್ರಾಮದ ದೇಶಭಕ್ತಿಯ ಕಿಚ್ಚು ಮುಂದೊಂದು ದಿನ ದೆಹಲಿಯವರೆಗೂ ಮೊಳಗುವಂತಾಗಲಿ. ಯುವಕರು ರಾಷ್ಟ್ರ ನಿರ್ಮಾಣದ ಸಂಕಲ್ಪದೊಂದಿಗೆ ಮುನ್ನಡೆಯಬೇಕು ಎಂದು ಪ್ರಥಿಕ್ ಆಶಿಸಿದರು.

ವಿಶೇಷ ಅತಿಥಿಯಾಗಿ ಭಾಗವಹಿಸಿದ್ದ ಕೊಪ್ಪಳ ಜಿಲ್ಲೆಯ ಕುಣಿಕೇರಿ ಗ್ರಾಮದ ಮಕ್ಕಳ ಶಿಕ್ಷಣಕ್ಕಾಗಿ ಎರಡು ಎಕರೆ ಜಮೀನು ಭೂದಾನ ಮಾಡಿದ ಸಮಾಜಸೇವಕಿ ಹುಚ್ಚಮ್ಮ ಚೌದ್ರಿ ಧ್ವಜಾರೋಹಣ ನೆರವೇರಿಸಿದರು. ಬಳಿಕ ಅವರನ್ನು ಗೌರವಿಸಿ ಸನ್ಮಾನಿಸಲಾಯಿತು.

ಇದೇ ಸಂದರ್ಭದಲ್ಲಿ ಮಾಜಿ ಸೈನಿಕರಾದ ಮಲ್ಲಪ್ಪ ಮುಗಳಿ, ಬಸವರಾಜ ಕೋರಿ, ನಿವೃತ್ತ ಗ್ರಾಮ ವಿದ್ಯುತ್ ಪ್ರತಿನಿಧಿ ಮಹೇಶ್ವರಯ್ಯ ಹಿರೇಮಠ ಹಾಗೂ ಯುವ ಸಾಧಕಿಯರಾದ ಪ್ರೀತಿ ಬುಳ್ಳಾ ಮತ್ತು ಸೃಷ್ಟಿ ಮೇಟಿ ಅವರನ್ನು ಗೌರವಿಸಿ ಸನ್ಮಾನಿಸಲಾಯಿತು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವ್ಯವಸಾಯ ಸೇವಾ ಸಹಕಾರಿ ಸಂಘದ ಅಧ್ಯಕ್ಷ ಶಿವನಾಗಪ್ಪ ದೊಡ್ಡಮೇಟಿ ವಹಿಸಿದ್ದರು. ಶಿವರಾಜ ಮುಗಳಿ, ಮುತ್ತಣ್ಣ ಕಡಗದ, ಉಮೇಶ ಮೇಟಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಮಕ್ಕಳಿಂದ ಮನರಂಜನಾ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆದವು. ನ್ಯಾಯವಾದಿ ವಿದ್ಯಾಧರ ಶಿರಗುಂಪಿ ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿದರು. ವಿಶ್ವನಾಥ ಬುಳ್ಳಾ ನಿರೂಪಿಸಿದರು.

### ಮಧ್ಯರಾತ್ರಿ ಮೊಳಗಿದ ದೇಶಭಕ್ತಿಯ ಘೋಷಣೆ

ಮಧ್ಯರಾತ್ರಿ ನಡೆದ ಈ ವಿಶಿಷ್ಟ ಧ್ವಜಾರೋಹಣ ಕಾರ್ಯಕ್ರಮದಲ್ಲಿ ಗ್ರಾಮದ 2 ಸಾವಿರಕ್ಕೂ ಅಧಿಕ ಜನರು ಪಾಲ್ಗೊಂಡು ವಿಶೇಷ ಮೆರುಗು ನೀಡಿದರು. ದೇಶಕ್ಕಾಗಿ ಪ್ರಾಣತ್ಯಾಗ ಮಾಡಿದ ಮಹನೀಯರ ಹೆಸರುಗಳು, ಭಾರತ ಮಾತಾ ಕೀ ಜೈ, ವಂದೇ ಮಾತರಂ ಘೋಷಣೆಗಳು ಮೊಳಗಿದವು. ಮಧ್ಯರಾತ್ರಿಯ ನಿಶ್ಶಬ್ದತೆಯನ್ನು ದೇಶಭಕ್ತಿಯ ಘೋಷಣೆಗಳು ಭೇದಿಸಿದವು. ತ್ರಿವರ್ಣ ಧ್ವಜದ ಬೆಳಕಿನಲ್ಲಿ ಇಡೀ ಜಕ್ಕಲಿ ಗ್ರಾಮವೇ ರಾಷ್ಟ್ರಭಕ್ತಿಯ ಸಂಭ್ರಮದಲ್ಲಿ ಮಿಂದೆದ್ದ ದೃಶ್ಯ ಮನಮೋಹಕವಾಗಿತ್ತು.

---

## ಆರ್‌ಎಂಎಸ್‌ಎ ಪ್ರೌಢಶಾಲೆಯಲ್ಲಿ ಸ್ವಾತಂತ್ರ್ಯೋತ್ಸವ




**ವಿಜಯಸಾಕ್ಷಿ ಸುದ್ದಿ, ಮುಳಗುಂದ**

ಪಟ್ಟಣದ ಆರ್‌ಎಂಎಸ್‌ಎ ಪ್ರೌಢಶಾಲೆಯಲ್ಲಿ 80ನೇ ಸ್ವಾತಂತ್ರ್ಯೋತ್ಸವವನ್ನು ವಿಜೃಂಭಣೆಯಿಂದ ಆಚರಿಸಲಾಯಿತು.

2011ರಲ್ಲಿ ಆರಂಭಗೊಂಡ ಈ ಪ್ರೌಢಶಾಲೆ ಆರಂಭದಲ್ಲಿ ಬೆರಳೆಣಿಕೆಯಷ್ಟು ವಿದ್ಯಾರ್ಥಿಗಳನ್ನು ಹೊಂದಿತ್ತು. ಇದೀಗ ವರ್ಷದಿಂದ ವರ್ಷಕ್ಕೆ ಉತ್ತಮ ಪ್ರವೇಶಾತಿ ಪಡೆಯುತ್ತಿದ್ದು, ಉತ್ತಮ ಫಲಿತಾಂಶ ನೀಡುತ್ತಿದೆ. ಶಾಲೆಯ ಪ್ರಗತಿಯಲ್ಲಿ ಶಿಕ್ಷಕರ ಪರಿಶ್ರಮ ಮಹತ್ವದ ಪಾತ್ರ ವಹಿಸಿದೆ ಎಂದು ಗಣ್ಯರು ಮೆಚ್ಚುಗೆ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಎಸ್‌ಡಿಎಂಸಿ ಅಧ್ಯಕ್ಷ ಮಹಾದೇವಪ್ಪ ಮಾನೇಗಾರ, ಗಣ್ಯರಾದ ಎಸ್.ಸಿ. ಅಮರಶೆಟ್ಟಿ, ಅಶೋಕ ಹುಣಸೀಮರದ, ಬಸವರಾಜ ಹಾರೋಗೇರಿ, ಮಹಾಂತೇಶ ನೀಲಗುಂದ, ಮಹಾದೇವಪ್ಪ ಗಡಾದ, ಪ್ರಭಾರಿ ಮುಖ್ಯಗುರು ಎಸ್.ಎಚ್. ಪೂಜಾರ, ಶಿಕ್ಷಕರಾದ ನೂರ ಅಹ್ಮದ ನದಾಫ, ಬಸವರಾಜ ಗೌರಿಮನಿ, ಮಂಜುನಾಥ ಕಲ್ಯಾಣಮಠ, ಗೀತಾ ಕುಂದರಗಿ, ಗೀತಾ ಪಾಟೀಲ, ಎಸ್.ವಿ. ತಿಮ್ಮಾಪೂರ, ಕವಿತಾ ಬಿನ್ನಾಳ, ಸೌಭಾಗ್ಯ ಕೊಲ್ಲಾರಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಸಂಕ್ಷಿಪ್ತ ಸುದ್ದಿಗಳು

### ಶಿಕ್ಷಣದ ಜತೆಗೆ ಸಂಸ್ಕಾರ, ಮಾನವೀಯತೆ ಬೆಳೆಸುವ ಚಾರ್ವಿ ಫೌಂಡೇಶನ್‌ನ ವಿನೂತನ ಕಾರ್ಯಕ್ರಮ

# ಅಮೃತ ಭೋಜನದೊಂದಿಗೆ ಮಕ್ಕಳ ಮನದಲ್ಲಿ ಮೌಲ್ಯಗಳ ಬೀಜ

**ವಿಜಯಸಾಕ್ಷಿ ಸುದ್ದಿ, ಗದಗ**

ಶ್ರಾವಣ ಮಾಸದ ಅಂಗವಾಗಿ ಚಾರ್ವಿ ಫೌಂಡೇಶನ್ (ರಿ), ನಾಗಸಮುದ್ರ ವತಿಯಿಂದ ಸರ್ಕಾರಿ ಶಾಲಾ ಮಕ್ಕಳಿಗಾಗಿ ಅಮೃತ ಭೋಜನ ಹಾಗೂ ಮೌಲ್ಯಯುತ ಶಿಕ್ಷಣ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು. ಕಾರ್ಯಕ್ರಮದಲ್ಲಿ ಶಾಲಾ ಮಕ್ಕಳಿಗೆ ಸಾತ್ವಿಕ ಹಾಗೂ ಪೌಷ್ಟಿಕ ಆಹಾರ, ಸಿಹಿ, ಹಣ್ಣು ಸೇರಿದಂತೆ ವಿವಿಧ ಆಹಾರ ಪದಾರ್ಥಗಳನ್ನು ವಿತರಿಸಲಾಯಿತು. ಮಕ್ಕಳೊಂದಿಗೆ ಆತ್ಮೀಯವಾಗಿ ಭೋಜನ ಸೇವಿಸುವ ಮೂಲಕ ಸಾಮಾಜಿಕ ಕಾಳಜಿ ಹಾಗೂ ಮಾನವೀಯತೆಯ ಸಂದೇಶ ಸಾರಲಾಯಿತು. ಈ ಸಂದರ್ಭದಲ್ಲಿ ಮಾತನಾಡಿದ ಫೌಂಡೇಶನ್ ಕಾರ್ಯದರ್ಶಿ ಧರ್ಮೇಂದ್ರ ಇಟಗಿ, ಮಕ್ಕಳಿಗೆ ಕೇವಲ ಪಠ್ಯಾಧಾರಿತ ಜ್ಞಾನ ನೀಡುವುದಷ್ಟೇ ಶಿಕ್ಷಣದ ಉದ್ದೇಶವಾಗಬಾರದು. ನೈತಿಕ ಮೌಲ್ಯ, ಸಂಸ್ಕಾರ, ಶಿಸ್ತು, ಸಹಬಾಳ್ವೆ, ಸ್ವಚ್ಛತೆ, ಪರಿಸರ ಪ್ರೀತಿ ಹಾಗೂ ಮಾನವೀಯ ಗುಣಗಳನ್ನು ಬೆಳೆಸುವುದು ಅಗತ್ಯ ಎಂದರು. ಶರಣರ ವಚನಗಳು ಹಾಗೂ ಅವುಗಳಲ್ಲಿನ ಜೀವನ ಮೌಲ್ಯಗಳನ್ನು ಮಕ್ಕಳಿಗೆ ಪರಿಚಯಿಸುವ ಮೂಲಕ ಉತ್ತಮ ವ್ಯಕ್ತಿತ್ವ ರೂಪಿಸಲು ಪ್ರೇರಣೆ ನೀಡಲಾಯಿತು. ಕಾರ್ಯಕ್ರಮ ಉದ್ಘಾಟಿಸಿದ ಕಲಾವಿದ ಬಸವರಾಜ ಈರಣ್ಣ ಮಾತನಾಡಿ, ಇಂದಿನ ಮಕ್ಕಳಿಗೆ ಶಿಕ್ಷಣದ ಜತೆಗೆ ಜನಪದ ಕಲೆ, ಸಂಸ್ಕೃತಿ ಹಾಗೂ ಮೌಲ್ಯಗಳ ಪರಿಚಯವೂ ಅಗತ್ಯ. ಪರಿಸರ ಸಂರಕ್ಷಣೆ ಸೇರಿದಂತೆ ಸಾಮಾಜಿಕ ಜವಾಬ್ದಾರಿಗಳ ಬಗ್ಗೆ ಬಾಲ್ಯದಲ್ಲಿಯೇ ಅರಿವು ಮೂಡಿಸಬೇಕು ಎಂದು ಹೇಳಿದರು. ಮಕ್ಕಳ ಹೊಟ್ಟೆ ತುಂಬಿಸುವುದು ಮಾತ್ರವಲ್ಲ, ಅವರ ಮನಸ್ಸಿನಲ್ಲಿ ಮೌಲ್ಯಗಳ ಬೀಜ ಬಿತ್ತುವುದು ಕೂಡ ಸಮಾಜದ ಜವಾಬ್ದಾರಿ ಎಂಬ ಆಶಯದೊಂದಿಗೆ ನಡೆದ ಕಾರ್ಯಕ್ರಮದಲ್ಲಿ ಶಾಲೆಯ ಪ್ರಧಾನ ಗುರುಗಳಾದ ಶ್ರೀಮತಿ ಆರ್.ಎಚ್. ಗಡಗಿ, ವಿ.ಎನ್. ಬಗಾಡೆ, ಎಂ.ಪಿ. ಗಿಡ್ನಂದಿ, ಹೆಚ್.ಹೆಚ್. ಹಳ್ಳಿಕೇರಿ, ಎಸ್.ಜೆ. ಹಿರೇಮಠ್, ಎಂ.ಬಿ. ಕಣವಿ, ಶ್ರೀಮತಿ ಟಿ.ಎ. ಜೋಶಿ ಸೇರಿದಂತೆ ಶಿಕ್ಷಕರು, ವಿದ್ಯಾರ್ಥಿಗಳು ಹಾಗೂ ಗಣ್ಯರು ಪಾಲ್ಗೊಂಡಿದ್ದರು. ಸ್ವಾಗತ ಹಾಗೂ ನಿರೂಪಣೆಯನ್ನು ಎಂ.ಬಿ. ಕಣವಿ ನೆರವೇರಿಸಿದರು. ಮಕ್ಕಳಿಗೆ ಉತ್ತಮ ಶಿಕ್ಷಣದ ಜತೆಗೆ ಉತ್ತಮ ಸಂಸ್ಕಾರ ನೀಡುವ ಉದ್ದೇಶದಿಂದ ಇಂತಹ ಸಾಮಾಜಿಕ ಹಾಗೂ ಶೈಕ್ಷಣಿಕ ಕಾರ್ಯಕ್ರಮಗಳನ್ನು ನಿರಂತರವಾಗಿ ನಡೆಸುವ ಸಂಕಲ್ಪವನ್ನು ಚಾರ್ವಿ ಫೌಂಡೇಶನ್ ವ್ಯಕ್ತಪಡಿಸಿತು.

# ಹತ್ತಿಯಲ್ಲಿ ಕಾಂಡ ಕೊರೆಯುವ ಮೂತಿ ಹುಳು ಬಾಧೆ: ರೈತರಿಗೆ ನಿರ್ವಹಣಾ ಸಲಹೆ

**ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲೆಯಲ್ಲಿ 45ರಿಂದ 50 ದಿನಗಳ ಹಂತದಲ್ಲಿರುವ ಹತ್ತಿ ಬೆಳೆಗೆ ಕಾಂಡ ಕೊರೆಯುವ ಮೂತಿ ಹುಳುವಿನ ಬಾಧೆ ಕಂಡುಬಂದಿದ್ದು, ರೈತರು ಸೂಕ್ತ ಮುನ್ನೆಚ್ಚರಿಕೆ ಹಾಗೂ ನಿಯಂತ್ರಣ ಕ್ರಮಗಳನ್ನು ಕೈಗೊಳ್ಳುವಂತೆ ಕೃಷಿ ಇಲಾಖೆ ಸಲಹೆ ನೀಡಿದೆ. ಮೂತಿ ಹುಳುವಿನ ನಿಯಂತ್ರಣಕ್ಕಾಗಿ ಹೊಲದ ಸುತ್ತಲೂ ಒಂದು ಸಾಲು ಬೆಂಡೆ ಬೆಳೆಯನ್ನು ಆಕರ್ಷಕ ಬೆಳೆಯಾಗಿ ಬೆಳೆಯಬೇಕು. ಇದರೊಂದಿಗೆ ಕೀಟ ನಿಯಂತ್ರಣಕ್ಕೆ ಪ್ರತಿ ಲೀಟರ್ ನೀರಿಗೆ 2 ಮಿ.ಲೀ. ಪ್ರೊಫೆನೋಫಾಸ್ 50 ಇ.ಸಿ. ಜೊತೆಗೆ 0.5 ಮಿ.ಲೀ. ಡಿಡಿವಿಪಿ ಅಥವಾ 2 ಮಿ.ಲೀ. ಕ್ವಿನಾಲಫಾಸ್ 25 ಇ.ಸಿ. ಬೆರೆಸಿ ಸಿಂಪಡಿಸಬೇಕು ಎಂದು ಸೂಚಿಸಲಾಗಿದೆ. ಬೆಳಗಿನ ಜಾವ ಪ್ರೌಢ ದುಂಬಿಗಳನ್ನು ಕೈಯಿಂದ ಆರಿಸಿ ನಾಶಪಡಿಸುವ ಕ್ರಮವನ್ನೂ ಕೈಗೊಳ್ಳಬೇಕು. ಹತ್ತಿ ಬೆಳೆಯಲ್ಲಿ ಕೀಟಬಾಧೆ ಹೆಚ್ಚಾಗದಂತೆ ರೈತರು ನಿಯಮಿತವಾಗಿ ಹೊಲ ಪರಿಶೀಲಿಸಿ ಸೂಕ್ತ ನಿರ್ವಹಣಾ ಕ್ರಮಗಳನ್ನು ಅನುಸರಿಸಬೇಕು. ಹೆಚ್ಚಿನ ಮಾಹಿತಿಗಾಗಿ ಸಮೀಪದ ರೈತ ಸಂಪರ್ಕ ಕೇಂದ್ರದ ಅಧಿಕಾರಿಗಳನ್ನು ಸಂಪರ್ಕಿಸಬಹುದು ಎಂದು ಕೃಷಿ ಇಲಾಖೆ ತಿಳಿಸಿದೆ.

### ನರಗುಂದದಲ್ಲಿ ಸೆ.15ರವರೆಗೆ ಅಭಿಯಾನ: ಶ್ರೀಧರ್ ಚಿನಗುಂಡಿ

# ಅರ್ಜಿ ಸಲ್ಲಿಸಿದ ದಿನವೇ ಜಾಬ್ ಕಾರ್ಡ್

**ವಿಜಯಸಾಕ್ಷಿ ಸುದ್ದಿ, ನರಗುಂದ**



ಗ್ರಾಮೀಣ ಕುಟುಂಬಗಳಿಗೆ ಹೆಚ್ಚಿನ ಉದ್ಯೋಗಾವಕಾಶ ಕಲ್ಪಿಸುವ ಉದ್ದೇಶದಿಂದ ವಿಕಸಿತ ಭಾರತವ್ಹಿಬಿಜಿರಾಮ್ ಜಿ ಯೋಜನೆಯಡಿ ನರಗುಂದ ತಾಲೂಕಿನ 13 ಗ್ರಾಮ ಪಂಚಾಯಿತಿಗಳಲ್ಲಿ ಆ.15ರಿಂದ ಸೆ.15ರವರೆಗೆ ಜಾಬ್ ಕಾರ್ಡ್ ಮೇಳ ಹಾಗೂ ವಿಶೇಷ ಜಾಗೃತಿ ಅಭಿಯಾನ ಹಮ್ಮಿಕೊಳ್ಳಲಾಗುವುದು ಎಂದು ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಶ್ರೀಧರ್ ಚಿನಗುಂಡಿ ತಿಳಿಸಿದರು.

ತಾಲೂಕು ಪಂಚಾಯಿತಿ ಸಭಾಭವನದಲ್ಲಿ ನಡೆದ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದ ಅವರು, ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಹೆಚ್ಚಿನ ಸಂಖ್ಯೆಯ ಕೂಲಿಕಾರ್ಮಿಕರಿಗೆ ಯೋಜನೆಯಡಿ ಉದ್ಯೋಗ ಕಲ್ಪಿಸುವಂತೆ ಸರ್ಕಾರ ನಿರ್ದೇಶನ ನೀಡಿದೆ. ಈ ಹಿನ್ನೆಲೆಯಲ್ಲಿ ಎಲ್ಲ ಗ್ರಾಮ ಪಂಚಾಯಿತಿಗಳಲ್ಲಿ ಅಗತ್ಯ ಸಿದ್ಧತೆ ಕೈಗೊಳ್ಳಬೇಕು ಎಂದು ಪಿಡಿಒಗಳಿಗೆ ಸೂಚಿಸಿದರು. ಜಾಬ್ ಕಾರ್ಡ್ ಹೊಂದಿರುವ ಕುಟುಂಬಗಳ ಮಾಹಿತಿಯನ್ನು ಪರಿಶೀಲಿಸಿ, ಅಗತ್ಯವಿರುವವರಿಗೆ ಹೊಸ ಜಾಬ್ ಕಾರ್ಡ್ ವಿತರಿಸಬೇಕು. ಜಾಬ್ ಕಾರ್ಡ್ ನವೀಕರಣ, ಇ-ಕೆವೈಸಿ ಪೂರ್ಣಗೊಳಿಸುವಿಕೆ ಹಾಗೂ ಉದ್ಯೋಗದ ಬೇಡಿಕೆ ಸ್ವೀಕರಿಸುವ ಕಾರ್ಯಕ್ಕೆ ಆದ್ಯತೆ ನೀಡಬೇಕು. ಉದ್ಯೋಗಕ್ಕಾಗಿ ಅರ್ಜಿ ಸಲ್ಲಿಸುವ ಕುಟುಂಬಗಳಿಗೆ ನಿಯಮಾನುಸಾರ ಸ್ವೀಕೃತಿ ನೀಡುವ ವ್ಯವಸ್ಥೆ ಕಲ್ಪಿಸಬೇಕು ಎಂದರು.

**ಮನೆ-ಮನೆಗೆ ತೆರಳಿ ಜಾಗೃತಿ:** ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಮನೆ-ಮನೆ ಭೇಟಿ ಮೂಲಕ ಯೋಜನೆಯ ಕುರಿತು ಸಾರ್ವಜನಿಕರಿಗೆ ಮಾಹಿತಿ ನೀಡಬೇಕು. ಗ್ರಾಮಸಭೆ ಹಾಗೂ ಜಾಗೃತಿ ಸಭೆಗಳನ್ನು ನಡೆಸುವುದರ ಜತೆಗೆ ಪೋಸ್ಟರ್, ಬ್ಯಾನರ್‌ಗಳ ಮೂಲಕ ಜಾಬ್ ಕಾರ್ಡ್ ಮೇಳದ ಬಗ್ಗೆ ವ್ಯಾಪಕ ಪ್ರಚಾರ ಕೈಗೊಳ್ಳಬೇಕು ಎಂದು ಸೂಚಿಸಿದರು.

ಕಾರ್ಮಿಕರ ಹಾಜರಾತಿ, ಕಾಮಗಾರಿಗಳ ಪ್ರಗತಿ ಹಾಗೂ ಸಂಬಂಧಿತ ದಾಖಲೆಗಳನ್ನು ಡಿಜಿಟಲ್ ವ್ಯವಸ್ಥೆಯಲ್ಲಿ ನಿರ್ವಹಿಸಬೇಕು. ಅಧಿಕಾರಿಗಳು, ಸಿಬ್ಬಂದಿ ಹಾಗೂ ಸಂಬಂಧಿತ ಕಾರ್ಯಕರ್ತರು ಸಮನ್ವಯದಿಂದ ಕಾರ್ಯನಿರ್ವಹಿಸಿ ಅರ್ಹ ಕುಟುಂಬಗಳಿಗೆ ಯೋಜನೆಯ ಸೌಲಭ್ಯ ತಲುಪಿಸಬೇಕು ಎಂದರು. ಉದ್ಯೋಗದ ಅವಕಾಶವನ್ನು ಅರ್ಹ ಕುಟುಂಬಗಳ ಮನೆಬಾಗಿಲಿಗೆ ತಲುಪಿಸುವುದು ನಮ್ಮ ಮುಖ್ಯ ಉದ್ದೇಶ. ಜಾಬ್ ಕಾರ್ಡ್, ಇ-ಕೆವೈಸಿ ಹಾಗೂ ಉದ್ಯೋಗದ ಬೇಡಿಕೆ ಸಲ್ಲಿಕೆ ಕುರಿತು ಯಾವುದೇ ಮಾಹಿತಿ ಅಗತ್ಯವಿದ್ದರೂ ಸಾರ್ವಜನಿಕರು ತಮ್ಮ ಗ್ರಾಮ ಪಂಚಾಯಿತಿಯನ್ನು ಸಂಪರ್ಕಿಸಬೇಕು. ಯೋಜನೆಯ ಪರಿಣಾಮಕಾರಿ ಅನುಷ್ಠಾನಕ್ಕೆ ಜನರ ಸಹಕಾರ ಅಗತ್ಯ ಎಂದು ಹೇಳಿದರು. ತಾಲೂಕಿನ ಎಲ್ಲ 13 ಗ್ರಾಮ ಪಂಚಾಯಿತಿಗಳ ಕೂಲಿಕಾರ್ಮಿಕರು ಜಾಬ್ ಕಾರ್ಡ್ ಮೇಳದ ಪ್ರಯೋಜನ ಪಡೆದುಕೊಂಡು ವ್ಹಿಬಿಜಿರಾಮ್ ಜಿ ಯೋಜನೆಯಡಿ ಉದ್ಯೋಗ ಪಡೆಯಬೇಕು ಎಂದು ಅವರು ಮನವಿ ಮಾಡಿದರು.

### ಅರ್ಜಿ ಸಲ್ಲಿಸಿದ ದಿನವೇ ಜಾಬ್ ಕಾರ್ಡ್

**ಜಾಬ್ ಕಾರ್ಡ್ ಹೊಂದಿರದ ಕೂಲಿಕಾರ್ಮಿಕರು ಅಭಿಯಾನದ ಸದುಪಯೋಗ ಪಡೆದುಕೊಳ್ಳಬೇಕು. ಅರ್ಹ ಕೂಲಿಕಾರ್ಮಿಕರು ಅಗತ್ಯ ದಾಖಲೆಗಳೊಂದಿಗೆ ಗ್ರಾಮ ಪಂಚಾಯಿತಿಗೆ ಅರ್ಜಿ ಸಲ್ಲಿಸಿದರೆ, ನಿಯಮಾನುಸಾರ ಅರ್ಜಿ ಸಲ್ಲಿಸಿದ ದಿನವೇ ಜಾಬ್ ಕಾರ್ಡ್ ವಿತರಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ಶ್ರೀಧರ್ ಚಿನಗುಂಡಿ ತಿಳಿಸಿದರು.**

### ಶಿಕ್ಷಣ, ಉದ್ಯೋಗ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಅನ್ಯಾಯ | ರೋಸ್ಟರ್ ಬಿಂದು ರದ್ದುಪಡಿಸಲು ರವಿಕಾಂತ ಅಂಗಡಿ ಆಗ್ರಹ

# ಒಳ ಮೀಸಲಾತಿಯಿಂದ ಬಂಜಾರ ಯುವಕರಿಗೆ ಅನ್ಯಾಯ!

**ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ರಾಜ್ಯ ಸರ್ಕಾರ ಜಾರಿಗೆ ತಂದಿರುವ ಒಳ ಮೀಸಲಾತಿ ವ್ಯವಸ್ಥೆಯಲ್ಲಿನ ರೋಸ್ಟರ್ ಬಿಂದುವಿನಿಂದ ಬಂಜಾರ ಸಮುದಾಯದ ಯುವಕರಿಗೆ ಶಿಕ್ಷಣ, ಉದ್ಯೋಗ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಅನ್ಯಾಯವಾಗುತ್ತಿದೆ ಎಂದು ಆರೋಪಿಸಿ ತಾಲೂಕಿನ ಮಜ್ಜೂರ ತಾಂಡಾದ ಯುವಕರು ಆ. 15ರಂದು ಮನವಿ ಸಲ್ಲಿಸಿದರು.

ಒಳ ಮೀಸಲಾತಿ ವ್ಯವಸ್ಥೆಯಲ್ಲಿ ಬಂಜಾರ ಸಮುದಾಯದ ಯುವಕರಿಗೆ ಉಂಟಾಗುತ್ತಿರುವ ಸಮಸ್ಯೆಗಳನ್ನು ಪರಿಶೀಲಿಸಿ, ಅನ್ಯಾಯ ಸರಿಪಡಿಸಬೇಕು. ವಿಶೇಷವಾಗಿ ರೋಸ್ಟರ್ ಬಿಂದುವಿನಿಂದ ಉದ್ಯೋಗ ಹಾಗೂ ಶೈಕ್ಷಣಿಕ ಅವಕಾಶಗಳಲ್ಲಿ ಸಮುದಾಯಕ್ಕೆ ಆಗುತ್ತಿರುವ ತೊಂದರೆ ನಿವಾರಿಸಬೇಕು ಎಂದು ಮನವಿಯಲ್ಲಿ ಆಗ್ರಹಿಸಲಾಗಿದೆ.



ಮನವಿ ಸ್ವೀಕರಿಸಿ ಮಾತನಾಡಿದ ವಕೀಲರು ಹಾಗೂ ಗೋರಸೇನಾ ರಾಜ್ಯಾಧ್ಯಕ್ಷ ರವಿಕಾಂತ ಅಂಗಡಿ, ತಾಂಡಾದ ಯುವಕರು ಸಲ್ಲಿಸಿರುವ ಮನವಿಯಲ್ಲಿನ ಅಂಶಗಳು ಗಂಭೀರವಾಗಿದ್ದು, ಬಂಜಾರ ಸಮುದಾಯದ ವಾಸ್ತವ ಸಮಸ್ಯೆಯನ್ನು ಪ್ರತಿಬಿಂಬಿಸುತ್ತವೆ ಎಂದರು.

ಶಿರಹಟ್ಟಿ ತಾಲೂಕಿನ ತಾಂಡಾ ಯುವಕರು ಸಲ್ಲಿಸಿರುವ ಮನವಿಯ ಅಂಶಗಳು ರಾಜ್ಯದಾದ್ಯಂತ ಇರುವ ಬಂಜಾರ ಸಮುದಾಯದ ಸಮಸ್ಯೆಯ ಪ್ರತಿಬಿಂಬವಾಗಿವೆ. ತಾಂಡಾ ತಾಂಡಾಗಳಿಗೆ ತೆರಳಿ ಜನಜಾಗೃತಿ ಮೂಡಿಸುವ ಮೂಲಕ ಸರ್ಕಾರದ ಗಮನ ಸೆಳೆಯಲಾಗುವುದು ಎಂದು ಅವರು ತಿಳಿಸಿದರು.

ಬಂಜಾರ ಸಮುದಾಯದ ಯುವಕರಿಗೆ ಶಿಕ್ಷಣ ಮತ್ತು ಉದ್ಯೋಗ ಕ್ಷೇತ್ರದಲ್ಲಿ ಸಮಾನ ಅವಕಾಶ ದೊರೆಯುವಂತೆ ಸರ್ಕಾರ ಅಗತ್ಯ ಕ್ರಮ ಕೈಗೊಳ್ಳಬೇಕು. ರೋಸ್ಟರ್ ಬಿಂದುವಿನಿಂದ ಉಂಟಾಗುತ್ತಿರುವ ಸಮಸ್ಯೆಯನ್ನು ಪರಿಶೀಲಿಸಿ, ಸಮುದಾಯಕ್ಕೆ ಆಗುತ್ತಿರುವ ಅನ್ಯಾಯವನ್ನು ಶೀಘ್ರ ಸರಿಪಡಿಸಬೇಕು ಎಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಮಜ್ಜೂರ ತಾಂಡಾದ ಯುವಕರು ಹಾಗೂ ಸಮುದಾಯದ ಮುಖಂಡರು ಉಪಸ್ಥಿತರಿದ್ದರು.

> ಒಳ ಮೀಸಲಾತಿಯಲ್ಲಿನ ರೋಸ್ಟರ್ ಬಿಂದುವಿನ ಪರಿಣಾಮವಾಗಿ ಉದ್ಯೋಗ, ಶಿಕ್ಷಣ ಸೇರಿದಂತೆ ಹಲವು ಕ್ಷೇತ್ರಗಳಲ್ಲಿ ಬಂಜಾರ ಸಮುದಾಯಕ್ಕೆ ಅನ್ಯಾಯವಾಗುತ್ತಿದೆ ಎಂಬುದು ಯುವಕರ ಆತಂಕವಾಗಿದೆ. ರೋಸ್ಟರ್ ಬಿಂದು ಹಠಾವೋ, ಒಳ ಮೀಸಲಾತಿ ಬಚಾವೋ ಎಂಬ ಘೋಷಣೆಯೊಂದಿಗೆ ರಾಜ್ಯ ಹಾಗೂ ಜಿಲ್ಲಾ ಮಟ್ಟದಲ್ಲಿ ಜನಜಾಗೃತಿ ಅಭಿಯಾನ ಹಮ್ಮಿಕೊಳ್ಳಲಾಗುವುದು.
>
> – ರವಿಕಾಂತ ಅಂಗಡಿ, ಗೋರಸೇನಾ ರಾಜ್ಯಾಧ್ಯಕ್ಷ

# ಸ್ವಾತಂತ್ರ್ಯದ ಪರಿಕಲ್ಪನೆ ನೈಜವಾಗಿ ಅನುಷ್ಠಾನವಾಗಲಿ

**ವಿಜಯಸಾಕ್ಷಿ ಸುದ್ದಿ, ಗದಗ**

ಸ್ವಾತಂತ್ರ್ಯದ ಪರಿಕಲ್ಪನೆಯೊಂದಿಗೆ ಭಾರತೀಯ ಸಂಸ್ಕೃತಿಯ ಮೂಲಭೂತ ಆಶಯಗಳನ್ನು ಪರಿಪೂರ್ಣವಾಗಿ ಅರ್ಥೈಸಿಕೊಂಡು, ಗಳಿಸಿದ ಸ್ವಾತಂತ್ರ್ಯವನ್ನು ರಕ್ಷಿಸುವ ಹೊಣೆಗಾರಿಕೆ ಪ್ರತಿಯೊಬ್ಬರ ಮೇಲಿದೆ. ವಿಶ್ವಾದ್ಯಂತ ಭಾರತೀಯ ಸಂಸ್ಕೃತಿ ಹಾಗೂ ಸನಾತನತೆಯನ್ನು ಪ್ರತಿಬಿಂಬಿಸುವ ಮಹತ್ಕಾರ್ಯ ಯುವಶಕ್ತಿಯಿಂದ ಆಗಬೇಕಿದೆ ಎಂದು ಕುಶಾಲ ಒಡೆಯರ್ ಹೇಳಿದರು.

ಸ್ಟುಡೆಂಟ್ಸ್ ಎಜ್ಯುಕೇಶನ್ ಸೊಸೈಟಿಯ ಸನ್ಮಾರ್ಗ ಪದವಿ ಪೂರ್ವ ಕಾಲೇಜಿನಲ್ಲಿ ಹಮ್ಮಿಕೊಂಡಿದ್ದ 80ನೇ ಸ್ವಾತಂತ್ರ್ಯೋತ್ಸವ ಸಮಾರಂಭದಲ್ಲಿ ಮುಖ್ಯ ಅತಿಥಿಯಾಗಿ ಪಾಲ್ಗೊಂಡು ಧ್ವಜಾರೋಹಣ ನೆರವೇರಿಸಿ ಅವರು ಮಾತನಾಡಿದರು.

ದೇಶದ ಸ್ವಾತಂತ್ರ್ಯವನ್ನು ಕಾಪಾಡಿಕೊಳ್ಳುವ ನಿಟ್ಟಿನಲ್ಲಿ ಯುವಜನತೆ ಸದಾ ಜಾಗೃತರಾಗಿರಬೇಕು. ದೇಶಕ್ಕೆ ಎದುರಾಗುವ ಬಾಹ್ಯ ದುಷ್ಟಶಕ್ತಿಗಳ ಬಗ್ಗೆಯೂ ವಿದ್ಯಾರ್ಥಿಗಳು ಎಚ್ಚರದಿಂದ ಇರಬೇಕು ಎಂದು ಕರೆ ನೀಡಿದರು.

ಸ್ಟುಡೆಂಟ್ಸ್ ಎಜ್ಯುಕೇಶನ್ ಸೊಸೈಟಿಯ ಚೇರ್ಮನ್ ಪ್ರೊ. ರಾಜೇಶ ಕುಲಕರ್ಣಿ ಮಾತನಾಡಿದರು.

ಪ್ರೊ. ರೋಹಿತ್ ಒಡೆಯರ್ ಮಾತನಾಡಿ, ಭಾರತದ ಅಗಾಧ ಪ್ರಾಚೀನ ಇತಿಹಾಸ ಹಾಗೂ ಶ್ರೀಮಂತ ಸಂಸ್ಕೃತಿಯನ್ನು ಯುವಪೀಳಿಗೆ ಅರಿತುಕೊಳ್ಳಬೇಕು. ಸ್ವಾತಂತ್ರ್ಯಕ್ಕಾಗಿ ಹುತಾತ್ಮರಾದವರನ್ನು ಸ್ಮರಿಸುವುದರೊಂದಿಗೆ ರಾಷ್ಟ್ರದ ಸಂಸ್ಕೃತಿ ಮತ್ತು ಸಭ್ಯತೆಯನ್ನು ನಿತ್ಯ ಜೀವನದಲ್ಲಿ ಅಳವಡಿಸಿಕೊಳ್ಳಬೇಕಾದ ಅಗತ್ಯವಿದೆ ಎಂದು ಹೇಳಿದರು.

ಸಮಾರಂಭದಲ್ಲಿ ಮಹಾವಿದ್ಯಾಲಯದ ಚೇರ್ಮನ್ ಪ್ರೊ. ರಾಜೇಶ ಕುಲಕರ್ಣಿ, ಪ್ರಾಚಾರ್ಯ ಪ್ರೊ. ಪುನೀತ ದೇಶಪಾಂಡೆ, ಆಡಳಿತಾಧಿಕಾರಿ ಎಂ.ಸಿ. ಹಿರೇಮಠ, ಸಂಸ್ಥೆಯ ನಿರ್ದೇಶಕರಾದ ಪ್ರೊ. ಸೈಯದ್ ಮತೀನ ಮುಲ್ಲಾ, ಪ್ರೊ. ರಾಹುಲ್ ಒಡೆಯರ್, ಮಹಾವಿದ್ಯಾಲಯದ ಬೋಧಕ, ಬೋಧಕೇತರ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಸೇವೆ ಸ್ಮರಿಸಿ ಸಹ ಪ್ರಾಧ್ಯಾಪಕರಿಗೆ ಸನ್ಮಾನ

**ವಿಜಯಸಾಕ್ಷಿ ಸುದ್ದಿ, ಕೊಪ್ಪಳ**



ನಗರದ ಸರಕಾರಿ ಪ್ರಥಮ ದರ್ಜೆ ಕಾಲೇಜಿನ ಅರ್ಥಶಾಸ್ತ್ರ ವಿಭಾಗದ ಮುಖ್ಯಸ್ಥರಾಗಿ ಹಲವು ವರ್ಷಗಳ ಕಾಲ ಸೇವೆ ಸಲ್ಲಿಸಿದ್ದ ಸಹ ಪ್ರಾಧ್ಯಾಪಕಿ ಸಂತೋಷಕುಮಾರಿ ಎನ್. ಅವರು ಇತ್ತೀಚೆಗೆ ಹಿಟ್ನಾಳ ಸರಕಾರಿ ಪ್ರಥಮ ದರ್ಜೆ ಕಾಲೇಜಿಗೆ ವರ್ಗಾವಣೆಗೊಂಡ ಹಿನ್ನೆಲೆಯಲ್ಲಿ ಅರ್ಥಶಾಸ್ತ್ರ ವಿಭಾಗದ ಅತಿಥಿ ಉಪನ್ಯಾಸಕರು ಅವರನ್ನು ಸನ್ಮಾನಿಸಿ ಗೌರವಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಅತಿಥಿ ಉಪನ್ಯಾಸಕರು, ಕಾಲೇಜಿನಲ್ಲಿ ಸಂತೋಷಕುಮಾರಿ ಅವರು ಸಲ್ಲಿಸಿದ ಸೇವೆ, ಸಹಕಾರ ಹಾಗೂ ಮಾರ್ಗದರ್ಶನವನ್ನು ಸ್ಮರಿಸಿದರು. ಅವರ ಮುಂದಿನ ಶೈಕ್ಷಣಿಕ ಸೇವೆಗೆ ಶುಭ ಹಾರೈಸಿದರು. ಕಾರ್ಯಕ್ರಮದಲ್ಲಿ ಅರ್ಥಶಾಸ್ತ್ರ ವಿಭಾಗದ ಅತಿಥಿ ಉಪನ್ಯಾಸಕರಾದ ಡಾ. ಗಿರಿಜಾ ತುರುಮರಿ, ಡಾ. ದೇವೇಂದ್ರ ಸ್ವಾಮಿ, ಡಾ. ಬಸಮ್ಮ, ಸಂತೋಷ ಎಂ., ಹನುಮಂತ ಎಚ್., ಸೋಮಶೇಖರ್ ಡಿ., ಡಾ. ಪರಶುರಾಮ್ ಕೆ., ಈರಪ್ಪ ಸೇರಿದಂತೆ ಇತರರು ಉಪಸ್ಥಿತರಿದ್ದರು.

### ಸ್ವಾತಂತ್ರ್ಯೋತ್ಸವದಲ್ಲಿ ತಹಸೀಲ್ದಾರ್ ಮಹೇಶ ಗಸ್ತೆ ಕರೆ

# ಸಮ ಸಮಾಜ ನಿರ್ಮಾಣವೇ ಸ್ವಾತಂತ್ರ್ಯದ ನಿಜವಾದ ಆಶಯ



**ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ**

ಸ್ವಾತಂತ್ರ್ಯ ಹೋರಾಟಗಾರರ ತ್ಯಾಗ, ಬಲಿದಾನದ ಫಲವಾಗಿ ದೊರೆತ ಸ್ವಾತಂತ್ರ್ಯವನ್ನು ಕೇವಲ ಆಚರಣೆಗೆ ಸೀಮಿತಗೊಳಿಸದೆ, ದೇಶದ ಅಭಿವೃದ್ಧಿ ಹಾಗೂ ಸಮ ಸಮಾಜ ನಿರ್ಮಾಣಕ್ಕೆ ಬಳಸುವುದು ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ ಎಂದು ಹುಬ್ಬಳ್ಳಿ ಶಹರ ತಹಶೀಲ್ದಾರ ಮಹೇಶ ಭಗವಂತ ಗಸ್ತೆ ಹೇಳಿದರು. ನೆಹರು ಕ್ರೀಡಾಂಗಣದಲ್ಲಿ ಹುಬ್ಬಳ್ಳಿ ನಗರ ತಾಲೂಕು ಸ್ವಾತಂತ್ರ್ಯೋತ್ಸವ ಸಮಿತಿ ವತಿಯಿಂದ ಆಯೋಜಿಸಿದ್ದ 80ನೇ ಸ್ವಾತಂತ್ರ್ಯೋತ್ಸವದ ಧ್ವಜಾರೋಹಣ ನೆರವೇರಿಸಿ ಅವರು ಮಾತನಾಡಿದರು.

ಸ್ವಾತಂತ್ರ್ಯ ನಮಗೆ ದೊರೆತ ವರವಲ್ಲ. ಸಾವಿರಾರು ಹೋರಾಟಗಾರರ ತ್ಯಾಗ, ಧೈರ್ಯ ಮತ್ತು ಬಲಿದಾನದ ಫಲವಾಗಿದೆ. ದೇಶದ ಸ್ವಾತಂತ್ರ್ಯಕ್ಕಾಗಿ ಹೋರಾಡಿದ ಮಹನೀಯರನ್ನು ಸ್ಮರಿಸುವುದರ ಜತೆಗೆ ಅವರ ಆಶಯಗಳನ್ನು ಸಾಕಾರಗೊಳಿಸುವ ಹೊಣೆಗಾರಿಕೆ ನಮ್ಮ ಮೇಲಿದೆ ಎಂದರು.

ಇಂದಿನ ಯುವಕರು ದುಶ್ಚಟಗಳಿಂದ ದೂರವಿದ್ದು, ಮೊಬೈಲ್ ಗೀಳನ್ನು ಬಿಟ್ಟು ಪುಸ್ತಕ ಓದುವ ಹವ್ಯಾಸ ಬೆಳೆಸಿಕೊಳ್ಳಬೇಕು.

ತಂದೆ-ತಾಯಿ, ಗುರು-ಹಿರಿಯರನ್ನು ಗೌರವಿಸಿ ದೇಶದ ಅಭಿವೃದ್ಧಿಯಲ್ಲಿ ತಮ್ಮದೇ ಕೊಡುಗೆ ನೀಡಬೇಕು. ಗಡಿಯಲ್ಲಿ ದೇಶ ಕಾಯುತ್ತಿರುವ ಸೈನಿಕರು ಹಾಗೂ ದೇಶದ ಜನರಿಗೆ ಅನ್ನ ನೀಡುತ್ತಿರುವ ರೈತರ ಸೇವೆಯನ್ನು ಸದಾ ಸ್ಮರಿಸಬೇಕು ಎಂದು ಕರೆ ನೀಡಿದರು.

ಸಂವಿಧಾನವು ಪ್ರತಿಯೊಬ್ಬರಿಗೂ ಸಮಾನ ಹಕ್ಕು ಹಾಗೂ ಅವಕಾಶ ಕಲ್ಪಿಸಿದೆ. ಮೇಲು-ಕೀಳು ಎಂಬ ಭೇದ ಮರೆತು ಸಮಾನತೆ, ಸಹಬಾಳ್ವೆ ಮತ್ತು ನೈತಿಕ ಮೌಲ್ಯಗಳ ಆಧಾರದ ಮೇಲೆ ಸಮಾಜ ನಿರ್ಮಿಸುವುದು ನಮ್ಮೆಲ್ಲರ ಕರ್ತವ್ಯವಾಗಿದೆ ಎಂದು ಹೇಳಿದರು.

ಶಾಸಕ ಮಹೇಶ ಟೆಂಗಿನಕಾಯಿ ಮಾತನಾಡಿ, ಹರ್ ಘರ್ ತಿರಂಗಾ ಮೂಲಕ ದೇಶಭಕ್ತಿ ಮೂಡಿಸುವ ಕೆಲಸ ನಡೆಯುತ್ತಿದೆ.

ಯುವಶಕ್ತಿ ದೇಶದ ಅಭಿವೃದ್ಧಿಯ ಪ್ರಮುಖ ಶಕ್ತಿಯಾಗಿದ್ದು, ವಿಕಸಿತ ಭಾರತ 2047ರ ಸಂಕಲ್ಪದೊಂದಿಗೆ ಯುವಜನತೆ ಮುನ್ನಡೆಯಬೇಕು ಎಂದರು.

ಕಾರ್ಯಕ್ರಮದಲ್ಲಿ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆಯಲ್ಲಿ ಉತ್ತಮ ಸೇವೆ ಸಲ್ಲಿಸಿದ ಅಧಿಕಾರಿಗಳನ್ನು ಹಾಗೂ ಸಾಧನೆಗೈದ ವಿದ್ಯಾರ್ಥಿಗಳಾದ ಸಿಮ್ರಾನ್ ನದಾಫ್ ಮತ್ತು ಅರ್ಜುನ್ ಗಾಳಿ ಅವರನ್ನು ಸನ್ಮಾನಿಸಲಾಯಿತು. ಪರೇಡ್ ಕಮಾಂಡರ್ ಆರ್‌ಎಸ್‌ಐ ಜಗದೀಶ ದಳವಾಯಿ ನೇತೃತ್ವದಲ್ಲಿ ಪೊಲೀಸ್ ಇಲಾಖೆ, ಗೃಹರಕ್ಷಕ ದಳ, ಎನ್‌ಸಿಸಿ, ಸ್ಕೌಟ್-ಗೈಡ್ಸ್ ಸೇರಿದಂತೆ 21 ತಂಡಗಳು ಪಥಸಂಚಲನ ನಡೆಸಿದವು. ವಿವಿಧ ಶಾಲೆಗಳ ವಿದ್ಯಾರ್ಥಿಗಳ ಸಾಂಸ್ಕೃತಿಕ ಕಾರ್ಯಕ್ರಮಗಳು ಗಮನ ಸೆಳೆದವು.

ಕಾರ್ಯಕ್ರಮದಲ್ಲಿ ವಿಧಾನ ಪರಿಷತ್ತಿನ ಮಾಜಿ ಸಭಾಪತಿ ಬಸವರಾಜ ಹೊರಟ್ಟಿ, ಶಾಸಕ ಪ್ರದೀಪ್ ಶೆಟ್ಟರ್, ಹುಬ್ಬಳ್ಳಿ ಗ್ರಾಮೀಣ ತಹಶೀಲ್ದಾರ ಜೆ.ಬಿ. ಮಜ್ಜಗಿ, ಗ್ರೇಡ್-2 ತಹಶೀಲ್ದಾರ ಶಿವಾನಂದ ಹೆಬ್ಬಳ್ಳಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಶಿಕ್ಷಕರು, ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

# ವೀರಶೈವ ಪಂಚಮಸಾಲಿ ಸಹಕಾರಿಯಲ್ಲಿ ಸ್ವಾತಂತ್ರ್ಯೋತ್ಸವ ಆಚರಣೆ




**ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ವೀರಶೈವ ಪಂಚಮಸಾಲಿ ಸೌಹಾರ್ದ ಪತ್ತಿನ ಸಹಕಾರಿ ನಿಯಮಿತದ ವತಿಯಿಂದ 80ನೇ ಸ್ವಾತಂತ್ರ್ಯೋತ್ಸವವನ್ನು ಸಂಭ್ರಮದಿಂದ ಆಚರಿಸಲಾಯಿತು.

ಸಹಕಾರಿ ಸಂಘದ ಕಾರ್ಯಾಲಯದ ಆವರಣದಲ್ಲಿ ಶನಿವಾರ ಬೆಳಗ್ಗೆ 8.15ಕ್ಕೆ ನಡೆದ ಕಾರ್ಯಕ್ರಮದಲ್ಲಿ ಸಂಘದ ನಿರ್ದೇಶಕ ಎಸ್.ಎಲ್. ನೀಲಗುಂದ ಧ್ವಜಾರೋಹಣ ನೆರವೇರಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ವ್ಹಿ.ಎಸ್. ಉಪ್ಪಿನ, ಸ್ವಾತಂತ್ರ್ಯೋತ್ಸವದ ಮಹತ್ವ ಹಾಗೂ ದೇಶದ ಸ್ವಾತಂತ್ರ್ಯಕ್ಕಾಗಿ ಹೋರಾಡಿದ ಮಹನೀಯರ ತ್ಯಾಗ, ಬಲಿದಾನವನ್ನು ಸ್ಮರಿಸಿದರು. ದೇಶದ ಅಭಿವೃದ್ಧಿಗೆ ಪ್ರತಿಯೊಬ್ಬರೂ ತಮ್ಮದೇ ಆದ ಕೊಡುಗೆ ನೀಡಬೇಕು ಎಂದು ಕರೆ ನೀಡಿದರು. ಕಾರ್ಯಕ್ರಮದಲ್ಲಿ ಸಹಕಾರಿ ಸಂಘದ ವ್ಯವಸ್ಥಾಪಕ ವಿರೇಶ ಸಿ. ಕರಡಿ, ಸಹಾಯಕ ಪರಪ್ಪ ವ್ಹಿ. ಬಳಿಗೇರ, ಪಿಗ್ಮಿ ಸಂಗ್ರಹಕರಾದ ರಮೇಶ ಪಿ. ಅಣ್ಣೀಗೇರಿ, ಆಯ್.ಜೆ. ಶಿರೂರ ಹಾಗೂ ಸಹಕಾರಿ ಸಂಘದ ಸದಸ್ಯರು ಉಪಸ್ಥಿತರಿದ್ದರು.

# ದೇಶ ಕಟ್ಟುವ ಕಾರ್ಯದಲ್ಲಿ ವಿದ್ಯಾರ್ಥಿಗಳು ಕೈಜೋಡಿಸಲಿ



**ವಿಜಯಸಾಕ್ಷಿ ಸುದ್ದಿ, ಬೆಟಗೇರಿ**

ನಗರದ ಶ್ರೀ ಮಹಾರಾಣಾ ಪ್ರತಾಪಸಿಂಹ ಶಿಕ್ಷಣ ಸಂಸ್ಥೆಯಲ್ಲಿ 80ನೇ ಸ್ವಾತಂತ್ರ್ಯೋತ್ಸವವನ್ನು ಸಂಭ್ರಮದಿಂದ ಆಚರಿಸಲಾಯಿತು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಸಿದ್ದಪ್ಪ ಹರಿಜನ್ ಮಾತನಾಡಿದರು. ಸಂಸ್ಥೆಯ ಸಂಸ್ಥಾಪಕ ಗಣೇಶಸಿಂಗ್ ಬ್ಯಾಳಿ ಧ್ವಜಾರೋಹಣ ನೆರವೇರಿಸಿ ಮಾತನಾಡಿ, ವಿದ್ಯಾರ್ಥಿಗಳು ದೇಶ ಹಾಗೂ ನಾಡು ಕಟ್ಟುವ ಕಾರ್ಯದಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳಬೇಕು. ಇಂದಿನ ಸ್ಪರ್ಧಾತ್ಮಕ ಶಿಕ್ಷಣ ವ್ಯವಸ್ಥೆಯಲ್ಲಿ ಉತ್ತಮ ಅಂಕಗಳನ್ನು ಗಳಿಸಲು ಶ್ರಮಿಸಬೇಕು ಎಂದು ಕರೆ ನೀಡಿದರು.

ಸ್ವಾತಂತ್ರ್ಯೋತ್ಸವದ ಅಂಗವಾಗಿ ವಿದ್ಯಾರ್ಥಿಗಳಿಂದ ಮಹನೀಯರಿಗೆ ಮಾಲಾರ್ಪಣೆ ನೆರವೇರಿಸಲಾಯಿತು. ಕಳೆದ ಸಾಲಿನ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಪ್ರಥಮ ಸ್ಥಾನ ಪಡೆದ ವಿದ್ಯಾರ್ಥಿನಿ ಕುಮಾರಿ ಹಡಪದ ಅವರನ್ನು ಸನ್ಮಾನಿಸಲಾಯಿತು. ಭಾರತೀಯ ಸೇನೆಯಲ್ಲಿ ಸೇವೆ ಸಲ್ಲಿಸುತ್ತಿದ್ದಾಗ ವೀರಮರಣ ಹೊಂದಿದ ಯೋಧ ಎಚ್.ಎಫ್. ಸೋಮನಕಟ್ಟಿ ಅವರ ಸ್ಮರಣಾರ್ಥ ಅವರ ಕುಟುಂಬದವರು ವಿದ್ಯಾರ್ಥಿನಿಗೆ ₹3,000 ನಗದು ಬಹುಮಾನ ಹಾಗೂ ಪ್ರಶಸ್ತಿ ಪತ್ರ ನೀಡಿ ಗೌರವಿಸಿದರು.

ಕಾರ್ಯಕ್ರಮದ ಆರಂಭದಲ್ಲಿ ವಂದೇ ಮಾತರಂ ಹಾಗೂ ರಾಷ್ಟ್ರಗೀತೆ ಗಾಯನ ನಡೆಯಿತು. ಪ್ರಾಚಾರ್ಯ ಎಸ್.ಎಂ. ಉಳ್ಳಾಗಡ್ಡಿ ಸ್ವಾಗತಿಸಿದರು. ಮುಖ್ಯಾಧ್ಯಾಪಕ ಎಸ್.ಎಸ್. ಬಡಿಗೇರ ವಂದಿಸಿದರು. ಡಿ.ಎಸ್. ನಾಯಕ ಕಾರ್ಯಕ್ರಮ ನಿರೂಪಿಸಿದರು. ಈ ಸಂದರ್ಭದಲ್ಲಿ ಎಸ್.ಆರ್. ವಾಲ್ಮೀಕಿ, ಎಸ್.ವಿ. ಹಿರೇಮಠ, ಎಸ್.ಬಿ. ಚೇಗರಡ್ಡಿ, ಎಚ್.ಎಸ್. ಬ್ಯಾಳಿ, ಕವಿತಾ ಮಡಿರ್ಗಾ, ಐ.ಎಸ್. ಅಂಗಡಿ, ಎಸ್.ಬಿ. ಗೌಡರ, ಆರ್.ಆರ್. ಮಿಟಾಡೆ ಸೇರಿದಂತೆ ಶಿಕ್ಷಕರು, ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# 80ನೇ ಸ್ವಾತಂತ್ರ್ಯೋತ್ಸವ: ಚರಿತ್ರೆಯ ಸುವರ್ಣ ಹೆಜ್ಜೆ



**ವಿಜಯಸಾಕ್ಷಿ ಸುದ್ದಿ, ಹುಲಕೋಟಿ**

ಸ್ವಾತಂತ್ರ್ಯದ ಇತಿಹಾಸವನ್ನು ತಿಳಿದುಕೊಳ್ಳುವುದು ಕೇವಲ ಭೂತಕಾಲವನ್ನು ನೆನಪಿಸಿಕೊಳ್ಳುವುದಕ್ಕೆ ಸೀಮಿತವಾಗದೆ, ಉತ್ತಮ ಭವಿಷ್ಯ ನಿರ್ಮಾಣಕ್ಕೆ ಪ್ರೇರಣೆಯಾಗಬೇಕು.

ಯುವಶಕ್ತಿ ಸಕಾರಾತ್ಮಕವಾಗಿ ಸಂಘಟಿತವಾದಾಗ ದೇಶದ ಅಭಿವೃದ್ಧಿಗೆ ಹೊಸ ದಿಕ್ಕು ದೊರೆಯುತ್ತದೆ ಎಂದು ಶ್ರೀ ಕೆ.ಎಚ್. ಪಾಟೀಲ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲ ಡಾ. ಅಪ್ಪಣ್ಣ ಹಂಜೆ ಹೇಳಿದರು.

ಹುಲಕೋಟಿಯ ಶ್ರೀ ಕೆ.ಎಚ್. ಪಾಟೀಲ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ 80ನೇ ಸ್ವಾತಂತ್ರ್ಯೋತ್ಸವದ ಅಂಗವಾಗಿ ಧ್ವಜಾರೋಹಣ ನೆರವೇರಿಸಿ ಅವರು ಮಾತನಾಡಿದರು.

ಸ್ವಾತಂತ್ರ್ಯವೆಂಬುದು ಕೇವಲ ಸಂಭ್ರಮಿಸುವ ದಿನವಲ್ಲ, ಅನೇಕ ಮಹನೀಯರ ತ್ಯಾಗ, ಹೋರಾಟ ಹಾಗೂ ಬಲಿದಾನದ ಫಲವಾಗಿ ದೇಶಕ್ಕೆ ಸ್ವಾತಂತ್ರ್ಯ ದೊರೆತಿದೆ. ಇದರ ಮೌಲ್ಯವನ್ನು ಯುವಕರು ಅರಿತುಕೊಂಡು, ರಾಷ್ಟ್ರದ ಪ್ರಗತಿಗೆ ತಮ್ಮದೇ ಆದ ಕೊಡುಗೆ ನೀಡಬೇಕು ಎಂದು ಕರೆ ನೀಡಿದರು.

ಪ್ರಾಸ್ತಾವಿಕವಾಗಿ ಮಾತನಾಡಿದ ರಾಜ್ಯಶಾಸ್ತ್ರ ಪ್ರಾಧ್ಯಾಪಕ ಹಾಗೂ ಹೊಸ ದಿಗಂತ ಕಾರ್ಯಕ್ರಮದ ಸಂಯೋಜಕ ಹುಸೇನಭಾಷಾ, ಸ್ವಾತಂತ್ರ್ಯ ಹೋರಾಟದ ಇತಿಹಾಸವನ್ನು ಯುವಕರು ತಿಳಿದುಕೊಳ್ಳುವುದು ಅಗತ್ಯ. ಸ್ವಾತಂತ್ರ್ಯದಿಂದ ದೊರೆತ ಹಕ್ಕುಗಳ ಜತೆಗೆ ದೇಶದತ್ತ ಇರುವ ಕರ್ತವ್ಯ ಮತ್ತು ಹೊಣೆಗಾರಿಕೆಗಳನ್ನೂ ಅರಿತುಕೊಳ್ಳಬೇಕು ಎಂದರು.

ಅರ್ಥಶಾಸ್ತ್ರ ಪ್ರಾಧ್ಯಾಪಕ ಹಾಗೂ ಕ್ರೀಡಾ ವಿಭಾಗದ ಸಂಯೋಜಕ ಮಹಾಂತೇಶ ಮಾತನಾಡಿ, ಇಂದಿನ ಯುವಕರು ಶಿಕ್ಷಣ, ವಿಜ್ಞಾನ, ತಂತ್ರಜ್ಞಾನ, ಕ್ರೀಡೆ ಹಾಗೂ ಉದ್ಯಮಶೀಲತೆ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡುವ ಮೂಲಕ ದೇಶದ ಭವಿಷ್ಯ ರೂಪಿಸಬೇಕು. ಸಂವಿಧಾನದ ಆಶಯಗಳನ್ನು ಗೌರವಿಸಿ, ಪ್ರಜಾಪ್ರಭುತ್ವದ ಮೌಲ್ಯಗಳನ್ನು ಎತ್ತಿಹಿಡಿಯುವುದರೊಂದಿಗೆ ಸಾಮಾಜಿಕ ಸಾಮರಸ್ಯ, ದೇಶಪ್ರೇಮ ಹಾಗೂ ಮಾನವೀಯತೆಯನ್ನು ಬೆಳೆಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ರಾಷ್ಟ್ರಗೀತೆಯೊಂದಿಗೆ ಆರಂಭವಾದ ಕಾರ್ಯಕ್ರಮದಲ್ಲಿ ಕನ್ನಡ ಪ್ರಾಧ್ಯಾಪಕ ಹಾಗೂ ಸಾಂಸ್ಕೃತಿಕ ವಿಭಾಗದ ಸಂಯೋಜಕ ರಮೇಶ ಹುಲಕುಂದ ಸ್ವಾಗತಿಸಿದರು. ಇಂಗ್ಲಿಷ್ ಪ್ರಾಧ್ಯಾಪಕ ಹಾಗೂ ಎನ್‌ಎಸ್‌ಎಸ್ ಕಾರ್ಯಕ್ರಮ ಅಧಿಕಾರಿ ವಿಜಯಕುಮಾರ ಎಸ್. ವಂದನಾರ್ಪಣೆ ಸಲ್ಲಿಸಿದರು. ಬೋಧಕ, ಬೋಧಕೇತರ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka
Printed at : Sai Printing Press, Near Joda Maruti Temple, Gadag-582101, Dist : Gadag- Karnataka